ಸಂಪುಟ: 05 ಸಂಚಿಕೆ: 358 ಪುಟಗಳು: 08 ಗುರುವಾರ 12 ಮಾರ್ಚ್ 2026
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail. com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**

ಮೊದಲು ಆಳಾಗುವುದನ್ನು ಕಲಿಯಿರಿ, ಆಗ ನಾಯಕನ ಅರ್ಹತೆ ತಾನಾಗಿಯೇ ಬರುತ್ತದೆ.



# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ



## ವಿನ್ಯಾಸಗಾರರು ಬೇಕಾಗಿದ್ದಾರೆ

ಪೇಜ್ ಮೇಕರ್, ಇನ್ ಡಿಸೈನರ್, ಕನ್ನಡ ಟೈಪ್ ಮಾಡಬಲ್ಲವರು. ಬೆಂಗಳೂರಿನಲ್ಲಿ ವಾಸವಿರುವ ಬೆಂಗಳೂರು ಕಚೇರಿಯಲ್ಲಿ ಕೆಲಸ ಮಾಡಲು ಇಚ್ಚಿಸುವ (4 ಮಂದಿ) ಪತ್ರಿಕೋದ್ಯಮದಲ್ಲಿ ತೀವ್ರ ಆಸಕ್ತಿ, ಕನ್ನಡ ಭಾಷೆಯ ಮೇಲೆ ಹಿಡಿತ, ಸಾಮಾನ್ಯ ಜ್ಞಾನ, ಓದುವ ಹವ್ಯಾಸ ಹಾಗೂ ಉತ್ಸಾಹ ಕಾತುರವಿರುವ ಆಸಕ್ತರಿಗೆ ನಿರ್ದಿಷ್ಟ ಪದವಿಯ ಅಗತ್ಯವಿಲ್ಲ. ವಯೋಮಿತಿ ಗರಿಷ್ಠ 25 ವರ್ಷ.




ಆಸಕ್ತರು ಕೂಡಲೇ ಈ ಕೆಳಗಿನ ವಿಳಾಸಕ್ಕೆ ತಮ್ಮ ಪೂರ್ಣ ವಿವರಗಳುಳ್ಳ ಅರ್ಜಿ ಸಲ್ಲಿಸಿ ಅಥವಾ ಮುಖತಃ ಭೇಟಿ ನೀಡಿ.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ
**9448225696**

ಉದಯ ವಾಹಿನಿ

#: 1230 'JAYAMAHAL 13th cross, 2nd phase, Girinagar, Bangalore-560085. (Near to bangalore one park, opposite mandya medical)
udayavahininews@gmail.com


## ಎಲ್‌ಪಿಜಿ ಪೂರೈಕೆಯಲ್ಲಿ ವ್ಯತ್ಯಯ ನಿಗದಿಯಂತೆ ಗೃಹ ಬಳಕೆಯ ಎಲ್‌ಪಿಜಿ ಪೂರೈಕೆಗೆ ಬದ್ಧ



"ರಾಜ್ಯದ ಹಲವು ದೇವಸ್ಥಾನಗಳಲ್ಲಿ ಹಾಗೂ ಧಾರ್ಮಿಕ ಕೇಂದ್ರಗಳಲ್ಲೂ ಇಂತಹ ಸಮಸ್ಯೆ ಎದುರಾಗುವ ಆತಂಕ ಇದೆ. ಈ ನಿಟ್ಟಿನಲ್ಲಿ ಸರ್ಕಾರ ಏನು ಕ್ರಮ ಕೈಗೊಳ್ಳಲಿದೆ ಎಂಬುವುದು ಸಾಕಷ್ಟು ಕುತೂಹಲಕ್ಕೆ ಕಾರಣವಾಗಿದೆ. ಸದ್ಯಕ್ಕೆ ಅಡುಗೆ ಅನಿಲಕ್ಕೆ ಅಭಾವ ಆಗದು.

-ಕೆ ಎಚ್ ಮುನಿಯಪ್ಪ,
ಆಹಾರ ಮತ್ತು ನಾಗರಿಕ ಪೂರೈಕೆ ಇಲಾಖೆ ಸಚಿವ



**ವಿಧಾನಸಭೆಯಲ್ಲಿ ವಾಣಿಜ್ಯ ಎಲ್‌ಪಿಜಿ ಕೊರತೆ ತೀವ್ರ ಸದ್ದುಗದ್ದಲಕ್ಕೆ ಕಾರಣವಾಯಿತು. ಆಡಳಿತ ಪಕ್ಷ , ವಿಪಕ್ಷಗಳ ನಡುವೆ ವಾಕ್ಸಮರಕ್ಕೆ ಸಾಕ್ಷಿಯಾಯಿತು. ಶೂನ್ಯವೇಳೆಯಲ್ಲಿ LPG ಸಮಸ್ಯೆ ಸಂಬಂಧಿಸಿದಂತೆ ಕುಣಿಗಲ್ ಶಾಸಕ ರಂಗನಾಥ್ ಗಮನ ಸೆಳೆದರು. 900 ರೂ. ಇದ್ದ ಸಿಲಿಂಡರ್‌ಗೆ 1,800 ರೂ. ಕೊಡಬೇಕಿದೆ. ಸಿಲಿಂಡರ್ ಅಭಾವ ಪರಿಹರಿಸಬೇಕು. ಇದಕ್ಕೆ ಕಾರಣ ಯಾರು, ಯಾರು ಬಗೆಹರಿಸಬೇಕು. ಮೋದಿ ಸರ್ಕಾರದ ದುರ್ಬಲ ವಿದೇಶಾಂಗ ನೀತಿ ಇದಕ್ಕೆ ಕಾರಣ ಅಂತ ಆರೋಪಿಸಿದರು. ಮೋದಿ ಹೆಸರು ಹೇಳುತ್ತಿದ್ದಂತೆ ಸದನದಲ್ಲಿ ಗದ್ದಲ ಉಂಟಾಯಿತು. ಬಿಜೆಪಿ ಸದಸ್ಯರು ರಂಗನಾಥ್ ವಿರುದ್ಧ ಮುಗಿಬಿದ್ದರು. ಈ ವೇಳೆ, ವಿಪಕ್ಷಗಳ ಮೇಲೆ ತಿರುಗಿ ಬಿದ್ದ ಸಚಿವ ಪ್ರಿಯಾಂಕ್ ಖರ್ಗೆ, ಆರ್ಥಿಕ ನೀತಿ ಏನಾಗಿದೆ? ವಿದೇಶಾಂಗ ನೀತಿ ಏನಾಗಿದೆ? ಮೋದಿ ಅವರು ಎಲ್ಲಿದ್ದಾರೆ? ಏನಾದ್ರೂ ಬಾಯಿ ಬಿಟ್ಟಿದ್ದಾರಾ? ಇಂಡಿಯಾ ಟೀಮ್‌ಗೆ ವಿಶ್ ಮಾಡ್ತಾರೆ, ಈ ವಿಚಾರ ಯಾಕೆ ಮಾತಾಡ್ತಿಲ್ಲ? ಎಸ್ಮಾ ಯಾಕೆ ಜಾರಿ ತಂದಿದ್ದೀರಿ? ಎಂದು ವಾಗ್ದಾಳಿ ನಡೆಸಿದರು.**

ಗ್ಯಾಸ್ ಸ್ಟೋರೇಜ್ ಮಾಡಿದರೆ ಕ್ರಮ

# ಗ್ಯಾಸ್ ಟ್ರಬಲ್ ಸದನದಲ್ಲಿ ಕೋಲಾಹಲ

ಆಡಳಿತ, ವಿಪಕ್ಷಗಳ ಸದಸ್ಯರ ನಡುವೆ ವಾಕ್ಸಮರ

ಅಮೆರಿಕದ ಅತಿದೊಡ್ಡ ರಾಡಾರ್ ನಾಶ; ಶತಕೋಟಿ ಡಾಲರ್ ನಷ್ಟ

• ಉದಯವಾಹಿನಿ, ಬೆಂಗಳೂರು

ವಿಧಾನಸಭೆಯಲ್ಲಿ ವಾಣಿಜ್ಯ ಎಲ್‌ಪಿಜಿ ಕೊರತೆ ತೀವ್ರ ಸದ್ದುಗದ್ದಲಕ್ಕೆ ಕಾರಣವಾಯಿತು. ಆಡಳಿತ ಪಕ್ಷ , ವಿಪಕ್ಷಗಳ ನಡುವೆ ವಾಕ್ಸಮರಕ್ಕೆ ಸಾಕ್ಷಿಯಾಯಿತು. ಶೂನ್ಯವೇಳೆಯಲ್ಲಿ ಎಲ್‌ಪಿಜಿ ಸಮಸ್ಯೆ ಸಂಬಂಧಿಸಿದಂತೆ ಕುಣಿಗಲ್ ಶಾಸಕ ರಂಗನಾಥ್ ಗಮನ ಸೆಳೆದರು. 900 ರೂ. ಇದ್ದ ಸಿಲಿಂಡರ್‌ಗೆ 1,800 ರೂ. ಕೊಡಬೇಕಿದೆ. ಸಿಲಿಂಡರ್ ಅಭಾವ ಪರಿಹರಿಸಬೇಕು. ಇದಕ್ಕೆ ಕಾರಣ ಯಾರು, ಯಾರು ಬಗೆಹರಿಸಬೇಕು. ಮೋದಿ ಸರ್ಕಾರದ ದುರ್ಬಲ ವಿದೇಶಾಂಗ ನೀತಿ ಇದಕ್ಕೆ ಕಾರಣ ಅಂತ ಆರೋಪಿಸಿದರು. ಮೋದಿ ಹೆಸರು ಹೇಳುತ್ತಿದ್ದಂತೆ ಸದನದಲ್ಲಿ ಗದ್ದಲ ಉಂಟಾಯಿತು. ಬಿಜೆಪಿ ಸದಸ್ಯರು ರಂಗನಾಥ್ ವಿರುದ್ಧ ಮುಗಿಬಿದ್ದರು.

ಈ ವೇಳೆ, ವಿಪಕ್ಷಗಳ ಮೇಲೆ ತಿರುಗಿ ಬಿದ್ದ ಸಚಿವ ಪ್ರಿಯಾಂಕ್ ಖರ್ಗೆ, ಆರ್ಥಿಕ ನೀತಿ ಏನಾಗಿದೆ ವಿದೇಶಾಂಗ ನೀತಿ ಏನಾಗಿದೆ ಮೋದಿ ಅವರು ಎಲ್ಲಿದ್ದಾರೆ ಏನಾದ್ರೂ ಬಾಯಿ ಬಿಟ್ಟಿದ್ದಾರಾ ಇಂಡಿಯಾ ಟೀಮ್‌ಗೆ ವಿಶ್ ಮಾಡ್ತಾರೆ, ಈ ವಿಚಾರ ಯಾಕೆ ಮಾತಾಡ್ತಿಲ್ಲ ಎಸ್ಮಾ ಯಾಕೆ ಜಾರಿ ತಂದಿದ್ದೀರಿ ಎಂದು ವಾಗ್ದಾಳಿ ನಡೆಸಿದರು.

ಕಲಬುರಗಿಯಲ್ಲಿ ಮಂತ್ರಿಯಾಗಿ ಏನು ಅಭಿವೃದ್ಧಿ ಮಾಡಿದ್ದೀರಿ ಎಂದು ಬಿಜೆಪಿ ಶಾಸಕರು ತರಾಟೆಗೆ ತೆಗೆದುಕೊಂಡರು. ಈ ವೇಳೆ ಸಚಿವ ಪ್ರಿಯಾಂಕ್ ಖರ್ಗೆ ಹಾಗೂ ಬಿಜೆಪಿ ಶಾಸಕರ ನಡುವೆ ತೀವ್ರ ವಾಗ್ವಾದ ಉಂಟಾಯಿತು. ಆಗ ಸುನಿಲ್ ಕುಮಾರ್ ಮಧ್ಯಪ್ರವೇಶಿಸಿ, ಯುದ್ಧದ ಸಂದರ್ಭದಲ್ಲಿ ಎಲ್ಲಾ ದೇಶಗಳು ಇದೇ ಸಮಸ್ಯೆ ಎದುರಿಸುತ್ತಿವೆ. ನಮಗೂ ಇದರ ಬಗ್ಗೆ ಆತಂಕವಿದೆ. ಆದರೆ ಈ ಸರ್ಕಾರಕ್ಕೆ ರಾಜ್ಯದಲ್ಲಿರುವ ಅನೇಕ ಸಮಸ್ಯೆ ಬಗೆಹರಿಸುವ ಯೋಗ್ಯತೆ ಇಲ್ಲ. ಕರಾವಳಿಯಲ್ಲಿ ಮರಳು ಸಿಗುತ್ತಿಲ್ಲ, ಪೂರೈಸಲು ನಿಮಗೆ ಯೋಗ್ಯತೆ ಇಲ್ಲ. ಸರ್ವರ್ ಸಮಸ್ಯೆ ಇದೆ, ಅದನ್ನು ಸರಿ ಮಾಡಿದ್ದೀರಾ ಮಂತ್ರಿಗಳಿಗೆ ಸಮಸ್ಯೆ ಬಗೆಹರಿಸುವ ಯೋಗ್ಯತೆ ಇಲ್ಲ. ಸರ್ಕಾರಿ ನೌಕರರಿಗೆ ಸಂಬಳ ಕೊಡಲು ಯೋಗ್ಯತೆ ಇಲ್ಲ ಎಂದು ತಿರುಗೇಟು ನೀಡಿದರು.

**ಯಾರೂ ಆತಂಕಪಡುವುದು ಬೇಡ- ಸಚಿವ ಮುನಿಯಪ್ಪ:** ಆಹಾರ ಸಚಿವ ಕೆ.ಹೆಚ್. ಮುನಿಯಪ್ಪ ಉತ್ತರಿಸುತ್ತಾ, ಇರಾನ್-ಇಸ್ರೇಲ್ ಯುದ್ಧ ಆಗುತ್ತಿದೆ. ಪೆಟ್ರೋಲ್, ಗ್ಯಾಸ್ ಬರುತ್ತಿಲ್ಲ. ಮನೆಬಳಕೆ ಸಿಲಿಂಡರ್‌ಗೆ ಸಮಸ್ಯೆ ಇಲ್ಲ. 28 ದಿನದ ಉಪಯೋಗಕ್ಕೆ ಕೊಡುತ್ತೇವೆ. ಬೇರೆಯ ಉಪಯೋಗವನ್ನು ಸದ್ಯಕ್ಕೆ ನಿಲ್ಲಿಸುತ್ತೇವೆ. ಗ್ಯಾಸ್ ಹೆಚ್ಚು ಖರ್ಚು ಮಾಡುವುದು ಬೇಡ. ಸ್ಟೋರೇಜ್ ಮಾಡುವುದು ಬೇಡ. ಆದರೆ ವಾಣಿಜ್ಯ ಸಿಲಿಂಡರ್ ಸಮಸ್ಯೆ ಇದೆ ಎಂದರು. ಯಾರೂ ಯಾವುದೇ ಆತಂಕಪಡುವ ಅವಶ್ಯಕತೆ ಇಲ್ಲ. ಆದರೆ ಒಂದು ತಿಂಗಳಿಗೆ ಒಂದು ಕುಟುಂಬಕ್ಕೆ ಒಂದು ಸಿಲಿಂಡರ್ ಕೊಡಲು ತೀರ್ಮಾನ ಮಾಡಲಾಗಿದೆ. ಯುದ್ಧ ನಡೆಯುತ್ತಿರುವಾಗ ಎಲ್ಲಾ ಗ್ರಾಹಕರು ಸಹಕರಿಸಬೇಕು. ಹೋಟೆಲ್, ಕಲ್ಯಾಣ ಮಂಟಪದವರು ಎಲ್ಲರೂ ಸಹಕರಿಸಬೇಕು. ಗ್ಯಾಸ್ ವ್ಯರ್ಥ ಮಾಡಬೇಡಿ. ದೇಶದಲ್ಲಿ ಎಲ್ಲಾ ಕಡೆಯೂ ಈ ಸಮಸ್ಯೆ ಆಗಿದೆ ಎಂದು ತಿಳಿಸಿದರು.

1 ಅಮೆರಿಕಾ ಹಾಗೂ ಇರಾನ್ ನಡುವಿನ ಯುದ್ಧದ ಎಫೆಕ್ಟ್
2 ದೇವಸ್ಥಾನಗಳಲ್ಲಿ ದಾಸೋಹಕ್ಕೆ ಅಡುಗೆ ಅನಿಲ ಕೊರತೆ
3 ಸಮಸ್ಯೆ ಉಂಟಾಗದಂತೆ ಕ್ರಮಕ್ಕೆ ರಾಮಲಿಂಗಾ ರೆಡ್ಡಿ ಸೂಚನೆ

### ಇರಾನ್ ಮೇಲಿನ ಯುದ್ಧದ ಪರಿಣಾಮ ಬನಶಂಕರಿ ದೇವಾಲಯದ ಮೇಲೆ ಪರಿಣಾಮ

ಬೆಂಗಳೂರಿನ ಬನಶಂಕರಿ ದೇವಸ್ಥಾನದ ಮೇಲೂ ಆಗಿದೆ. ಗ್ಯಾಸ್ ಸಿಲಿಂಡರ್ ಕೊರತೆಯಿಂದ ಬನಶಂಕರಿ ದೇವಸ್ಥಾನದಲ್ಲಿ ಭಕ್ತಾಧಿಗಳಿಗೆ ನೀಡುತ್ತಿದ್ದ ಅನ್ನ ಪ್ರಸಾದ ಸ್ಥಗಿತಗೊಳ್ಳುವ ಆತಂಕ ಎದುರಾಗಿದೆ. ಬನಶಂಕರಿ ದೇವಸ್ಥಾನದಲ್ಲಿ ಭಕ್ತಾಧಿಗಳಿಗೆ ನಿತ್ಯ ಪೊಂಗಲ್, ಪುಳಿಯೊಗರೆ ಹಾಗೂ ರೈಸ್ ಬಾತ್ ನ್ನು ಪ್ರಸಾದವನ್ನಾಗಿ ನೀಡಲಾಗುತ್ತದೆ. ಸಂಜೆಗೂ ಭಕ್ತಾಧಿಗಳಿಗೆ ಪ್ರಸಾದ ವಿತರಣೆ ಮಾಡಲಾಗುತ್ತದೆ. ಪ್ರತಿನಿತ್ಯ ಪ್ರಸಾದ ಸಿದ್ದಪಡಿಸಲು ಕನಿಷ್ಠ ಎರಡು ವಾಣಿಜ್ಯ ಗ್ಯಾಸ್ ಸಿಲಿಂಡರ್ ಅಗತ್ಯವಿದೆ. ಆದರೆ ಇದೀಗ ವಾಣಿಜ್ಯ ಗ್ಯಾಸ್ ಸಿಲಿಂಡರ್ ಕೊರತೆ ಎದುರಾಗುವ ಆತಂಕ ಇದೆ.

### ಮಿತವಾಗಿ ಎಲ್‌ಪಿಜಿ ಬಳಸಬೇಕು

ಕೇಂದ್ರ ಸರ್ಕಾರದ ಸೂಚನೆಯಂತೆ ಒಂದು ಕುಟುಂಬದ ಬಳಕೆಗೆ 25 ದಿನಕ್ಕೆ ಒಂದು ಸಿಲಿಂಡರ್ ನೀಡಲಾಗುತ್ತದೆ. ಹಳ್ಳಿಗಳಾಗಲಿ, ನಗರದಲ್ಲಿರಲಿ ಜನರು ಮಿತವಾಗಿ ಗ್ಯಾಸ್ ಮಾತ್ರ ಉಪಯೋಗಿಸಬೇಕು. ತೀರಾ ಅವಶ್ಯಕತೆ ಇದ್ದದ್ದನ್ನು ಮಾತ್ರ ಬಳಸಬೇಕು. ಆತಂಕಪಟ್ಟು ಗ್ರಾಹಕರು ಹೆಚ್ಚು ಹೆಚ್ಚು ಸಿಲಿಂಡರ್ ಬುಕ್ ಮಾಡಬಾರದು. ಇಂತಹ ಕಠಿಣ ಪರಿಸ್ಥಿತಿಯಲ್ಲಿ ಸರ್ಕಾರ ಮತ್ತು ಆಯಿಲ್ ಕಂಪನಿಗಳ ಜೊತೆ ಸಹಕರಿಸಬೇಕು ಎಂದು ನಾನು ಸಾರ್ವಜನಿಕರಲ್ಲಿ ಮನವಿ ಮಾಡುತ್ತೇನೆ. ಕಮರ್ಷಿಯಲ್ ಬಳಕೆಯಲ್ಲಿ ಸ್ವಲ್ಪ ಕಷ್ಟವಾಗಬಹುದು. ಏಕೆಂದರೆ ಮೊದಲು ಮನೆ ಬಳಕೆಗೆ ಆದ್ಯತೆ ನೀಡುತ್ತೇವೆ. ಕಮರ್ಷಿಯಲ್ ಸಿಲಿಂಡರ್ ವಿಚಾರದಲ್ಲಿ ಅತ್ಯಂತ ಹೆಚ್ಚು ಆದ್ಯತೆ ಮೇರೆಗೆ ಆಸ್ಪತ್ರೆ, ಶಾಲೆ, ಕಾಲೇಜುಗಳಿಗೆ ಸರಬರಾಜುನಲ್ಲಿ ವ್ಯತ್ಯಯ ಆಗದಂತೆ ನೋಡಿಕೊಂಡು ನಂತರ ಹೋಟೆಲ್, ಕಲ್ಯಾಣ ಮಂಟಪಗಳಿಗೆ ಕಷ್ಟ ಇದ್ದು ಆದ್ಯತೆಯ ಮೇರೆಗೆ ಸಿಲಿಂಡರ್ ಗಳನ್ನು ವಿತರಿಸಲಾಗುವುದು ಎಂದರು.

### ಕಾಳಸಂತೆಯಲ್ಲಿ ಎಲ್‌ಪಿಜಿ ಮಾರಾಟ

ಕಾಳಸಂತೆಯಲ್ಲಿ ಎಲ್ ಪಿಜಿ ಮಾರಾಟ, ಸಂಗ್ರಹವಾಗದಂತೆ ಪೊಲೀಸ್, ಸಾರಿಗೆ ಹಾಗೂ ಆಹಾರ ಇಲಾಖೆ ಅಧಿಕಾರಿಗಳಿಗೆ ಗಮನ ಹರಿಸಲು ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಸೂಚನೆ ನೀಡಿದ್ದಾರೆ. ಗ್ಯಾಸ್ ಸಿಲಿಂಡರ್ ಅಭಾವದ ಆತಂಕ ಹಿನ್ನೆಲೆ ಹೋಟೆಲ್ ಮಾಲೀಕರ ಸಂಘದೊಂದಿಗೆ ಸಿಎಸ್ ವಿಧಾನಸೌಧದಲ್ಲಿ ಸಭೆ ನಡೆಸಿ ಸಮಾಲೋಚಿಸಿದರು. ಸಭೆಯಲ್ಲಿ ಆಹಾರ ಇಲಾಖೆ, ಸಾರಿಗೆ ಇಲಾಖೆ, ನಗರ ಪೊಲೀಸ್ ಕಮೀಷನರ್, ಅನಿಲ ಸರಬರಾಜು ಕಂಪನಿಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು. ಸಭೆಯಲ್ಲಿ ಚರ್ಚೆ ಬಳಿಕ ಸಿಎಸ್ ಶಾಲಿನಿ ರಜನೀಶ್ ಕೆಲ ಸೂಚನೆಗಳನ್ನು ನೀಡಿದರು. ಸಭೆಯಲ್ಲಿ ಸದ್ಯ ಸರಬರಾಜಾಗುತ್ತಿರುವ ಸಿಲಿಂಡರ್‌ನಲ್ಲಿ ಶೇ 50ರಷ್ಟು ರಿಸರ್ವ್ ಮಾಡಿ ತಮಗೆ ಕೊಡಲು ಹೋಟೆಲ್ ಮಾಲೀಕರ ಸಂಘ ಮನವಿ ಮಾಡಿದರು. ಅಧಿಕೃತವಾಗಿ ಪತ್ರದ ಮೂಲಕ ಮನವಿ ಸಲ್ಲಿಸಿ ಪರಿಶೀಲನೆ ಮಾಡೋಣ ಎಂದು ಸಿಎಸ್ ಭರವಸೆ ನೀಡಿದರು. ಈ ವೇಳೆ, ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಗೊಂದಲದಿಂದ ಸಂಗ್ರಹಿಸಿಡಲು ಹೆಚ್ಚುವರಿ ಸಿಲಿಂಡರ್ ಖರೀದಿಸದಂತೆ ಹೋಟೆಲ್‌ಗಳಿಗೆ ಸೂಚನೆ ನೀಡಿದರು.

## ಬೆಂಗಳೂರಿನಂತೆ ಅಲ್ಲಿಯೂ ಜಿಡಿಪಿ ದರ ಹೆಚ್ಚಾಗಲಿದೆ: ಸಚಿವ ಖರ್ಗೆ

• ಉದಯವಾಹಿನಿ, ಬೆಂಗಳೂರು

ಕರಾವಳಿ ಭಾಗದ ವಾತಾವರಣ ಸರಿಪಡಿಸಿದರೆ ರಾಜಧಾನಿ ಬೆಂಗಳೂರಿನಂತೆ ಅಲ್ಲಿಯೂ ಜಿಡಿಪಿ ದರ ಹೆಚ್ಚಾಗಲಿದೆ ಎಂದು ಐಟಿ-ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ಬುಧವಾರ ವಿಧಾನಸಭೆಯ ಕಲಾಪದ ಪ್ರಶೋತ್ತರ ವೇಳೆಯಲ್ಲಿ ಬಿಜೆಪಿ ಸದಸ್ಯ, ವೇದವ್ಯಾಸ್ ಕಾಮತ್ ಪ್ರಶ್ನೆಗೆ ಉತ್ತರಿಸಿದ ಅವರು, ಕರಾವಳಿ ಭಾಗದಲ್ಲಿ ಸ್ಟಾರ್ಟ್ ಅಪ್ ಗಳ ಸ್ಥಾಪನೆಗೆ ರಾಜ್ಯ ಸರಕಾರವು ಹಲವು ಕ್ರಮಗಳನ್ನು ಕೈಗೊಂಡಿದೆ. ಟೆಕ್ನೋವಾಂಜಾ ಸಮ್ಮೇಳನ, ಬಿಯಾಂಡ್ ಬೆಂಗಳೂರು ಕ್ಲಸ್ಟರ್ ಸೀಡ್ ಫಂಡ್, ಕರ್ನಾಟಕ ಆಕ್ಸಿಲರೇಷನ್ ನೆಟ್‌ವರ್ಕ್ ಅಡಿಯಲ್ಲಿ ಕರಾವಳಿ ಪ್ರದೇಶದ ಸ್ಟಾರ್ಟ್ ಅಪ್ ಗಳಿಗಾಗಿ ಮಂಗಳೂರಿನಲ್ಲಿ ಶೈನ್ ಫೌಂಡೇಷನ್ ಅನ್ನು ಗುರುತಿಸಲಾಗಿದೆ ಎಂದರು.

ಎಲಿವೇಟ್ ಯೋಜನೆಯಡಿ 90 ನವೋದ್ಯಮಗಳಿಗೆ ಒಟ್ಟು 1,970 ಲಕ್ಷ ಅನುದಾನ ನೀಡುವ ಮೂಲಕ ಕರಾವಳಿ ಜಿಲ್ಲೆಯನ್ನು ಉತ್ತೇಜಿಸಲಾಗಿದೆ. ಆದರೆ, ಅಲ್ಲಿನ ವಾತಾವರಣ ಸರಿಪಡಿಸಿದರೆ ಜಿಡಿಪಿ ಸಹ ವೃದ್ಧಿ ಆಗಲಿದೆ. ಇದಕ್ಕಾಗಿ ಎಲ್ಲರೂ ಪ್ರಯತ್ನ ಮಾಡಬೇಕಾಗಿದೆ ಎಂದು ಸಚಿವರು ಉಲ್ಲೇಖಿಸಿದರು.

## ರೈತರಿಗೆ ಅನುಕೂಲವಾಗುವಂತೆ ಕ್ರಮ: ಡಿಸಿಎಂ ಡಿ.ಕೆ. ಶಿವಕುಮಾರ್

• ಉದಯವಾಹಿನಿ, ಬೆಂಗಳೂರು

ಡಾ.ಶಿವರಾಮ ಕಾರಂತ ಬಡಾವಣೆ ನಿವೇಶನ ಹಂಚಿಕೆಯಲ್ಲಿ ರೈತರಿಗೆ ಅನುಕೂಲವಾಗುವಂತೆ ರೈತರಿಗೆ ಅನುಕೂಲ ಆಗುವಂತೆ ಹಾಗೂ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ(ಬಿಡಿಎ)ಕ್ಕೆ ಲಾಭವಾಗುವ ನಿಟ್ಟಿನಲ್ಲಿ ಸರಕಾರ ಕ್ರಮ ಕೈಗೊಳ್ಳಲಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು.

ಸದ್ಯದಲ್ಲಿಯೇ ಸ್ಥಳೀಯ ಶಾಸಕರು ಮತ್ತು ಅಧಿಕಾರಿಗಳೊಂದಿಗೆ ಸಭೆಯನ್ನು ನಡೆಸಿ, ಶಿವರಾಮ ಕಾರಂತ ಬಡಾವಣೆ ನಿವೇಶನ ಹಂಚಿಕೆಯಲ್ಲಿ ರೈತರಿಗೆ ಅನುಕೂಲ ಆಗುವಂತೆ ಮತ್ತು ಬಿಡಿಎಗೆ ಲಾಭವಾಗುವಂತೆ ಕ್ರಮ ವಹಿಸಲಾಗುವುದೆಂದು ಭರವಸೆ ನೀಡಿದರು.

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಯಲಹಂಕದಲ್ಲಿ ನಿರ್ಮಿಸಲಾಗಿರುವ ಬಡಾವಣೆ ಬಹುತೇಕ ಪೂರ್ಣಗೊಂಡಿದ್ದು, ಹೈಕೋರ್ಟ್ ಎರಡೂವರೆ ತಿಂಗಳ ಹಿಂದೆಯೆ ಜಮೀನು ನೀಡಿರುವ ರೈತರಿಗೆ ಮೊದಲು ಪರ್ಯಾಯ ನಿವೇಶನಗಳನ್ನು ನೀಡಿ, ನಂತರ ಸಾರ್ವಜನಿಕರಿಗೆ ನೀಡುವಂತೆ ತಿಳಿಸಿದ್ದರೂ ಇನ್ನೂ ಯಾವುದೇ ರೀತಿಯಲ್ಲಿ ಸರಕಾರ ಕ್ರಮ ವಹಿಸಲಿಲ್ಲ ಎಂದು ವಿಶ್ವನಾಥ್ ಹೇಳಿದರು. ಅಲ್ಲದೇ, ಮೂಲೆ ನಿವೇಶನಗಳನ್ನು ಬಿಡಿಎ ಹರಾಜು ಮಾಡಬಹುದು, ಆದರೆ 100, 80 ಮತ್ತು 60 ಅಡಿ ರಸ್ತೆಯ ನಿವೇಶನಗಳನ್ನು ಕಾಯ್ದಿರಿಸಿಕೊಳ್ಳುವುದು ಸರಿಯಲ್ಲ. ರೈತರಿಗೂ ಆ ನಿವೇಶನಗಳು ಸಿಗಬೇಕು ಎಂದು ಅವರು ಹೇಳಿದರು. ಅದಕ್ಕೆ ಪ್ರತಿಕ್ರಿಯಿಸಿದ ಉಪಮುಖ್ಯಮಂತ್ರಿ, ನಮಗಿಂತ ನಿಮಗೆ ಬಿಡಿಎ ಬಗ್ಗೆ ಹೆಚ್ಚು ಗೊತ್ತು. ನೀವು ಬಿಡಿಎ ಅಧ್ಯಕ್ಷರಾಗಿದ್ದವರು. ಆದಷ್ಟು ಜಮೀನು ನೀಡಿರುವವರಿಗೆ ಅವರ ಜಾಗದಲ್ಲಿಯೇ ನಿವೇಶನ ನೀಡಬೇಕು ಎಂದುಕೊಂಡಿದ್ದೇವೆ. ಆದರೆ ಬಹಳಷ್ಟು ಜನರು ಒಂದೇ ಜಾಗದಲ್ಲಿ ನಮಗೆ ನಿವೇಶನಗಳನ್ನು ಕೊಡಿ, ನಮಗೆ ಅನುಕೂಲ ಆಗುತ್ತದೆ ಎಂದು ಕೇಳಿಕೊಂಡಿದ್ದಾರೆ.

# ಡಿಕೆಶಿಗೆ ಭಾವಿ ಸಿಎಂ ಪಟ್ಟ ಕಟ್ಟಿದ ಬಿಜೆಪಿ ಶಾಸಕ!


• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಚರ್ಚೆಗಳು ನಡೆಯುತ್ತಿರುವ ಸಂದರ್ಭದಲ್ಲಿ ವಿಧಾನಸಭೆಯಲ್ಲಿ ಡಿಸಿಎಂ ಡಿಕೆ ಶಿವಕುಮಾರ್ ಅವರನ್ನು ಬಿಜೆಪಿ ಶಾಸಕರೊಬ್ಬರು ಭಾವಿ ಮುಖ್ಯಮಂತ್ರಿ ಎಂದು ಕರೆದ ಪ್ರಸಂಗ ನಡೆಯಿತು.

ಅನುದಾನದ ಭರವಸೆ ನೀಡಿದ ಡಿಸಿಎಂ

ಗಮನ ಸೆಳೆಯುವ ಸೂಚನೆಯ ವೇಳೆ ಕ್ಷೇತ್ರದ ಸಮಸ್ಯೆಯನ್ನು ಪ್ರಸ್ತಾಪಿಸಿದ ಬೇಲೂರು ಬಿಜೆಪಿ ಶಾಸಕ ಎಚ್ ಕೆ ಸುರೇಶ್ ಡಿಕೆಶಿಯನ್ನು ಭಾವಿ ಸಿಎಂ ಎಂದು ಕರೆದರು.

ಎತ್ತಿನಹೊಳೆ ಕಾಮಗಾರಿಯಿಂದ ರಸ್ತೆ ಸಂಪರ್ಕ ಇಲ್ಲ. ಹೀಗಾಗಿ ಅಭಿವೃದ್ಧಿ ಕುಂಠಿತ ಆಗಿದೆ. ಎತ್ತಿನಹೊಳೆ ಯೋಜನೆ ನೀರು ಬರೋದು ನನ್ನ ಕ್ಷೇತ್ರ ಬೇಲೂರು ವ್ಯಾಪ್ತಿಯಿಂದ. ರಸ್ತೆ ಅಭಿವೃದ್ದಿಗೆ 500 ಕೋಟಿ ಕೇಳಿದ್ದಕ್ಕೆ 50 ಕೋಟಿ ಬರೆದಿದ್ದಾರೆ ಭಾವಿ ಮುಖ್ಯಮಂತ್ರಿಗಳು ನೋಡ್ರಪ್ಪ ಅಂತಾ ನಮ್ಮ ಜನರಿಗೆ ಹೇಳ್ತೀನಿ. ಕೂಡಲೇ 50 ಕೋಟಿ ಬಿಡುಗಡೆ ಮಾಡಿ ಎಂದು ಆಗ್ರಹಿಸಿದರು. ಶಾಸಕರ ಮಾತನಿಂದ ಖುಷಿಯಾದ ಡಿಕೆ ಶಿವಕುಮಾರ್ ಅನುದಾನ ಕೊಡುವ ಭರವಸೆ ನೀಡಿದರು.



**ಡಿಕೆಶಿಯವರೇ ನೀವು ಮೌನವಾದರೆ ಹೇಗೆ?:** ಡಿಕೆ ಶಿವಕುಮಾರ್ ಅವರೇ ನೀವು ಇಷ್ಟು ಮೌನ ವಾಗಿದ್ದರೇ ಹೇಗೆ? ಹೀಗಂತ ಕಾಲೆಳೆದಿದ್ದ ಬಿಜೆಪಿ ಸದಸ್ಯ ಸುನೀಲ್ ಕುಮಾರ್. ಗಮನ ಸೆಳೆಯುವ ಸೂಚನೆಯಲ್ಲಿ ಕ್ಷೇತ್ರದಲ್ಲಿ ಹೆರಿಗೆ ವೈದ್ಯರನ್ನು ವಾಪಸ್ಸು ಕರೆಸಿಕೊಳ್ತಿರುವ ಬಗ್ಗೆ ಶಾಸಕಿ ಶಾರದ ಪೂರಿ ನಾಯಕ್ ಸರ್ಕಾರದ ಗಮನ ಸೆಳೆದರು. ಶಾಸಕಿ ನೆರವಿಗೆ ಪ್ರತಿಪಕ್ಷ ನಾಯಕ ಆರ್ ಅಶೋಕ್ ಬಂದರು. ಹೆರಿಗೆ ಆಗಿಲ್ಲ ಅಂದರೆ ಆಸ್ಪತ್ರೆ ಮುಚ್ಚಿಬಿಡ್ರೀರಾ. ಕನಕಪುರದಲ್ಲಿ ನೋಡೋಣ ಆಸ್ಪತ್ರೆ ಮುಚ್ಚಲಿ. ಸರ್ಕಾರದಲ್ಲಿ ದುಡ್ಡು ಕೊಳೆಯುತ್ತಿದೆ ಅಂತೀರಲ್ಲ, ಆ ದುಡ್ಡನ್ನು ಕೊಡಿ ವೈದ್ಯರಿಗೆ. ಎಲ್ಲರಿಗೂ ಒಂದೇ ಮಾನದಂಡ ಆದರೆ ಜನರು ಹೇಗೆ ಬದುಕುತ್ತಾರೆ ಎಂದು ತರಾಟೆಗೆ ತೆಗೆದುಕೊಂಡರು. ಈ ವೇಳೆ



ಮಧ್ಯಪ್ರವೇಶ ಮಾಡಿದ ಸುನೀಲ್ ಕುಮಾರ್, 'ಡಿಕೆ ಶಿವಕುಮಾರ್ ಅವ್ರೇ ನೀವು ಇಷ್ಟು ಮೌನ ವಾಗಿದ್ದರೇ ಹೇಗೆ? ಸಿಎಂ ಇಲ್ಲಿ ಇಲ್ಲ, ಡಿಸಿಎಂ ನೇ ನಾವು ಸಿಎಂ ಅಂದ್ಕೊಂಡು ಉತ್ತರ ಕೇಳ್ತೀವಿ ಎಂದರು.

ಇದಕ್ಕೆ ಧ್ವನಿಗೂಡಿಸಿದ ಅಶೋಕ್, ಇವಾಗ್ಲಿಂದಲೇ ಅನುಭವ ಮಾಡಿಕೊಳ್ಳಿ ಎಂದು ಡಿಕೆಶಿಯನ್ನು ಕಿಚಾಯಿಸಿದರು. ಇದಕ್ಕೂ ಮುನ್ನ ಕಾಂಗ್ರೆಸ್ ಶಾಸಕ ಬಿ ಆರ್ ಪಾಟೀಲ್ ಕೂಡ ಅಸಮಾಧಾನ ವ್ಯಕ್ತಪಡಿಸಿ, ಇವರಿಗೆ ಏನು ಬುದ್ದಿ ಇದೆಯಾ ಇಲ್ಲವಾ..? ವೈದ್ಯರನ್ನು ಕರೆಸಿಕೊಳ್ಳುವುದು ಎಷ್ಟು ಸರಿ? ವೈದ್ಯರು ಬಿಟ್ಟು ಶುಶ್ರೂಷಕರಿಂದ ಹೆರಿಗೆ ಹೇಗೆ ಸಾಧ್ಯ? ಎಂದು ಬೇಸರ ವ್ಯಕ್ತಪಡಿಸಿದರು.

# ದಯಾಮರಣ ಮಾರ್ಗಸೂಚಿ ಜಾರಿಗೆ ತಂದಿದ್ದು ಕರ್ನಾಟಕದಲ್ಲಿಯೇ ಮೊದಲು

■ ದಯಾಮರಣ ಕುರಿತು ಸುಪ್ರೀಂ ಕೋರ್ಟ್ ಕೋರ್ಟ್ ಐತಿಹಾಸಿಕ ತೀರ್ಪು ■ ಏನಿದು ಲಿವಿಂಗ್ ವಿಲ್?


• ಉದಯವಾಹಿನಿ, ಬೆಂಗಳೂರು

ದಯಾಮರಣದ ಅನುಮತಿಗೆ ಸಂಬಂಧಿಸಿದಂತೆ ಕಾನೂನನ್ನು ಜಾರಿಗೊಳಿಸಿದ್ದು ಕರ್ನಾಟಕದಲ್ಲಿಯೇ ಮೊದಲ ಬಾರಿಗೆ ಕಾನೂನು ರಚಿಸಿದ್ದು, ಇದಕ್ಕಾಗಿ ಸರ್ಕಾರವು ಸಮಿತಿ ರಚಿಸಿದೆ. ಇನ್ನು ರಾಜ್ಯದಲ್ಲಿ ಸಕ್ರಿಯ ಹಾಗೂ ನಿಷ್ಕ್ರಿಯ ದಯಾಮರಣಕ್ಕೆ ಹಲವರು ಅರ್ಜಿ ಸಲ್ಲಿಕೆ ಮಾಡಿದ್ದಾರೆ.

ಸುಪ್ರೀಂ ಕೋರ್ಟ್ 13 ವರ್ಷಗಳಿಂದ ಕೋಮಾದಲ್ಲಿದ್ದ ಹರೀಶ್ ರಾಣಾ ಎಂಬ ವ್ಯಕ್ತಿಯ ದಯಾಮರಣಕ್ಕೆ ಅನುಮತಿ ನೀಡಿದೆ. ಇದೊಂದು ಐತಿಹಾಸಿಕ ತೀರ್ಪು ಆಗಿದೆ. ಆಸ್ಪತ್ರೆಯಲ್ಲಿ ಗುಣಪಡಿಸಲಾಗದ ವ್ಯಕ್ತಿಯೊಬ್ಬ ಗೌರವಯುತವಾಗಿ ಜೀವ ಬಿಡಲು ಅವಕಾಶ ಮಾಡಿಕೊಟ್ಟಂತಾಗಿದೆ. ಈ ಬೆನ್ನಲ್ಲೆ ಕರ್ನಾಟಕದಲ್ಲಿ ದಯಾಮರಣಕ್ಕೆ ಸಂಬಂಧಿಸಿದಂತೆ ಸರ್ಕಾರ ಈ ಹಿಂದೆ ಹೊರಡಿಸಿದ್ದ ಆದೇಶ ಮುನ್ನೆಲೆಗೆ ಬಂದಿದೆ. ಕೆಲ ವರ್ಷಗಳ ಹಿಂದೆ ಅರುಣಾ ಶಾನಭಾಗ್ ಅವರ ದಯಾಮರಣ ಅರ್ಜಿಯ ಕುರಿತ ತೀರ್ಪಿನ ವೇಳೆ ಸುಪ್ರೀಂ ಕೋರ್ಟ್ ರಾಜ್ಯ ಸರ್ಕಾರಗಳು ಅಗತ್ಯ ಕಾನೂನು ರಚಿಸುವ ಬಗ್ಗೆ ಮಹತ್ವದ ಬಗ್ಗೆ ಒತ್ತಿ ಹೇಳಿತ್ತು. ದಯಾಮರಣ ನೀಡುವ ವಿಚಾರವಾಗಿ ಮಾರ್ಗದರ್ಶಕ ಸೂತ್ರಗಳನ್ನು ರೂಪಿಸುವಂತೆ ಸರ್ಕಾರಕ್ಕೆ ನಿರ್ದೇಶನ ನೀಡಿತ್ತು. ಅಂತೆಯೇ ಕರ್ನಾಟಕ ಸರ್ಕಾರವು 2025 ಜನವರಿಯಲ್ಲಿ ನಿಯಮಗಳನ್ನು ರೂಪಿಸಿ ಆದೇಶ ಹೊರಡಿಸಿದೆ.

**ಕರ್ನಾಟಕ ಸರ್ಕಾರದ ದಯಾಮರಣ ಕುರಿತ ಆದೇಶ ಏನು?**

ಹಲವರು ಅರ್ಜಿ ನಿಯಮಗಳೇನು?




ಕರ್ನಾಟಕ ಸರ್ಕಾರವು ಸುಪ್ರೀಂ ಕೋರ್ಟ್‌ನ 'ಕಾಮನ್ ಕಾಸ್' (2018) ಮತ್ತು ಅದರ ಪರಿಷ್ಕೃತ 2023ರ ಮಾರ್ಗಸೂಚಿಗಳ ಪ್ರಕಾರ ನಿಷ್ಕ್ರಿಯ ದಯಾಮರಣವನ್ನು ಜಾರಿಗೊಳಿಸಿದೆ. ಸಕ್ರಿಯ ದಯಾಮರಣಕ್ಕೆ ಅವಕಾಶ ಇಲ್ಲ.

**ಏನಿದು ಸಕ್ರಿಯ, ನಿಷ್ಕ್ರಿಯ ದಯಾಮರಣ?:** ಸಕ್ರಿಯ ದಯಾಮರಣ ಎಂದರೆ, ಇಂಜೆಕ್ಷನ್ ಅಥವಾ ಔಷಧಿ ನೀಡಿ ಜೀವ ತೆಗೆಯುವುದು. ಇದು ಭಾರತದಲ್ಲಿ ಸಂಪೂರ್ಣವಾಗಿ ನಿಷೇಧಿಸಲಾಗಿದೆ.

ನಿಷ್ಕ್ರಿಯ ದಯಾಮರಣವೆಂದರೆ, ಎಂದೂ ಗುಣಪಡಿಸಲಾಗದ ಸ್ಥಿತಿಯಲ್ಲಿರುವ ರೋಗಿಗೆ ನೀಡಲಾಗುತ್ತಿರುವ ಕೃತಕ ಜೀವದಾಯಕ ವ್ಯವಸ್ಥೆಯನ್ನು (ವೆಂಟೀಲೆಟರ್) ತೆಗೆದುಹಾಕುವುದು. ಇದು ಕಾನೂನುಬದ್ಧವಾಗಿದೆ.

**ಮೊದಲ ಫಲಾನುಭವಿಯಾಗಲು ಕಾಯುತ್ತಿರುವ ದಾವಣಗೆರೆಯ ಕರಿಬಸಮ್ಮ:** ದಾವಣಗೆರೆಯ ನಿವೃತ್ತ ಶಿಕ್ಷಕಿ ಕರಿಬಸಮ್ಮ ಅವರು ದೀರ್ಘಕಾಲದ ದೈಹಿಕ ನೋವಿನಿಂದ ಬೇಸತ್ತು, 2010 ರಲ್ಲಿ ರಾಷ್ಟ್ರಪತಿ, ಪ್ರಧಾನಿ ಮತ್ತು ಸುಪ್ರೀಂ ಕೋರ್ಟ್‌ಗೆ ಇಚ್ಛಾಮರಣಕ್ಕಾಗಿ ಅರ್ಜಿ ಸಲ್ಲಿಸಿದ್ದರು. ಇನ್ನು ಸರ್ಕಾರ ದಯಾಮರಣಕ್ಕೆ ಕಾನೂನು ರಚಿಸಿದ ಬಳಿಕ ಜೀವಂತ ಉಯಿಲು ಮಾಡಿ ಮೊದಲ ಫಲಾನುಭವಿಯಾಗಲು ಕಾಯುತ್ತಿದ್ದಾರೆ. ಪ್ರಸ್ತುತ ದಾವಣಗೆರೆಯ ವೃದ್ಧಾಶ್ರಮದಲ್ಲಿ ಪತಿಯೊಂದಿಗೆ ವಾಸಿಸುತ್ತಿರುವ ಕರಿಬಸಮ್ಮ ಅವರು ಮೂರು ದಶಕಗಳಿಗೂ ಹೆಚ್ಚು ಕಾಲ ಬೆನ್ನಿನ ನರ ದೌರ್ಬಲ್ಯ, ಕೆಲ ವರ್ಷದಿಂದ ಕರುಳು ಕ್ಯಾನ್ಸರ್‌ನಿಂದ ಬಳಲುತ್ತಿದ್ದಾರೆ. ಚಿಕಿತ್ಸೆಗಾಗಿ ತನ್ನ ಆಸ್ತಿ, ಹಣಕಾಸು ಮತ್ತು ಸಂಬಂಧಗಳನ್ನು ಕಳೆದುಕೊಂಡಿದ್ದಾರೆ. ಆದರೆ, ಕಾಯಿಲೆಗಳಿಂದ ಬಳಲುತ್ತಿರುವ ತಾನು ಗೌರವಯುತ ಸಾವಿಗೆ ಅರ್ಹರು ಎಂಬ ನಂಬಿಕೆಯಲ್ಲಿದ್ದಾರೆ.

### ಕರ್ನಾಟಕದಲ್ಲಿಯೂ ಸಾಕಷ್ಟು ಮಂದಿ ಅರ್ಜಿ

ಕರ್ನಾಟಕದಲ್ಲಿ ಅನೇಕರು ದಯಾಮರಣಕ್ಕೆ ಅರ್ಜಿ ಸಲ್ಲಿಸಿದ್ದಾರೆ. ಆದರೆ, ಇವುಗಳಲ್ಲಿ ಹೆಚ್ಚಿನವು 'ಸಕ್ರಿಯ ದಯಾಮರಣ'ದ ಕುರಿತಾಗಿವೆ. ಆದರೆ, ಕಾನೂನಿನಲ್ಲಿ ನಿಷ್ಕ್ರಿಯ ದಯಾಮರಣಕ್ಕೆ ಮಾತ್ರ ಅವಕಾಶವಿದ್ದು, ಅರ್ಜಿಗಳನ್ನು ತಿರಸ್ಕರಿಸಲಾಗಿದೆ. ಹಲವರು ನ್ಯಾಯಾಲಯದ ಮೊರೆ ಹೋಗಿದ್ದು, ವಿಷದ ಇಂಜೆಕ್ಷನ್ ಅಥವಾ ಇತರ ಮಾರ್ಗಗಳ ಮೂಲಕ ಸಾಯಲು ಅನುಮತಿ ಕೇಳಿದ್ದಾರೆ. ಆದರೆ, ನ್ಯಾಯಾಲಯ ತಿರಸ್ಕರಿಸಿದೆ.

### ಇತರೆ ದಯಾಮರಣ ಕೋರಿಕೆಗಳು

2023ರಲ್ಲಿ ಚಿಕ್ಕಮಗಳೂರಿನ ಎಚ್.ಪಿ. ನಿರ್ಮಲಾ ಎಂಬುವರು ತನ್ನ 27 ವರ್ಷದ ಮಗ ಕಳೆದ 7 ವರ್ಷಗಳಿಂದ ಅಪಘಾತಕ್ಕೀಡಾಗಿ ಪ್ರಜ್ಞಾಹೀನ ಸ್ಥಿತಿಯಲ್ಲಿದ್ದು, ಅವನ ಆರೈಕೆ ಮಾಡಲು ಆರ್ಥಿಕ ಶಕ್ತಿಯಿಲ್ಲ ಎಂದು ದಯಾಮರಣ ಕೋರಿ ಸರ್ಕಾರಕ್ಕೆ ಮನವಿ ಮಾಡಿದ್ದರು. 2018 ರಲ್ಲಿ ಕೆ.ಎಸ್. ಚಂದ್ರಶೇಖರ್ ಎಂಬ ನಿವೃತ್ತ ಶಿಕ್ಷಕರು, ತೀವ್ರ ನರಸಂಬಂಧಿ ಕಾಯಿಲೆಯಿಂದ ಬಳಲುತ್ತಿದ್ದರು. ಗೌರವಯುತವಾಗಿ ಸಾಯುವ ಹಕ್ಕು ತನಗಿದೆ ಎಂದು ರಾಷ್ಟ್ರಪತಿಗಳಿಗೆ ಪತ್ರ ಬರೆದಿದ್ದರು.

**ಈ ದಿನದ ದರ** ಪೆಟ್ರೋಲ್: 102.96 ₹/L | ಡೀಸೆಲ್ : 90.99 ₹/L | ಬಂಗಾರ: ₹16,331/Gram24ct ₹14,970/Gram22ct | ಬೆಳ್ಳಿ: ₹290.00/Gram

## ದಾಸವಾಣಿ ಕಾರ್ಯಕ್ರಮ

• ಉದಯವಾಹಿನಿ, ಬೆಂಗಳೂರು

ಜಯನಗರದ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಮಾರ್ಚ್ 12, ಗುರುವಾರ ಸಂಜೆ 5-15ಕ್ಕೆ ದಾಸವಾಣಿ. ಗಾಯನ : ಶ್ರೀ ಅನಂತಪದ್ಮನಾಭ, ಹಾರ್ಮೋನಿಯಂ : ಶ್ರೀನಾಗೇಶ್, ಮೃದಂಗ : ಶ್ರೀ ಶ್ರೀನಿವಾಸ್ ಅನಂತರಾಮಯ್ಯ. ಸ್ಥಳ : ನಂಜನಗೂಡು ಶ್ರೀರಾಘವೇಂದ್ರ ಸ್ವಾಮಿಗಳ ಮಠ, ಜಯನಗರ 5ನೇ ಬಡಾವಣೆ, ಬೆಂಗಳೂರು-41

# ಎತ್ತಿನಹೊಳೆ ಯೋಜನೆ - 2027ರಲ್ಲಿ ಕಾಮಗಾರಿ ಮುಗಿಯುವ ವಿಶ್ವಾಸ

• ಉದಯವಾಹಿನಿ, ಬೆಂಗಳೂರು



ಬಯಲುಸೀಮೆ ಜಿಲ್ಲೆಗಳಿಗೆ ಕುಡಿಯುವ ನೀರು ಒದಗಿಸುವ ಸಂಬಂಧ ರಾಜ್ಯ ಸರ್ಕಾರವು ಕೈಗೆತ್ತಿಕೊಂಡಿರುವ ಎತ್ತಿನಹೊಳೆ ಸಮಗ್ರ ಕುಡಿಯುವ ನೀರು ಯೋಜನೆ ಮುಂದಿನ ವರ್ಷದ ಅಕ್ಟೋಬರ್ ಅಂತ್ಯಕ್ಕೆ ಕಾಮಗಾರಿ ಮುಗಿಯುವ ವಿಶ್ವಾಸವಿದೆ. ಕಾಮಗಾರಿ ಮುಗಿಯುವವರೆಗೂ ಕಾಯದೇ ಸಾಧಕ ಭಾದಕ ಕುರಿತ ಅಧ್ಯಯನಕ್ಕಾಗಿ ಕಾರ್ಯಸಾಧ್ಯತಾ ವರದಿ ಸಿದ್ದಪಡಿಸಲು ಸೂಚಿಸಲಾಗಿದೆ ಎಂದು ಗ್ರಾಮೀಣಾಭಿವೃದ್ದಿ ಇಲಾಖೆ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಬಯಲುಸೀಮೆ ಜಿಲ್ಲೆಗಳಿಗೆ ತುಮಕೂರು, ರಾಮನಗರ, ಬೆಂಗಳೂರು ಗ್ರಾಮಾಂತರ, ಕೋಲಾರ ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಕುಡಿಯುವ ನೀರು ಪೂರೈಸುವ ಕುರಿತಂತೆ ನಿಯಮ 330ರ ಅಡಿ ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್.ನವೀನ್, ಗೋವಿಂದೇಗೌಡ, ಎನ್.ರವಿಕುಮಾರ್ ಸರ್ಕಾರ ಗಮನ ಸೆಳೆದರು. ಕೋಟ್ಯಂತರ ರೂಪಾಯಿ ವಿನಿಯೋಗಿಸಿದರೂ ಬಯಲುಸೀಮೆಗಳಿಗೆ ಇಂದಿಗೂ ಕುಡಿಯುವ ನೀರು ಹರಿಸಿಲ್ಲ. ಮಿತಿ ಮೀರಿ ಕೊರೆದ ಬೋರ್ ವೆಲ್‌ಗಳಿಂದ ರಾಸಾಯನಿಕಯುಕ್ತ ನೀರನ್ನೇ ಕುಡಿಯುವಂತಾಗಿದೆ. ಇದರಿಂದ ಆರೋಗ್ಯ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿದೆ. ಉದ್ದೇಶಿತ ಭದ್ರಾ, ಕೃಷ್ಣ ಮೇಲ್ದಂಡೆ ಹಾಗೂ ಎತ್ತಿನಹೊಳೆ ಯೋಜನೆಯಡಿ ಕುಡಿಯುವ ನೀರು ಸಹ ಗ್ರಾಮೀಣ ಭಾಗಕ್ಕೆ ಮರೀಚಿಕೆಯಾಗಿದೆ. ವಿಳಂಬ ಕಾಮಗಾರಿ ತಪ್ಪಿಸಲು ಹಾಗೂ ಸಂಬಂಧಪಟ್ಟ ಇಲಾಖೆಗಳು ಸಮನ್ವಯತೆ ಸಾಧಿಸಿ ತ್ವರಿತಗತಿಯಲ್ಲಿ ಕಾಮಗಾರಿ ಮುಗಿಸಿ ಶುದ್ಧ ಕುಡಿಯುವ ನೀರು ಒದಗಿಸಬೇಕೆಂದು ಸರ್ಕಾರಕ್ಕೆ ಒತ್ತಾಯಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವ ಪ್ರಿಯಾಂಕ್ ಖರ್ಗೆ, ಎತ್ತಿನಹೊಳೆ ಮೂಲಕ 24.01 ಟಿಎಂಸಿ ನೀರು ಬಯಲುಸೀಮೆ ಜಿಲ್ಲೆಗಳಿಗೆ ನೀರು ಹರಿಸುವ ಯೋಜನೆ ಇದಾಗಿದೆ. ಈ ಪೈಕಿ 8.93 ಟಿಎಂಸಿ ನೀರನ್ನ ಗ್ರಾಮೀಣ ಭಾಗಕ್ಕೆ ಮೀಸಲಿರಿಸಲಾಗಿದೆ. ತುಮಕೂರುವರೆಗೆ ಕೆನಾಲ್ ಕಾಮಗಾರಿಯನ್ನ ಈ ವರ್ಷ ಜೂನ್ ನಲ್ಲಿ ಮುಗಿದು, 2027ರ ಅಕ್ಟೋಬರ್ ಅಂತ್ಯಕ್ಕೆ ಕೋಲಾರ ಭಾಗದ ಕೆನಾಲ್ ಕಾಮಗಾರಿ ಮುಗಿಸಿ ಕೊಡುವುದಾಗಿ ಗುತ್ತಿಗೆ ಪಡೆದ ಕಂಪನಿ ಆಶ್ವಾಸನೆ ನೀಡಿದೆ. ಕಾಮಗಾರಿ ಮುಗಿಯುವವರೆಗೂ ಕಾಯದೇ ಕುಡಿಯುವ ನೀರು ಸರಬರಾಜು ಹರಿಯಲು ಎದುರಾಗುವ ಅಡೆತಡೆಗಳು, ತಾಂತ್ರಿಕ ಪರಿಶೀಲನೆ, ಕೊಳವೆ ಮಾರ್ಗದ ಜಾಲದ ಅಧ್ಯಯನ ನಡೆಸಲು 11.27 ಕೋಟಿ ವೆಚ್ಚದಲ್ಲಿ ಕಾರ್ಯಸಾಧ್ಯತಾ ವರದಿ ತಯಾರಿಸಲು ಏಜೆನ್ಸಿಗೆ ವಹಿಸಲಾಗಿದೆ. ವರದಿ ಬಂದ ಬಳಿಕ ಡಿಪಿಆರ್ ತಯಾರಿಸುವಂತೆ ಸೂಚಿಸಲಾಗುವುದು ಎಂದು ಸಚಿವರು ಮಾಹಿತಿ ನೀಡಿದರು.

## ತೆರಿಗೆ ಪಾವತಿಸದ 81 ಆಸ್ತಿಗಳ ಹರಾಜಿಗೆ ಮುಂದಾದ ಜಿಬಿಎ

• ಉದಯವಾಹಿನಿ, ಬೆಂಗಳೂರು

ಆಸ್ತಿ ತೆರಿಗೆ ಬಾಕಿ ಉಳಿಸಿಕೊಂಡಿರುವ 81 ಆಸ್ತಿಗಳನ್ನು ಮಾ.13ರಂದು ಹರಾಜು ಹಾಕಲು ಬೆಂಗಳೂರು ಉತ್ತರ ನಗರ ಪಾಲಿಕೆ ತೀರ್ಮಾನಿಸಿದೆ.ವಲಯ-1 ಮತ್ತು ವಲಯ-2 ವ್ಯಾಪ್ತಿಯಲ್ಲಿ ಒಟ್ಟಾರೆ 81 ಆಸ್ತಿಗಳನ್ನು ಹರಾಜು ಮಾಡಲು ತೀರ್ಮಾನಿಸಲಾಗಿದೆ ಎಂದು ಬೆಂಗಳೂರು ಉತ್ತರ ನಗರ ಪಾಲಿಕೆ ಆಯುಕ್ತ ಪೊಮ್ಮಲ ಸುನೀಲ್ ಕುಮಾರ್ ಅವರು ತಿಳಿಸಿದ್ದಾರೆ. ವಲಯ-1ರಲ್ಲಿ 47 ಆಸ್ತಿಗಳಿಂದ 1,32,18,421, ವಲಯ-2ರಲ್ಲಿ 34 ಆಸ್ತಿಗಳಿಂದ 62,18,279 ಸೇರಿ ಒಟ್ಟು 1,94,36,700 ರೂ.ಗಳ ತೆರಿಗೆ ಬಾಕಿ ಉಳಿದಿದೆ. ಇದರಿಂದ ಬಾಕಿದಾರರ ಆಸ್ತಿಗಳನ್ನು ಹರಾಜು ಪ್ರಕ್ರಿಯೆಗೆ ಒಳಪಡಿಸಲಾಗುತ್ತಿದೆ.ಗ್ರೇಟರ್ ಬೆಂಗಳೂರು ಆಡಳಿತ ಕಾಯ್ದೆ-2025 ಅನ್ವಯ ಪಾಲಿಕೆ ವ್ಯಾಪ್ತಿಯಲ್ಲಿನ ಎಲ್ಲಾ ಸ್ವತ್ತುಗಳ ಮಾಲೀಕರು ಪ್ರತಿ ಆರ್ಥಿಕ ವರ್ಷದಲ್ಲಿ ಆಸ್ತಿ ತೆರಿಗೆ ಪಾವತಿಸಬೇಕು. ತೆರಿಗೆ ಪಾವತಿಸದಿದ್ದಲ್ಲಿ ಆಸ್ತಿ ತೆರಿಗೆ ನಿರ್ಧಾರ, ವಸೂಲಾತಿ ನಿರ್ವಹಣೆ ನಿಯಮಗಳು-2024ರ ಪ್ರಕಾರ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಮಾರ್ಚ್ 13ರಂದು ಮಧ್ಯಾಹ್ನ 3 ಗಂಟೆಗೆ ಯಲಹಂಕದ ಎನ್.ಇ.ಎಸ್. ಬಳಿ ಇರುವ ಮಿನಿ ವಿಧಾನಸೌಧದ ಮೂರನೇ ಮಹಡಿಯ ಸಭಾಂಗಣದಲ್ಲಿ ವಲಯ-1, ವಲಯ-2ರ ಜಂಟಿ ಆಯುಕ್ತರ ಸಮ್ಮುಖದಲ್ಲಿ ಹರಾಜು ಪ್ರಕ್ರಿಯೆ ನಡೆಯಲಿದೆ. ಆಸಕ್ತ ಸಾರ್ವಜನಿಕರು ಹರಾಜಿನಲ್ಲಿ ಭಾಗವಹಿಸುವಂತೆ ಪಾಲಿಕೆ ಮನವಿ ಮಾಡಿದೆ.ಹರಾಜು ಪ್ರಕ್ರಿಯೆಗೆ ಮುನ್ನ ಬಾಕಿ ಇರುವ ಆಸ್ತಿ ತೆರಿಗೆ ಪಾವತಿಸಿದರೆ ಆ ಆಸ್ತಿಯನ್ನು ಹರಾಜಿನಿಂದ ಕೈಬಿಡಲಾಗುತ್ತದೆ. ಅಲ್ಲದೆ ಆಸ್ತಿಯ ಮಾಲೀಕರು ತಮ್ಮ ಆಕ್ಷೇಪಣೆಗಳನ್ನು ಸಂಬಂಧಪಟ್ಟ ಜಂಟಿ ಆಯುಕ್ತರ ಕಚೇರಿಗೆ ಸಲ್ಲಿಸಲು ಅವಕಾಶವಿದೆ ಎಂದು ತಿಳಿಸಿದರು.

## ಗೋಪಿ ಕೊಲೆ: 6 ಆರೋಪಿಗಳ ಬಂಧನ


• ಉದಯವಾಹಿನಿ, ಆನೇಕಲ್

ಹೊನ್ನಕಲಶಾಪುರ ಗ್ರಾಮದ ಗೋಪಿ ಅಪಹರಣ, ಕೊಲೆಗೆ ಸಂಬಂಧಿಸಿದಂತೆ ಆರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ. ಕರ್ನಾಟಕ ಮತ್ತು ತಮಿಳುನಾಡು ಪೊಲೀಸರು ಜಂಟಿ ಕಾರ್ಯಾಚರಣೆ ನಡೆಸಿ ಆರೋಪಿಗಳನ್ನು ಬಂಧಿಸಿದ್ದಾರೆ. ದರ್ಶನ್, ಲಿಖಿತ್, ನಿಖಿಲ್, ತೇಜಸ್, ಪ್ರಶಾಂತ್, ಲಿಖಿತ್ ಬಂಧಿತರು. ಆರೋಪಿಗಳು ಗೋಪಿಯನ್ನು ಕೊಲೆ ಮಾಡಿ ಡೆಂಕಣಿಕೋಟೆ ಬಳಿ ಎಸೆದು ಹೋಗಿದ್ದರಿಂದ ತಮಿಳುನಾಡು ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದರು. ಅನೇಕಲ್ ಪೊಲೀಸರು ಆರೋಪಿಗಳ ಪತ್ತೆಗೆ 7 ತಂಡ ರಚಿಸಿದ್ದರು. ತಮಿಳುನಾಡಿನ ಹೊಗನೇಕಲ್ ಬಳಿ ಆರೋಪಿಗಳು ತಲೆಮರೆಸಿಕೊಂಡಿದ್ದರು. ವಾಹನಗಳಲ್ಲಿ ಪರಾರಿಯಾಗುತ್ತಿದ್ದಾಗ ತಮಿಳುನಾಡು ಪೊಲೀಸರು ಬಂಧಿಸಿ ಪೋಚಂಪಲ್ಲಿ ನ್ಯಾಯಾಲಯಕ್ಕೆ ಹಾಜರುಪಡಿಸಿದ್ದಾರೆ. ಇನ್ನುಳಿದ ಆರೋಪಿಗಳ ಬಂಧನಕ್ಕೆ ಪೊಲೀಸರು ಬಲೆ ಬೀಸಿದ್ದಾರೆ ವಾಹನ ಚಾಲಕ ರಘುನನ್ನು ಸಹ ಪೊಲೀಸರು ವಶಕ್ಕೆ ಪಡೆದಿದ್ದಾರೆ. ಕೊಲೆಯ ಸೂತ್ರಧಾರ ಮೋಹನ್‌ಬಾಬುನನ್ನು ಪೊಲೀಸರು ವಿಚಾರಣೆ ನಡೆಸಿದ ನಂತರ ಮತ್ತಷ್ಟು ಮಾಹಿತಿ ಹೊರಬೀಳಲಿದೆ.

# 256 ಕೊಳವೆಬಾವಿ ಕೊರೆಯಲು ಜಲಮಂಡಳಿ ಚಿಂತನೆ

### ಬೆಂಗಳೂರಿನ ನೀರಿನ ಸಮಸ್ಯೆ ನಿಭಾಯಿಸಲು 60 ಹೊಸ ಟ್ಯಾಂಕರ್ ಖರೀದಿ

• ಉದಯವಾಹಿನಿ, ಬೆಂಗಳೂರು




ಬೇಸಿಗೆ ಹಿನ್ನೆಲೆಯಲ್ಲಿ ರಾಜಧಾನಿಯಲ್ಲಿ ಎದುರಾಗಬಹುದಾದ ನೀರಿನ ಸಮಸ್ಯೆಯನ್ನು ನಿಭಾಯಿಸಲು ಈಗಾಗಲೇ ನಾನಾ ಕ್ರಮಗಳನ್ನು ಕೈಗೊಳ್ಳಲು ರೂಪುರೇಷೆ ತಯಾರಿಸಿರುವ ಬೆಂಗಳೂರು ಜಲಮಂಡಳಿ, 60 ಹೊಸ ಟ್ಯಾಂಕರ್ ಖರೀದಿಸಿದೆ. ಈ ಮೂಲಕ 'ಸಂಚಾರಿ ಕಾವೇರಿ' ಕಾರ್ಯಕ್ರಮಕ್ಕೆ ಹೆಚ್ಚುವರಿ ಟ್ಯಾಂಕರ್ ಸೇರ್ಪಡೆಯಾಗಲಿವೆ.

ನಗರದ ಸುಮಾರು 1.50 ಕೋಟಿ ಜನರು, 11 ಲಕ್ಷಕ್ಕೂ ಅಧಿಕ ನೀರಿನ ಸಂಪರ್ಕಗಳಿಗೆ ಕಾವೇರಿ 5ನೇ ಹಂತದೊಂದಿಗೆ 2,225 ದಶಲಕ್ಷ ಲೀಟರ್ ನೀರು ಪೂರೈಕೆ ಮಾಡುವ ಸಾಮರ್ಥ್ಯವನ್ನು ಮಂಡಳಿ ಹೊಂದಿದೆ. ಆದರೆ, 5ನೇ ಹಂತದ ಕಾಮಗಾರಿ ಇನ್ನೂ ಪೂರ್ಣವಾಗದಿರುವುದು ಮತ್ತು 110 ಹಳ್ಳಿಗಳಲ್ಲಿ ಹೆಚ್ಚಿನ ಜನರು ಸಂಪರ್ಕ ಪಡೆಯದಿರುವ ಕಾರಣ 5ನೇ ಹಂತದ 775 ಎಂಎಲ್‌ಡಿ ನೀರಿನಲ್ಲಿ ಶೇ.45ರಷ್ಟು ಉಳಿತಾಯವಾಗುತ್ತಿದೆ. ಅಲ್ಲದೆ, ವಿವಿಧ ನಾಲ್ಕು ಹಂತಗಳಲ್ಲೂ ಜಾಗರೂಕತೆಯಿಂದ ನೀರು ಸರಬರಾಜು ಮಾಡುವ ಮೂಲಕ ಒಂದಷ್ಟು ಪ್ರಮಾಣದ ನೀರು ಉಳಿತಾಯ ಮಾಡುತ್ತಿದೆ. ಇದೆಲ್ಲದರ ಪರಿಣಾಮ, ನಿತ್ಯ 1871 ಎಂಎಲ್‌ಡಿ ಪೂರೈಕೆ ಮಾಡುವ ಮೂಲಕ 354 ಎಂಎಲ್‌ಡಿ ಉಳಿತಾಯ ಮಾಡುತ್ತಿದೆ. ಅದನ್ನು ಈಗ ಬೇಸಿಗೆಯಲ್ಲಿ ವ್ಯವಸ್ಥಿತವಾಗಿ ಬಳಕೆ ಮಾಡಲು ನಿರ್ಧರಿಸಿದೆ. ಈಗಾಗಲೇ ನೀರಿನ ಬೇಡಿಕೆ ಹೆಚ್ಚಿದೆ. ಅಂತರ್ಜಲ ಕುಸಿತ, ದುಬಾರಿ ಪ್ರೊರೇಟಾ ಶುಲ್ಕದ ಪರಿಣಾಮ ಮತ್ತಿತರ ಕಾರಣಗಳಿಂದ ಇನ್ನೂ ಸಂಪರ್ಕ ಪಡೆಯದಿರುವವರಿಗೂ ವ್ಯವಸ್ಥಿತವಾಗಿ ನೀರು ಪೂರೈಕೆ ಮಾಡಬೇಕಾಗಿರುವುದು ಮಂಡಳಿಯ ಜವಾಬ್ದಾರಿಯಾಗಿದ್ದು, ಅದರ ಅಗತ್ಯತೆ ಮನಗಂಡು ಟ್ಯಾಂಕರ್‌ಗಳನ್ನು ಖರೀದಿಸಿದೆ.

> **15 ಕೋಟಿ ರೂಪಾಯಿ ವೆಚ್ಚದಲ್ಲಿ 60 ಟ್ಯಾಂಕರ್**
> **ಜಲಮಂಡಳಿಯಲ್ಲಿ ಈ ಹಿಂದೆ 64 ಟ್ಯಾಂಕರ್‌ಗಳಿದ್ದವು. ಇದರಲ್ಲಿ ಕೆಲವು ತುಂಬಾ ಹಳೆಯವೂ ಆಗಿದ್ದವು. ಕೆಲವು ಎಫ್‌ಸಿ ಮುಗಿದು, ಬಳಕೆ ಸುರಕ್ಷಿತವಾಗಿ ರಲಿಲ್ಲ. ಮಂಡಳಿಯ ಟ್ಯಾಂಕರ್ ಸಂಖ್ಯೆ 50ಕ್ಕೆ ಇಳಿದಿತ್ತು. ಹೀಗಿದ್ದರೂ, ಕೆಲವು ವರ್ಷಗಳಿಂದ ಟ್ಯಾಂಕರ್ ಖರೀದಿಸಿರಲಿಲ್ಲ. ಬೇಸಿಗೆ ಸಮಯದಲ್ಲಿ ಹಾಗೂ ಕಳೆದ ವರ್ಷವಷ್ಟೇ ಆರಂಭಿಸಿದ 'ಸಂಚಾರಿ ಕಾವೇರಿ'ಗೂ ಖಾಸಗಿ ಟ್ಯಾಂಕರ್‌ಗಳನ್ನು ಗುತ್ತಿಗೆ ಆಧಾರದಲ್ಲಿ ಪಡೆಯಲಾಗಿತ್ತು.**

**4 ಕೋಟಿ ರೂಪಾಯಿ ಆದಾಯ:** 'ಸಂಚಾರಿ ಕಾವೇರಿ' ಕಾರ್ಯಕ್ರಮದಡಿ ಜಲಮಂಡಳಿಯು ಸ್ವಂತ, ಖಾಸಗಿಯ ಒಟ್ಟು 99 ಟ್ಯಾಂಕರ್ ಬಳಕೆ ಮಾಡಿಕೊಂಡು, ಕಳೆದ 9 ತಿಂಗಳಲ್ಲಿ ಸುಮಾರು 40,420 ಟ್ರಿಪ್ ನೀರು ಪೂರೈಕೆ ಮಾಡಿದೆ. ಈ ಮೂಲಕ ಸುಮಾರು 4.18 ಕೋಟಿ ರೂಪಾಯಿ ಆದಾಯ ಸಂಗ್ರಹಿಸಿದೆ. ಇನ್ನು ಈ ಬಾರಿ 'ಕಾವೇರಿ ಕನೆಕ್ಟ್' ಸೆಂಟರ್ ಹಾಗೂ ಹೆಚ್ಚುವರಿ ಫಿಲ್ಲಿಂಗ್ ಪಾಯಿಂಟ್ಸ್‌ಗಳ ಸಂಖ್ಯೆಯೂ 112ರಷ್ಟಿದ್ದು, ಇಲ್ಲಿಂದ 448 ನೀರು ಭಾದಿತ ಪ್ರದೇಶಗಳ 1260 ಟ್ಯಾಂಕರ್‌ಗಳಿಗೆ ನೀರು ಸರಬರಾಜು ಮಾಡಬೇಕಿದೆ. ಹೀಗಾಗಿ, 221 ಟ್ಯಾಂಕರ್‌ಗಳನ್ನು ಬಳಕೆ ಮಾಡಲು ಮಂಡಳಿ ಲೆಕ್ಕಾಚಾರ ಹಾಕಿಕೊಂಡಿದೆ. ಈ ಪೈಕಿ ಮಂಡಳಿಯವೂ ಸೇರಿದಂತೆ ಈಗಾಗಲೇ 99 ಟ್ಯಾಂಕರ್‌ಗಳು ಕಾರ್ಯನಿರ್ವಹಿಸುತ್ತಿದ್ದು, ಹೊಸದಾದ 60 ಟ್ಯಾಂಕರ್‌ಗಳೂ ಇದಕ್ಕೆ ನೂತನವಾಗಿ ಸೇರ್ಪಡೆಯಾಗಲಿವೆ.

**256 ಕೊಳವೆಬಾವಿ ಕೊರೆಯಲು ಚಿಂತನೆ:** ಜಲಮಂಡಳಿಯು ಕಾವೇರಿ ನೀರು ಮಾತ್ರವಲ್ಲದೆ ಕೊಳವೆಬಾವಿ ನೀರನ್ನೂ ಸರಬರಾಜು ಮಾಡುತ್ತದೆ. ಸ್ವಂತ 10,663 ಕೊಳವೆಬಾವಿಗಳ ಜತೆಗೆ ಕಳೆದ ವರ್ಷ ಸೇರ್ಪಡೆಗೊಂಡ ಜಿಬಿಎಯ 4902 ಸೇರಿ ಒಟ್ಟು ಕೊಳವೆಬಾವಿ ಸಂಖ್ಯೆ 15,565ಕ್ಕೇರಿದೆ ಇಷ್ಟು ಕೊಳವೆಬಾವಿಗಳಿಂದ ಸುಮಾರು 400ರಿಂದ 600 ಎಂಎಲ್‌ಡಿ ನೀರು ಸರಬರಾಜು ಮಾಡುವ ಸಾಮರ್ಥ್ಯ ಹೊಂದಿದೆ. ಆದರೆ, ಸದ್ಯ ಕಾವೇರಿ ನೀರೇ ಇರುವುದರಿಂದ ಮತ್ತು ಅಂತರ್ಜಲ ಸಂರಕ್ಷಣೆಯ ಉದ್ದೇಶದಿಂದ ಹೆಚ್ಚು ಅಂತರ್ಜಲ ನೀರು ಬಳಕೆ ಮಾಡುತ್ತಿಲ್ಲ. ಆದರೂ, ಬೇಸಿಗೆಯಲ್ಲಿ ನೀರಿನ ತೀವ್ರ ಅಭಾವ ಕಂಡು ಬಂದರೆ ಬಳಸಬೇಕಾಗುತ್ತದೆ. ಸದ್ಯ ಇರುವ 15,565 ಕೊಳವೆಬಾವಿಗಳ ಪೈಕಿ 14,707 ಮಾತ್ರ ಸುಸ್ಥಿತಿಯಲ್ಲಿವೆ. ಈ ವರ್ಷದ ಬೇಸಿಗೆ, ಭವಿಷ್ಯದ ಅಗತ್ಯತೆಯೊಂದಿಗೆ 256 ಕೊಳವೆಬಾವಿ ಕೊರೆಯುವ ಚಿಂತನೆ ಮಾಡಿದೆ. ಮುಂಬರುವ ದಿನಗಳಲ್ಲಿನ ಹವಾಮಾನ ಹಾಗೂ ನೀರಿನ ಅಭಾವದ ಅಗತ್ಯತೆಯನ್ನು ಸೂಕ್ಷ್ಮವಾಗಿ ವಿಶ್ಲೇಷಿಸಿ ಈ ನಿರ್ಧಾರ ಕೈಗೊಳ್ಳಲಿದೆ ಎಂದು ಜಲಮಂಡಳಿಯ ಮೂಲಗಳು ತಿಳಿಸಿವೆ.

**ತ್ವರಿತ ಸರಬರಾಜಿಗೆ ಅಗತ್ಯ**

**ಮಂಡಳಿಯ 50 ಸೇರಿದಂತೆ ಗುತ್ತಿಗೆ ಆಧಾರದ 49 ಸಂಚಾರಿ ಕಾವೇರಿ ಯೋಜನೆಯಡಿ 99 ಟ್ಯಾಂಕರ್‌ಗಳಲ್ಲಿ ನೀರು ಪೂರೈಕೆ ಮಾಡಲಾಗುತ್ತಿದೆ. ಇದರ ಜತೆಗೆ ಅನ್ಯ ಉದ್ದೇಶಕ್ಕೆ ವಿವಿಧ ಸಂಸ್ಥೆಗಳಿಗೆ, ಕಟ್ಟಡ ನಿರ್ಮಾಣ ಹಾಗೂ ನಗರ ವಿವಿಧ ಕಾಮಗಾರಿಗಳಿಗೆ ಸಂಸ್ಕರಿಸಿದ ನೀರನ್ನೂ ಸರಬರಾಜು ಮಾಡಬೇಕಿದೆ. ಹಾಗಾಗಿ, 60 ಟ್ಯಾಂಕರ್‌ಗಳನ್ನು ಹೆಚ್ಚುವರಿಯಾಗಿ ಕಾರ್ಯಾಚರಣೆಗೆ ನಿಯೋಜಿಸಲಾಗುತ್ತಿದೆ. ಇದರಿಂದ ತ್ವರಿತ ನೀರು ಪೂರೈಕೆ ಹಾಗೂ ಸಿಂಟೆಕ್ಸ್ ತುಂಬಿಸಲು ಅನುಕೂಲವಾಗಲಿದೆ ಎನ್ನುತ್ತಾರೆ ಹಿರಿಯ ಅಧಿಕಾರಿಯೊಬ್ಬರು.**

## ಗಲ್ಫ್ ಯುದ್ಧದ ಎಫೆಕ್ಟ್: ಸದ್ದಿಲ್ಲದೆ ಏರಿಕೆಯಾಯ್ತು ದಿನಸಿ ಬೆಲೆ..!



• ಉದಯವಾಹಿನಿ, ಬೆಂಗಳೂರು

ಅಡುಗೆ ಅನಿಲ ಬೆಲೆ ಏರಿಕೆ ಬೆನ್ನಲ್ಲೇ ದಿನಸಿ ಬೆಲೆ ಸದ್ದಿಲ್ಲದೆ ಏರಿಕೆಯಾಗುತ್ತಿದ್ದು, ಗ್ರಾಹಕರ ಜೇಬಿಗೆ ಕತ್ತರಿ ಬಿದ್ದಂತಾಗಿದೆ.ಈಗಾಗಲೇ ಅಡುಗೆ ಎಣ್ಣೆ, ಬೇಳೆ ಕಾಳು, ಕಡಲೆ ಬೀಜಗಳ ಬೆಲೆ 200ರ ಆಸುಪಾಸಿನಲ್ಲಿದ್ದು, ಎಲ್ಲಾ ದಿನಸಿಗಳ ಬೆಲೆ ಶತಕದತ್ತ ಮುನ್ನುಗ್ಗುತ್ತಿವೆ. ಮುಂದಿನ ದಿನಗಳಲ್ಲಿ ಮತ್ತಷ್ಟು ಬೆಲೆ ಏರಿಕೆಯಾಗುವ ದೃಷ್ಟಿಯಿಂದ ಜನರು ಮುಂಜಾಗ್ರತಾ ಕ್ರಮವಾಗಿ ಯುಗಾದಿ ಹಬ್ಬಕ್ಕಾಗಿ ಈಗಿನಿಂದಲೇ ದಿನಸಿ ಖರೀದಿಯಲ್ಲಿ ತೊಡಗಿದ್ದು, ಡಿ ಮಾರ್ಟ್, ಆರ್‌ಎಂಸಿ ಸೇರಿದಂತೆ ದಿನಸಿ ಅಂಗಡಿಗಳಿಗೆ ಮುಗಿಬಿದ್ದು, ಹಬ್ಬಕ್ಕೆ ಬೇಕಾದ ವಸ್ತುಗಳನ್ನು ಖರೀದಿಸುತ್ತಿರುವ ದೃಶ್ಯಗಳು ರಾಜಧಾನಿ ಬೆಂಗಳೂರಿನಲ್ಲಿ ಕಂಡುಬಂದವು. ಮಧ್ಯಮ ವರ್ಗದ ಜನರಿಗೆ ಬೆಲೆ ಏರಿಕೆಯ ಗಾಯದ ಮೇಲೆ ಬರೆ ಎಳೆದಂತಾಗಿದ್ದು, ರಾಜಧಾನಿ ಜೀವನ ಕಷ್ಟಕರವಾದಂತಾಗಿದೆ. ಯಾವ ದಿನಸಿ ವಸ್ತುಗಳ ಬೆಲೆಯೂ ಸುಲಭವಾಗಿ ಕೈಗೆಟುಕದಂತಾಗಿದೆ. ದಿನಸಿ ವಸ್ತುಗಳ ಬೆಲೆ ನೋಡುವುದಾದರೆ, ಗುಣಮಟ್ಟ ಸೋನಾ ಮಸೂರಿ ಅಕ್ಕಿ ಕೆಜಿಗೆ 60 ರಿಂದ 70 ರೂ., ಧನಿಯಾ ಕೆ.ಜಿಗೆ 160 ರಿಂದ 200ರೂ., ಕಡಲೆಬೀಜ 180 ರಿಂದ 200 ರೂ., ಉದ್ದಿನಬೇಳೆ 180 ರಿಂದ 200 ರೂ., ಒಣಮೆಣಸು 250 ರಿಂದ 300 ರೂ., ಬಾಸುಮತಿ ಅಕ್ಕಿ 150 ರಿಂದ 200 ರೂ., ಸಕ್ಕರೆ 45, ಅಡುಗೆ ಎಣ್ಣೆ 180 ರಿಂದ 200 ರೂ., ತೊಗರಿಬೇಳೆ 150 ರಿಂದ 200 ರೂ., ಹೆಸರುಬೇಳೆ 200 ರೂ., ಕಡಲೆಬೇಳೆ 150 ರೂ.ಗೆ ಮಾರಾಟವಾಗುತ್ತಿವೆ.

ಊರಹಬ್ಬ, ಜಾತ್ರೆ, ಮದುವೆ ಸಮಾರಂಭಗಳು ಹೆಚ್ಚಾಗಿ ನಡೆಯುತ್ತಿದ್ದು, ಬೇಡಿಕೆಯೂ ಸಹ ಹೆಚ್ಚಾಗಿದೆ. ಉತ್ಪಾದನೆ ಕುಂಠಿತ ಹಾಗೂ ಮಧ್ಯಪ್ರಾಚ್ಯದ ಸಂಘರ್ಷದಿಂದ ಅಗತ್ಯ ವಸ್ತುಗಳ ಸರಬರಾಜಿನಲ್ಲಿ ವ್ಯತ್ಯಯವಾಗಿರುವುದು ಬೆಲೆ ಏರಿಕೆಗೆ ಕಾರಣವಾಗಿದೆ. ಹಿಂದೂ ಸಂಪ್ರದಾಯದ ಪ್ರಕಾರ ಹೊಸ ವರ್ಷವಾದ ಯುಗಾದಿ ಹಬ್ಬಕ್ಕೆ ಭರದ ಸಿದ್ಧತೆಗಳು ನಡೆಯುತ್ತಿದ್ದು, ಬೆಲೆ ಏರಿಕೆ ಮಧ್ಯಮವರ್ಗದವರಿಗೆ ನುಂಗಲಾರದ ತುತ್ತಾಗಿ ಪರಿಣಮಿಸಿದೆ. ಮುಂದಿನ ದಿನಗಳಲ್ಲಿ ಇನ್ನೂ ಬೆಲೆ ಏರಿಕೆಯಾಗುವ ಸಾಧ್ಯತೆಯಿದ್ದು, ಮಧ್ಯಮ ವರ್ಗದವರ ಜೀವನ ತುಂಬಾ ಕಷ್ಟಕರವಾಗಲಿದೆ.

## ರಾಜ್ಯದಲ್ಲಿ ಸದ್ಯಕ್ಕೆ ಗ್ಯಾಸ್ ಸಿಲಿಂಡರ್ ಪೂರೈಕೆಯಲ್ಲಿ ಯಾವುದೇ ಸಮಸ್ಯೆಯಿಲ್ಲ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಗೃಹ, ವಾಣಿಜ್ಯ ಬಳಕೆಯ ಗ್ಯಾಸ್ ಸಿಲಿಂಡರ್‌ಗಳ ಪೂರೈಕೆಯಲ್ಲಿ ಸದ್ಯಕ್ಕೆ ಯಾವುದೇ ಸಮಸ್ಯೆಯಿಲ್ಲ ಎಂದು ಅನಿಲ ಕಂಪೆನಿಯ ಅಧಿಕಾರಿಗಳು ಸರ್ಕಾರಕ್ಕೆ ಮನವರಿಕೆ ಮಾಡಿಕೊಟ್ಟಿದ್ದಾರೆ. ವಸಂತನಗರದ ಆಹಾರ ಭವನದಲ್ಲಿಂದು ನಡೆದ ಐಒಸಿ, ಬಿಪಿಸಿ,ಎಚ್‌ಪಿಸಿ, ಜಿಎಐಎಲ್ (ಗಾಲಾ) ಸಂಸ್ಥೆಗಳ ಅಧಿಕಾರಿಗಳು ಆಹಾರ ಇಲಾಖೆ ಸಚಿವ ಕೆ.ಎಚ್. ಮುನಿಯಪ್ಪರೊಂದಿಗೆ ನಡೆದ ಸಭೆಯಲ್ಲಿ ಇಂಧನ ಕೊರತೆ, ಪೂರೈಕೆ ಬಗ್ಗೆ ವಿವರಗಳನ್ನು ನೀಡಿದರು. ಜಾಗತಿಕ ಮಟ್ಟದಲ್ಲಿ ಯುದ್ಧದ ಕಾರಣದಿಂದ ಅನಿಲದ ವ್ಯಾಸಲ್ (ಶಿಫ್‌ಗಳಿಗೆ) ಹಾನಿ ಉಂಟಾದ ಹಿನ್ನೆಲೆಯಲ್ಲಿ ಅನಿಲ ಸಮಸ್ಯೆ ಉಂಟಾಗಿದ್ದರೂ ಗ್ರಾಹಕರು ಯಾವುದೇ ಆತಂಕಪಡುವ ಅಗತ್ಯವಿಲ್ಲ ಎಂದು ಸ್ಪಷ್ಟನೆ ನೀಡಿದ್ದಾರೆ.

ಸಾಮಾನ್ಯವಾಗಿ ಜನರು ಉಪಯೋಗಿಸುವ ಗೃಹ ಬಳಕೆ ಸಿಲಿಂಡರ್ ಮತ್ತು ವಾಣಿಜ್ಯ ಬಳಕೆ ಸಿಲಿಂಡರ್‌ಗಳ ಪೂರೈಕೆಯಲ್ಲಿ ಸದ್ಯ ಯಾವುದೇ ವ್ಯತ್ಯಯವಾಗುವುದಿಲ್ಲ. ಸುಮಾರು 1 ಸಾವಿರ ಮೆಟ್ರಿಕ್ ಟನ್, ಅಂದರೆ ಒಂದು ದಿನಕ್ಕೆ ಸುಮಾರು 50 ಸಾವಿರ ವಾಣಿಜ್ಯ ಬಳಕೆ ಸಿಲಿಂಡರ್‌ಗಳು (19 ಕೆಜಿ) ಬೇಕಾಗುತ್ತದೆ. ಗೃಹ ಬಳಕೆಗೆ ಸುಮಾರು 5 ಸಾವಿರ ಮೆಟ್ರಿಕ್ ಟನ್ ಅಂದರೆ ದಿನಕ್ಕೆ ಸುಮಾರು 3.5 ಕೋ. ಸಿಲಿಂಡರ್‌ಗಳು (14.2 ಕೆಜಿ) ಬೇಕಾಗುತ್ತದೆ. ಇದು ಪ್ರತಿದಿನ ರಾಜ್ಯದ ಅವಶ್ಯಕತೆಯಾಗಿದ್ದು, ಸದ್ಯ ಇದರ ಪೂರೈಕೆಯಲ್ಲಿ ಯಾವುದೇ ವ್ಯತ್ಯಯವಾಗುವುದಿಲ್ಲ ಎಂದು ಅಧಿಕಾರಿಗಳು ಸಚಿವರಿಗೆ ಮನವರಿಕೆ ಮಾಡಿಕೊಟ್ಟಿದ್ದಾರೆ. ಜನರು ಆತಂಕಪಡುವ ಅಗತ್ಯವಿಲ್ಲ. 3.45 ಕೋಟಿ ಮನೆಗಳಿಗೆ ಸಿಲಿಂಡರ್‌ಗಳನ್ನು ನಿರಾಂತಕವಾಗಿ ಒದಗಿಸಬಹುದಾಗಿದೆ. ಭಾರತದಲ್ಲಿ ಶೇ.30ರಷ್ಟು ಮಾತ್ರ ಉತ್ಪಾದನೆ ಇದೆ, ಉಳಿದ ಶೇ.60 ರಿಂದ 70ರಷ್ಟು ಆಮದು ಮಾಡಿಕೊಳ್ಳುತ್ತಿದ್ದೇವೆ. ಅಮೇರಿಕಾ, ಗಲ್ಫ್, ರಷ್ಯಾ ದೇಶಗಳಿಂದ ಆಮದು ಬರುತ್ತಿದೆ. ಯುದ್ಧದ ಪರಿಸ್ಥಿತಿಯಿಂದ ಸ್ವಲ್ಪ ತಡವಾಗುತ್ತಿದೆ. ಆದರೂ ಜನ ಆತಂಕಪಡುವ ಅಗತ್ಯವಿಲ್ಲ. ಹೊಟೇಲ್, ರೆಸ್ಟೋರೆಂಟ್, ಕಲ್ಯಾಣ ಮಂಟಪಗಳು ಸೇರಿದಂತೆ ವಿವಿಧೆಡೆ ವಾಣಿಜ್ಯ ಬಳಕೆಗೆ ನಿಗಧಿತ ಸಿಲಿಂಡರ್‌ಗಳನ್ನು ಒದಗಿಸಬಹುದಾಗಿದೆ. ಆದರೆ ಹೆಚ್ಚುವರಿ ಸಿಲಿಂಡರ್‌ಗಳನ್ನು ಕೇಳಿದರೆ ಕಷ್ಟಸಾಧ್ಯವಾಗುತ್ತದೆ. ಮೊದಲು ಮನೆ ಬಳಕೆಗೆ ಆದ್ಯತೆ ನೀಡಿ, ಕಮರ್ಷಿಯಲ್ ವಿಚಾರದಲ್ಲಿ ಆದ್ಯತೆ ಮೇರೆಗೆ ಆಸ್ಪತ್ರೆಗಳು, ಶಾಲಾ, ಕಾಲೇಜುಗಳ ಸರಬರಾಜಿನಲ್ಲಿ ವ್ಯತ್ಯಯವಾಗದಂತೆ ನೋಡಿಕೊಂಡು ನಂತರ ಹೊಟೇಲ್, ಕಲ್ಯಾಣಮಂಟಪಗಳಿಗೆ ಆದ್ಯತೆಯ ಮೇರೆಗೆ ಸಿಲಿಂಡರ್‌ಗಳನ್ನು ವಿತರಿಸುವ ಬಗ್ಗೆ ಅಧಿಕಾರಿಗಳು ಚರ್ಚೆ ನಡೆಸಿದ್ದಾರೆ.

## ಮೂರು ತಿಂಗಳೊಳಗಾಗಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆಯರ ನೇಮಕ

• ಉದಯವಾಹಿನಿ, ಬೆಂಗಳೂರು



ರಾಜ್ಯದ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತರು ಮತ್ತು ಸಹಾಯಕೀಯರ ಹುದ್ದೆಗಳನ್ನು 90 ದಿನಗಳ ಒಳಗಾಗಿ ಭರ್ತಿ ಮಾಡಲು ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ತಿಳಿಸಿದ್ದಾರೆ. ವಿಧಾನಸಭೆಯಲ್ಲಿಂದು ಪ್ರಶ್ನೋತ್ತರದ ಅವಧಿಯಲ್ಲಿ ಗುರ್ಮೆ ಸುರೇಶ್‌ಶೆಟ್ಟಿ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಬಡವರ ಮಕ್ಕಳು ಓದುವ ಅಂಗನವಾಡಿ ಕೇಂದ್ರಗಳಲ್ಲಿ ಉತ್ತಮ ವಾತಾವರಣ ಇರಬೇಕು ಎಂಬುದು ಸರ್ಕಾರದ ಬದ್ಧತೆ. ಈ ನಿಟ್ಟಿನಲ್ಲಿ ಎಲ್ಲಿಯೂ ಹುದ್ದೆಗಳನ್ನು ಖಾಲಿ ಬಿಡಲು ಅವಕಾಶ ನೀಡುತ್ತಿಲ್ಲ ಎಂದರು. ತೆರವಾದ ಹುದ್ದೆಗಳಿಗೆ ಸ್ಥಳೀಯವಾಗಿಯೇ 12 ಜನ ಸದಸ್ಯರು ಇರುವ ಜಿಲ್ಲಾಧಿಕಾರಿಗಳ ನೇತೃತ್ವದ ಸಮಿತಿ ನೇಮಕಾತಿ ಪ್ರಕ್ರಿಯೆಗಳನ್ನು ಕೈಗೊಳ್ಳಲಿದೆ. 90 ದಿನಗಳಲ್ಲಿ ಅದು ಮುಗಿಯಬೇಕು ಎಂದು ಹೇಳಿದರು. ಅಂಗನವಾಡಿ ಕಾರ್ಯಕರ್ತರು ಆಯಾ ಗ್ರಾಮಗಳಲ್ಲೇ ವಾಸವಿರಬೇಕು ಎಂಬುದನ್ನು ಕಡ್ಡಾಯವಾಗಿ ಜಾರಿಗೊಳಿಸುತ್ತಿರುವುದಾಗಿ ತಿಳಿಸಿದರು.

ತೇರದಾಳ ಕ್ಷೇತ್ರದ ಶಾಸಕ ಸಿದ್ದು ಸವದಿ, ಉದ್ಯೋಗಿನಿ ಯೋಜನೆಯ ಬಗ್ಗೆ ಪ್ರಶ್ನೆ ಕೇಳಿದಾಗ ಉತ್ತರ ನೀಡಿದ ಸಚಿವರು, ಉದ್ಯೋಗಿನಿ ಯೋಜನೆಗೆ ಫಲಾನುಭವಿಗಳನ್ನು ಆಯ್ಕೆ ಮಾಡಲು ಶಾಸಕರ ನೇತೃತ್ವದಲ್ಲಿ ಸಮಿತಿಗಳಿರುತ್ತವೆ. ಶಾಸಕರು ಫಲಾನುಭವಿಗಳ ಆಯ್ಕೆ ಪಟ್ಟಿ ನೀಡುವಲ್ಲಿ ವಿಳಂಬ ಮಾಡುತ್ತಿದ್ದಾರೆ.ಅನಂತರ ಅದನ್ನು ಬ್ಯಾಂಕುಗಳಿಗೆ ಕಳುಹಿಸಿದರೆ ಅಲ್ಲಿ ಎಂಟರಿಂದ ಒಂಬತ್ತು ತಿಂಗಳು ವಿಳಂಬವಾಗುತ್ತಿದೆ. ಸಿಬಿಲ್ ಸ್ಕೋರ್ ಆಧರಿಸಿ ಬ್ಯಾಂಕುಗಳು ಸಾಲ ನೀಡುವ ಪರಿಪಾಠ ಅನುಸರಿಸಿವೆ. ಗ್ರಾಮೀಣ ಭಾಗದಲ್ಲಿ ಮಹಿಳೆಯರಿಗೆ ಸಿಬಿಲ್ ಸ್ಕೋರ್ ಲೆಕ್ಕ ಹಾಕುವುದು ಕಷ್ಟಸಾಧ್ಯಗಳನ್ನು ಸರಳೀಕರಣ ಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.


## ಭೂ ಸ್ವಾಧೀನ ವಿಚಾರದಲ್ಲಿ ರೈತರಿಗೆ ನ್ಯಾಯ ಒದಗಿಸಲು ಮಾರ್ಗಸೂಚಿ ದರ ಪರಿಷ್ಕರಣೆ

• ಉದಯವಾಹಿನಿ, ಬೆಂಗಳೂರು

ಭೂ ಸ್ವಾಧೀನ ಪ್ರಕ್ರಿಯೆ ಪರಿಹಾರದ ವಿಚಾರದಲ್ಲಿ ರೈತರಿಗೆ ಆಗುತ್ತಿರುವ ಅನ್ಯಾಯವನ್ನು ತಪ್ಪಿಸಲು ಕಾಲಕಾಲಕ್ಕೆ ಮಾರ್ಗಸೂಚಿ ದರ ಪರಿಷ್ಕರಣೆ ಮಾಡುವುದೊಂದೇ ಪರಿಹಾರ ಎಂದು ಸಚಿವ ಕೃಷ್ಣ ಭೈರೇಗೌಡ ಅವರು ಅಭಿಪ್ರಾಯಪಟ್ಟಿದ್ದಾರೆ. ವಿಧಾನಪರಿಷತ್‌ನಲ್ಲಿ ಸದಸ್ಯರಾದ ಕೆ.ಎಸ್. ನವೀನ್ ಅವರು 2019 ಕ್ಕೂ ಹಿಂದಿನ ಮಾರ್ಗಸೂಚಿ ದರ ಆಧಾರದಲ್ಲಿ ಈಗಿನ ಭೂಸ್ವಾಧೀನಕ್ಕೆ ಪರಿಹಾರ ನೀಡುವುದು ರೈತರಿಗೆ ನಷ್ಟವಲ್ಲವೇ ಎಂದು ಪ್ರಶ್ನಿಸಿದರು. ಈ ಪ್ರಶ್ನೆಗೆ ಉತ್ತರ ನೀಡಿದ ಕಂದಾಯ ಸಚಿವರು, ಭೂ ಸ್ವಾಧೀನಕ್ಕೆ ರೈತರಿಗೆ ಪರಿಹಾರ ನೀಡುವ ಸಂಬಂಧ 2013ರ ಕಾನೂನಿನಲ್ಲಿ ಸ್ಪಷ್ಟವಾಗಿದೆ. ಈ ಕಾನೂನಿನ ಪ್ರಕಾರ ಭೂ ಸ್ವಾಧೀನಕ್ಕೆ ಪ್ರಾಥಮಿಕ ಅಧಿಸೂಚನೆ ಹೊರಡಿಸಿದ ನಂತರ ಅಂತಹ ಭೂಮಿಗೆ ಹೊಸದಾಗಿ ಮಾರ್ಗಸೂಚಿ ದರವನ್ನು ಪರಿಷ್ಕರಿಸುವುದಿಲ್ಲ ಬದಲಾಗಿ ಹಿಂದಿನ ಮಾರ್ಗಸೂಚಿ ದರ ಅಥವಾ ಹಿಂದಿನ ಮೂರು ವರ್ಷದ ಮಾರುಕಟ್ಟೆಯ ನೋಂದಾಯಿತ ಸೇಲ್ ಡೀಡ್ ದರವನ್ನು ಪರಿಗಣಿಸಲಾಗುತ್ತದೆ. ಆ ಪೈಕಿ ಭೂಮಿ ಹೆಚ್ಚಿನ ದರಕ್ಕೆ ವಹಿವಾಟು ಆಗಿರುವ ಆಧಾರದಲ್ಲಿ ಸರಾಸರಿ ಮೊತ್ತವನ್ನು ಪರಿಹಾರವಾಗಿ ನಿಗದಿಪಡಿಸಲಾಗುತ್ತದೆ ಎಂದು ವಿವರಿಸಿದರು.

ಈ ವೇಳೆ ಮಧ್ಯಪ್ರವೇಶಿಸಿದ ಕೆ.ಎಸ್.ನವೀನ್ ಅವರು ಹಳೆಯ ಮಾರ್ಗಸೂಚಿ ದರದ ಆಧಾರದಲ್ಲೇ ಪರಿಹಾರದ ಮೊತ್ತವನ್ನು ನಿಗದಿಪಡಿಸುವುದು ರೈತರಿಗೆ ಅನ್ಯಾಯ ಮಾಡಿದಂತೆ ಆಗುವುದಿಲ್ಲವೇ? ಎಂಬ ಮರುಪ್ರಶ್ನೆಗೆ ಉತ್ತರ ನೀಡಿದ ಅವರು, ಸರ್ಕಾರ ಪ್ರತಿನಿತ್ಯ ಒಂದಲ್ಲಾ ಒಂದು ಕಾರಣಕ್ಕೆ ಭೂ ಸ್ವಾಧೀನ ಮಾಡುತ್ತಲೇ ಇರುತ್ತದೆ. ಕಾಲದಿಂದ ಕಾಲಕ್ಕೆ ದರ ಪರಿಷ್ಕರಣೆ ಮಾಡದಿದ್ದಲ್ಲಿ ರೈತರಿಗೆ ನಷ್ಟವಾಗುತ್ತದೆ ಎಂಬುದು ಸತ್ಯ. ಇದೇ ಕಾರಣಕ್ಕೆ ನಾವೂ ಸಹ ಮಾರ್ಗಸೂಚಿ ದರ ಪರಿಷ್ಕರಣೆ ಆಗಬೇಕು ಎನ್ನುತ್ತೇವೆ. ಆದರೆ, ಅದಕ್ಕೂ ವಿರೋಧ ವ್ಯಕ್ತಪಡಿಸುತ್ತಾರೆ ಎಂದು ವಿಷಾದಿಸಿದರು.

ಈ ಬಗ್ಗೆಯೂ ಸದನದ ಗಮನ ಸೆಳೆದ ಕೃಷ್ಣಭೈರೇಗೌಡ ಅವರು, ಕೆಲವು ಕಡೆ ಮಾರ್ಗಸೂಚಿ ದರಕ್ಕೂ ಮಾರುಕಟ್ಟೆ ದರಕ್ಕೂ ಅಜಗಜಾಂತರ ವ್ಯತ್ಯಾಸಗಳಿವೆ.



ಕೆಲವು ಕಡೆ ಭೂಮಿ ಮಾರ್ಗಸೂಚಿ ದರ 2 ಲಕ್ಷ ಇದ್ದರೆ, ಮಾರುಕಟ್ಟೆ ಮೌಲ್ಯ 70 ರಿಂದ 80 ಲಕ್ಷ ಇದೆ. ಪರಿಣಾಮ ಕಪ್ಪು ಹಣದ ವಹಿವಾಟಿಗೂ ಇದು ಕಾರಣವಾಗಿದೆ. ಹೀಗಾಗಿ ಈ ಎಲ್ಲಾ ಅಕ್ರಮ ವಹಿವಾಟುಗಳನ್ನೂ ನಿಯಂತ್ರಿಸಿ ರೈತರಿಗೂ ನ್ಯಾಯಬದ್ಧ ಪರಿಹಾರ ನೀಡಲು ಕಾಲಕಾಲಕ್ಕೆ ಮಾರ್ಗಸೂಚಿ ದರ ಪರಿಷ್ಕರಣೆಯೊಂದೇ ಪರಿಹಾರ ಎಂದು ಅವರು ವಿವರಿಸಿದರು.

## ಪಾಲಿಕೆ ಸಿಬ್ಬಂದಿಗಳಿಗೆ ಸಿಗದ ಸಂಬಳ, ಕೆಲಸ-ಕಾರ್ಯ ಬಂದ್ ಮಾಡುವುದಾಗಿ ಎಚ್ಚರಿಕೆ

• ಉದಯವಾಹಿನಿ, ಬೆಂಗಳೂರು




ಬಿಬಿಎಂಪಿಯನ್ನು ಗ್ರೇಟರ್ ಬೆಂಗಳೂರು ಪ್ರಾಧಿಕಾರವನ್ನಾಗಿ ರಚಿಸಿದ ನಂತರ ಅಲ್ಲಿನ ಹಣಕಾಸು ಪರಿಸ್ಥಿತಿ ಹದಗೆಟ್ಟಿದೆ ಎಂಬ ಆರೋಪ ಕೇಳಿ ಬರುತ್ತಿರುವ ಸಂದರ್ಭದಲ್ಲಿ ಜಿಬಿಎ ಸಿಬ್ಬಂದಿಗಳಿಗೆ ಸಕಾಲಕ್ಕೆ ವೇತನ ಪಾವತಿಸಲು ಸಾಧ್ಯವಾಗದಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಬೆಂಗಳೂರು ಪಶ್ಚಿಮ ನಗರಪಾಲಿಕೆ ಸಿಬ್ಬಂದಿಗಳಿಗೆ ಫೆಬ್ರವರಿ ತಿಂಗಳ ವೇತನ ಪಾವತಿಯಾಗಿಲ್ಲ. ಹೀಗಾಗಿ ಜಿಬಿಎ ನೌಕರರ ಸಂಘದ ಅಧ್ಯಕ್ಷಅಮೃತ್ ರಾಜ್ ಪಶ್ಚಿಮ ನಗರಪಾಲಿಕೆಯ ಆಯುಕ್ತರಿಗೆ ಪತ್ರ ಬರೆದು ಕೂಡಲೇ ಸಿಬ್ಬಂದಿಗಳಿಗೆ ವೇತನ ಪಾವತಿಸುವಂತೆ ಆಗ್ರಹಿಸಿದ್ದಾರೆ. ಪಶ್ಚಿಮ ವಲಯದ ನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ, ನೌಕರರಿಗೆ ಮಾರ್ಚ್ 11 ರೊಳಗೂ ಫೆಬ್ರವರಿ ತಿಂಗಳ ವೇತನ ಪಾವತಿಸದ ಕಾರಣ ಹಲವು ಆರ್ಥಿಕ ಸಮಸ್ಯೆಗಳು ಎದುರಾಗುತ್ತಿವೆ ಎಂದು ಸಿಬ್ಬಂದಿ ತಮ್ಮ ಅಳಲನ್ನು ಸಂಘದ ಪದಾಧಿಕಾರಿಗಳ ಮುಂದೆ ವ್ಯಕ್ತಪಡಿಸಿದ್ದರು. ಮನೆಬಾಡಿಗೆ ಪಾವತಿ, ಮಕ್ಕಳ ಶಾಲಾ ಶುಲ್ಕ ಹಾಗೂ ದಿನನಿತ್ಯದ ಅಗತ್ಯ ವಸ್ತುಗಳನ್ನು ಖರೀದಿಸುವುದಕ್ಕೂ ಕಷ್ಟವಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

ಈ ಹಿನ್ನೆಲೆಯಲ್ಲಿ 24 ಗಂಟೆಗಳೊಳಗೆ ಫೆಬ್ರವರಿ ತಿಂಗಳ ವೇತನವನ್ನು ಪಾವತಿಸುವಂತೆ ಸಂಘವು ಆಯುಕ್ತರಿಗೆ ಮನವಿ ಮಾಡಿದೆ. ಸಂಜೆ ಒಳಗೆ ವೇತನ ಪಾವತಿ ಮಾಡದಿದ್ದರೆ ಪಶ್ಚಿಮ ವಲಯದ ಎಲ್ಲಾ ಕೆಲಸ ಕಾರ್ಯಗಳನ್ನು ಸ್ಥಗಿತಗೊಳಿಸಲಾಗುವುದು ಎಂದು ಪತ್ರದ ಮೂಲಕ ಎಚ್ಚರಿಕೆ ನೀಡಲಾಗಿದೆ.

ಇದೀಗ ಪಶ್ಚಿಮ ನಗರಪಾಲಿಕೆಯಲ್ಲಿ ಆದಾಯ ಕಡಿಮೆ ಇರುವುದರಿಂದಲೇ ವೇತನ ಪಾವತಿಯಲ್ಲಿ ಸಮಸ್ಯೆ ಎದುರಾಗುತ್ತಿದೆ ಎಂಬ ಮಾತುಗಳು ಕೇಳಿ ಬರುತ್ತಿವೆ. ಅತಿ ಹೆಚ್ಚು ವಾರ್ಡುಗಳನ್ನು ಹೊಂದಿರುವ ಈ ಪಾಲಿಕೆಯಲ್ಲಿ ಸಿಬ್ಬಂದಿಗಳ ಸಂಖ್ಯೆಯೂ ಹೆಚ್ಚಾಗಿದೆ. ಆದರೆ ಬರುತ್ತಿರುವ ಆದಾಯದಲ್ಲೇ ಸಿಬ್ಬಂದಿಗಳ ವೇತನ ಪಾವತಿ ಮಾಡಬೇಕು ಹಾಗೂ ಅಭಿವೃದ್ಧಿ ಕಾಮಗಾರಿಗಳನ್ನೂ ಕೈಗೊಳ್ಳಬೇಕಾದ ಪರಿಸ್ಥಿತಿ ಎದುರಾಗಿದೆ.

ನಗರಪಾಲಿಕೆ ರಚನೆಯಾಗಿ ಕೇವಲ ಆರು ತಿಂಗಳು ಮಾತ್ರ ಕಳೆದಿರುವ ಈ ಸಂದರ್ಭದಲ್ಲಿ ವೇತನ ಪಾವತಿಗೆ ಆದಾಯ ಕೊರತೆ ಎದುರಾಗಿರುವುದು ಮುಂದಿನ ದಿನಗಳಲ್ಲಿ ಆಡಳಿತ ಹೇಗೆ ಸಾಗಲಿದೆ ಎಂಬ ಪ್ರಶ್ನೆಯನ್ನು ಸಿಬ್ಬಂದಿಗಳಲ್ಲಿ ಮೂಡಿಸಿದೆ. ಇದೇ ವೇಳೆ ಸಮಸ್ಯೆ ಶೀಘ್ರದಲ್ಲೇ ಪರಿಹಾರವಾಗದಿದ್ದರೆ ಪಶ್ಚಿಮ ನಗರಪಾಲಿಕೆಯ ಆಡಳಿತ ಹಾಗೂ ಸೇವೆಗಳ ಮೇಲೂ ಪರಿಣಾಮ ಬೀರುವ ಸಾಧ್ಯತೆ ಇದೆ ಎಂಬ ಆತಂಕ ಎದುರಾಗಿದೆ.

## ಪಾಸ್ ವಿತೌಟ್ ಹಿಂದಿ ನಿಯಮ ಜಾರಿಗೆ ಆಗ್ರಹ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ದ್ವಿಭಾಷಾ ನೀತಿ ಜಾರಿಯಾಗುವವರೆಗೂ ವಿದ್ಯಾರ್ಥಿಗಳಿಗೆ ಹಿಂದಿ ಪರೀಕ್ಷೆಯನ್ನು ಕಡ್ಡಾಯಗೊಳಿಸದಂತೆ 'ಪಾಸ್ ವಿತೌಟ್ ಹಿಂದಿ' ನಿಯಮವನ್ನು ಕೂಡಲೇ ಜಾರಿಗೊಳಿಸುವಂತೆ ಆಗ್ರಹಿಸಿ ಹಿಂದಿ ಹೇರಿಕೆ ವಿರೋಧಿ ಒಕ್ಕೂಟದ ಸದಸ್ಯರು ಮಲ್ಲೇಶ್ವರದಲ್ಲಿ ಇರುವ ಕರ್ನಾಟಕ ಪಠ್ಯಪುಸ್ತಕ ಸಂಘದ ಎದುರು ಪ್ರತಿಭಟನೆ ನಡೆಸಿದರು.

'ಪಾಸ್ ವಿತೌಟ್ ಹಿಂದಿ' ನಿಯಮ ಜಾರಿಗೊಳಿಸದಿದ್ದರೆ ಮಾರ್ಚ್ 30ರಂದು ನಡೆಯುವ ಹಿಂದಿ ಭಾಷೆಯ ಪರೀಕ್ಷೆ ದಿನದಂದು ಪರೀಕ್ಷಾ ಕೇಂದ್ರಗಳಿಗೆ ಮುತ್ತಿಗೆ ಹಾಕಲಾಗುವುದು. ಈ ಹಿಂದಿನ ಶೈಕ್ಷಣಿಕ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳಲ್ಲಿ ಹಿಂದಿ ಭಾಷೆಯಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳನ್ನು ಉತ್ತೀರ್ಣರೆಂದು ಘೋಷಿಸಿ, ಅವರ ಶೈಕ್ಷಣಿಕ ಮುನ್ನಡೆಗೆ ಅವಕಾಶ ಕಲ್ಪಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

2026-27ನೇ ಶೈಕ್ಷಣಿಕ ಸಾಲಿನಲ್ಲಿ ದ್ವಿಭಾಷಾ ನೀತಿಯನ್ನು ಜಾರಿಗೊಳಿಸಬೇಕು. ಥೋರಟ್ ಆಯೋಗದ ವರದಿಯನ್ನು ಸಾರ್ವಜನಿಕ ಚರ್ಚೆಗೆ ಅವಕಾಶ ಕಲ್ಪಿಸಬೇಕು. ಹಿಂದಿ ಭಾಷಾ ಶಿಕ್ಷಕರ ನೇಮಕಾತಿಯನ್ನು ರದ್ದುಪಡಿಸಬೇಕು. ಈಗಾಗಲೇ ನೇಮಕಗೊಂಡಿರುವ ಶಿಕ್ಷಕರನ್ನು ಕನ್ನಡ ಭಾಷಾ ಶಿಕ್ಷಕರಾಗಿ ನಿಯೋಜಿಸಲು ಕ್ರಮ ಕೈಗೊಳ್ಳಬೇಕು. ರಾಜ್ಯದ ಯಾವುದೇ ಹಂತದ ಪಠ್ಯಕ್ರಮದಲ್ಲಿ ಹಿಂದಿ ರಾಷ್ಟ್ರಭಾಷೆ ಎಂದು ಬಿಂಬಿಸುವ ಕಲ್ಪಿತ ವಿಷಯವನ್ನು ತೆಗೆದು ಹಾಕಬೇಕು ಎಂದು ಒತ್ತಾಯಿಸಿದರು.

# ಯಾರಿಗ್ ಹೇಳೋಣ ನಮ್ ಪ್ರಾಬ್ಲಮ್ಮು

### ನಮ್ಮ ಬೀದಿಯಿಂದ ನಾಯಿ ಎತ್ಕೊಂಡಿ ಹೋಗಿ ಅಂತ ಒಂದೇ ಸಮನೆ ದೂರು!

• ಉದಯವಾಹಿನಿ, ಬೆಂಗಳೂರು

ನಗರ ಪ್ರದೇಶಗಳ ನಾಯಿ ಹಾವಳಿ ಸುದ್ದಿ ಸುಪ್ರೀಂ ಕೋರ್ಟ್ ವರೆಗೂ ಹೋದ ಬಳಿಕ, ಬೆಂಗಳೂರಲ್ಲಿ ನಾಯಿ ಬಗ್ಗೆ ದೂರು ಕೊಡುವವರ ಸಂಖ್ಯೆ ಹೆಚ್ಚಾಗಿದೆ. ಅದರಲ್ಲೂ ಬೆಂಗಳೂರಿನ ಉತ್ತರ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಫೋನ್ ಇನ್ ಕಾರ್ಯಕ್ರಮ ನಡೆಸಿದಾಗಲೂ ಶೇ 70% ರಷ್ಟು ದೂರು ಬರುತ್ತಿರೋದು ನಾಯಿ ಬಗ್ಗೆಯೇ ಆಗಿದೆ. ಆದರೆ ಅಧಿಕಾರಿಗಳಿಗೆ ಕಾನೂನು ಚೌಕಟ್ಟಿನಲ್ಲಿ ಕೆಲಸ ಮಾಡುವುದು ಅನಿವಾರ್ಯವಾಗಿದ್ದರಿಂದ ಜನರು ದೂರು ನೀಡಿದ ತಕ್ಷಣ ನಾಯಿಗಳನ್ನು ಬೇರೆ ಕಡೆಗೆ ಶಿಫ್ಟ್ ಮಾಡಲು ಸಾಧ್ಯ ಇಲ್ಲ ಅಂತಿದಾರೆ.

**ಕಾನೂನು, ಸಾರ್ವಜನಿಕ ಸುರಕ್ಷತೆ ಮತ್ತು ಪ್ರಾಣಿ ಕಲ್ಯಾಣ ಮುಖ್ಯ:** ಇತ್ತೀಚಿನ ದಿನಗಳಲ್ಲಿ ನಗರಗಳಲ್ಲಿ ಬೀದಿ ನಾಯಿಗಳ ವಿಷಯವು ಹೆಚ್ಚು ಚರ್ಚೆಗೆ ಕಾರಣವಾಗುತ್ತಿದೆ. ಸಾರ್ವಜನಿಕರಿಗೆ ಕೆಲವೊಮ್ಮೆ ನಾಯಿಗಳಿಂದ ಭಯ ಮತ್ತು ಅಸುರಕ್ಷಿತ ಭಾವನೆ ಉಂಟಾಗುತ್ತದೆ. ಮತ್ತೊಂದೆಡೆ ಪ್ರಾಣಿ ಪ್ರಿಯರು ಪ್ರಾಣಿಗಳ ರಕ್ಷಣೆಯ ಬಗ್ಗೆ ಕಾಳಜಿ ವ್ಯಕ್ತಪಡಿಸುತ್ತಾರೆ. ಈ ಎರಡು ದೃಷ್ಟಿಕೋನಗಳ ನಡುವೆ ಸಮತೋಲನ ಸಾಧಿಸುವುದು ಸಮಾಜಕ್ಕೂ, ಆಡಳಿತಕ್ಕೂ ಒಂದು ಸವಾಲಾಗಿದೆ.

**ಬೇರೆಡೆಗೆ ಸ್ಥಳಾಂತರಿಸಬೇಕೆಂದು ಒತ್ತಾಯ:** ನಗರ ಪ್ರದೇಶಗಳಲ್ಲಿ ಸಾಮಾನ್ಯವಾಗಿ ಸಾರ್ವಜನಿಕರಿಂದ ಬರುವ ದೂರುಗಳು ನಾಯಿಗಳು ಕಚ್ಚಲು ಬರುತ್ತಿವೆ, ಗುಂಪಾಗಿ ಹಿಂಬಾಲಿಸುತ್ತಿವೆ, ರಾತ್ರಿ ವೇಳೆ ಶಬ್ದ ಮಾಡುತ್ತಿವೆ ಎಂಬುದಾಗಿವೆ. ಈ ಹಿನ್ನೆಲೆಯಲ್ಲಿ ಕೆಲವರು ನಾಯಿಗಳನ್ನು ಸಂಪೂರ್ಣವಾಗಿ ತೆಗೆದುಹಾಕಬೇಕು ಅಥವಾ



ಬೇರೆಡೆಗೆ ಸ್ಥಳಾಂತರಿಸಬೇಕು ಎಂಬ ಬೇಡಿಕೆಯನ್ನು ವ್ಯಕ್ತಪಡಿಸುತ್ತಾರೆ. ಆದರೆ ಪ್ರಸ್ತುತ ಕಾನೂನುಗಳ ಪ್ರಕಾರ ಇದು ಸಾಧ್ಯವಿಲ್ಲ ಎಂಬುದು ಬಹುತೇಕ ಜನರಿಗೆ ತಿಳಿದಿಲ್ಲ.

**ಕಾನೂನು ಏನಿದೆ?:** ಭಾರತದಲ್ಲಿ ಪ್ರಾಣಿ ಕಲ್ಯಾಣಕ್ಕೆ ಸಂಬಂಧಿಸಿದಂತೆ ಜಾರಿಯಲ್ಲಿರುವ Animal Birth Control Rules , 2023 ಪ್ರಕಾರ ಬೀದಿ ನಾಯಿಗಳ ಸಂಖ್ಯೆಯನ್ನು ನಿಯಂತ್ರಿಸಲು ಸ್ಥಳೀಯ ಸಂಸ್ಥೆಗಳು ಸ್ಟೆರಿಲೈಸೇಶನ್, ರೇಬೀಸ್ ಲಸಿಕೆ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಬೇಕು. ಈ ನಿಯಮಗಳ ಪ್ರಕಾರ ನಾಯಿಗಳನ್ನು ಹಿಡಿದು ಶಸ್ತ್ರಚಿಕಿತ್ಸೆ ಮಾಡಿ ಲಸಿಕೆ ನೀಡಿದ ನಂತರ ಅದೇ ಸ್ಥಳಕ್ಕೆ ಬಿಡಬೇಕು. ಇದರಿಂದ ನಾಯಿಗಳ ಸಂಖ್ಯೆಯೂ ನಿಯಂತ್ರಣದಲ್ಲಿರುತ್ತದೆ ಮತ್ತು ರೇಬೀಸ್ ರೋಗವೂ ತಡೆಗಟ್ಟಬಹುದು.

> **ಎಬಿಸಿ ಕಾರ್ಯಕ್ರಮಗಳು, ರೇಬೀಸ್ ಲಸಿಕೆ, ಸಾರ್ವಜನಿಕ ಜಾಗೃತಿ ಮತ್ತು ಸಮಾಜದ ಸಹಕಾರ ಈ ನಾಲ್ಕು ಅಂಶಗಳು ಒಂದಾಗಿ ಕಾರ್ಯನಿರ್ವಹಿಸಿದರೆ ಮಾತ್ರ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಹಿಡಿಯಬಹುದು.**
> **ವಿವಾದಗಳಿಗಿಂತ ಅರಿವು ಮತ್ತು ಸಹಕಾರ ಹೆಚ್ಚಾದಾಗ ಮಾತ್ರ ನಗರಗಳಲ್ಲಿ ಮಾನವ ಮತ್ತು ಪ್ರಾಣಿಗಳ ಸಹಬಾಳ್ವೆ ಸಾಧ್ಯವಾಗುತ್ತದೆ.**
> -ಡಾ.ಎಚ್‌ಕೆ ಗಂಗಾಧರಯ್ಯ

**ಸಾರ್ವಜನಿಕರು ಮಾಡುವ ತಪ್ಪುಗಳೇನು?:** ನಗರ ಪ್ರದೇಶಗಳಲ್ಲಿ ಬೀದಿ ನಾಯಿಗಳ ಸಂಖ್ಯೆ ಹೆಚ್ಚಾಗಲು ಕೆಲವು ಮಾನವೀಯ ಕಾರಣಗಳೂ ಇವೆ. ಎಲ್ಲೆಂದರಲ್ಲಿ ಕಸ ಎಸೆಯುವುದು, ಆಹಾರ ಅವಶೇಷಗಳನ್ನು ರಸ್ತೆಯಲ್ಲಿ ಹಾಕುವುದು, ಪೆಟ್ ನಾಯಿಗಳನ್ನು ರಸ್ತೆ ಮೇಲೆ ಬಿಟ್ಟುಹೋಗುವುದು ಮುಂತಾದ ಕಾರಣಗಳಿಂದ ನಾಯಿಗಳ ಸಂಖ್ಯೆ ಸಹಜವಾಗಿ ಹೆಚ್ಚುತ್ತದೆ. ಆದ್ದರಿಂದ ಈ ಸಮಸ್ಯೆ ಕೇವಲ ಆಡಳಿತದ ಜವಾಬ್ದಾರಿ ಮಾತ್ರವಲ್ಲ ಸಮಾಜದ ಸಮೂಹ ಜವಾಬ್ದಾರಿಯಾಗಿದೆ.

**ಬೀದಿ ನಾಯಿ ಸಮಸ್ಯೆಗಳಿಗೆ ಶಾಶ್ವತ ಪರಿಹಾರ**

**ಸಾರ್ವಜನಿಕರೂ ತಮ್ಮ ಜವಾಬ್ದಾರಿಯನ್ನು ಅರಿತುಕೊಳ್ಳಬೇಕು. ನಾಯಿಗಳಿಗೆ ಕಿರುಕುಳ ನೀಡುವುದು, ಹೊಡೆಯುವುದು ಅಥವಾ ಕಲ್ಲು ಎಸೆಯುವುದು ಕಾನೂನುಬಾಹಿರವಾಗಿದ್ದು, ಇಂತಹ ಕೃತ್ಯಗಳು ನಾಯಿಗಳ ಆಕ್ರಮಣಕಾರಿ ವರ್ತನೆಗೆ ಕಾರಣವಾಗಬಹುದು. ಎಲ್ಲೆಂದರಲ್ಲಿ ಕಸ ಎಸೆಯುವುದನ್ನು ತಪ್ಪಿಸುವುದು ಹಾಗೂ ಸಮಸ್ಯೆ ಇದ್ದರೆ ಸೂಕ್ತವಾಗಿ ಸ್ಥಳೀಯ ಸಂಸ್ಥೆಗೆ ಮಾಹಿತಿ ನೀಡುವುದು ಸಾರ್ವಜನಿಕರ ಕರ್ತವ್ಯವಾಗಿದೆ.**

ಅಂತರಾಳದಿಂದ... EDITORIAL

# ಆರ್ಡರ್ಲಿರ ವ್ಯವಸ್ಥೆ ಅಂತ್ಯಕ್ಕೆ ಬೇಕಿದೆ ಸಾಂಸ್ಥಿಕ ಧೈರ್ಯ



ಪೊಲೀಸ್ ಇಲಾಖೆಯ ಹಿರಿಯ ಅಧಿಕಾರಿಗಳ ಮನೆಗಳಲ್ಲಿ ಆರ್ಡರ್ಲಿರಗಳಾಗಿ ನಿಯೋಜನೆಗೊಂಡಿದ್ದ ಪೊಲೀಸ್ ಸಿಬ್ಬಂದಿಯನ್ನು ವಾಪಸ್ ಕರೆಸಿಕೊಳ್ಳಲು ರಾಜ್ಯ ಪೊಲೀಸ್ ಮಹಾನಿರ್ದೇಶಕ ಎಂ.ಎ. ಸಲೀಂ ಆದೇಶಿಸಿದ್ದಾರೆ. ಆರ್ಡರ್ಲಿರಗಳಾಗಿ ನಿಯೋಜಿತರಾಗಿದ್ದವರನ್ನು ಎಂದಿನ ಪೊಲೀಸ್ ಕೆಲಸಕ್ಕೆ ಮರುನಿಯೋಜನೆ ಮಾಡಲು ಅವರು ಸೂಚಿಸಿದ್ದಾರೆ. ಸಲೀಂ ಅವರು ಇರಿಸಿರುವ ಹೆಜ್ಜೆ ಸ್ವಾಗತಾರ್ಹ. ಆದರೆ, ಹಿಂದೆ ಇದೇ ವಿಚಾರವಾಗಿ ನಡೆದ ಪ್ರಯತ್ನಗಳಿಗೆ ಒದಗಿದ ಸ್ಥಿತಿಯನ್ನು ಗಮನಿಸಿದರೆ, ಸಲೀಂ ಅವರ ಕ್ರಮದ ಬಗ್ಗೆ ಹೆಚ್ಚಿನ ಭರವಸೆ ಇರಿಸಿಕೊಳ್ಳುವ ಅಗತ್ಯ ಕಾಣುವುದಿಲ್ಲ. ಆರ್ಡರ್ಲಿರ ವ್ಯವಸ್ಥೆಯ ಅಡಿಯಲ್ಲಿ, ಪೊಲೀಸ್ ಕಾನ್‌ಸ್ಟೇಬಲ್‌ಗಳನ್ನು ಹಿರಿಯ ಪೊಲೀಸ್ ಅಧಿಕಾರಿಗಳ ಮನೆಗೆಲಸಗಳಿಗೆ ನಿಯೋಜಿಸಲಾಗುತ್ತದೆ. ಇದು ವಸಾಹತುಶಾಹಿ ಕಾಲದ ಪಳೆಯುಳಿಕೆ, ಈಗ ಅಂದಾಜು ಮೂರು ಸಾವಿರ ಮಂದಿಯನ್ನು ಈ ಬಗೆಯಲ್ಲಿ ನಿಯೋಜಿಸಲಾಗಿದ್ದು, ಅವರನ್ನೆಲ್ಲ ಮತ್ತೆ ಪೊಲೀಸ್ ಕೆಲಸಕ್ಕೆ ಮರುನಿಯೋಜಿಸುವ ಉದ್ದೇಶ ಹೊಂದಲಾಗಿದೆ.

ಸಲೀಂ ಅವರ ಆದೇಶಕ್ಕೆ ಪೂರಕವಾಗಿ ರಾಜ್ಯ ಸರ್ಕಾರವು, ಹಿರಿಯ ಪೊಲೀಸ್ ಅಧಿಕಾರಿಗಳು ಖಾಸಗಿಯಾಗಿ ಸಹಾಯಕರನ್ನು ನೇಮಕ ಮಾಡಿಕೊಳ್ಳಬಹುದು ಅಥವಾ ಗೃಹರಕ್ಷಕ ಸಿಬ್ಬಂದಿಯನ್ನು ನೇಮಕಮಾಡಿಕೊಳ್ಳಬಹುದು. ಅವರಿಗೆ ಭತ್ಯೆ ನೀಡಲು ಅವಕಾಶ ಮಾಡಿಕೊಡಲಾಗು ತ್ತದೆ ಎಂದು ಹೇಳಿದೆ. ಈ ಸುಧಾರಣಾ ಕ್ರಮಗಳು ಮೇಲ್ನೋಟಕ್ಕೆ ಚೆನ್ನಾಗಿಯೇ ಇವೆ. ಆದರೆ, ವಾಸ್ತವದಲ್ಲಿ ರಾಜ್ಯವು ಈ ಹಿಂದೆಯೂ ಪ್ರಯತ್ನಗಳನ್ನು ನಡೆಸಿತ್ತು ಎಂಬುದನ್ನು ಮರೆಯಬಾರದು. ಆರ್ಡರ್ಲಿರ ವ್ಯವಸ್ಥೆಯ ಬಗ್ಗೆ ವ್ಯಾಪಕ ಟೀಕೆಗಳು ಬಂದ ನಂತರದಲ್ಲಿ, ಕಾನ್‌ಸ್ಟೇಬಲ್‌ಗಳಿಂದಲೇ ಪ್ರತಿಭಟನೆಗಳು ವ್ಯಕ್ತವಾದ ನಂತರದಲ್ಲಿ 2017ರಲ್ಲಿ ಅದನ್ನು ನಿಷೇಧಿಸಲಾಯಿತು. ಆದರೆ, ನಿಷೇಧವು ಉಪಚಾರದ ಮಾತು ಮಾತ್ರವೇ ಆಯಿತು. ಟೀಕೆಗಳು ತಣ್ಣಗಾದ ನಂತರದಲ್ಲಿ ಆರ್ಡರ್ಲಿರಗಳು ಅಧಿಕಾರಿಗಳ ನಿವಾಸಗಳಿಗೆ ಕೆಲಸಕ್ಕೆ ಹಿಂದಿರುಗಬೇಕಾಯಿತು.

ಇದು ಕರ್ನಾಟಕಕ್ಕೆ ಸೀಮಿತವಾದ ಸಮಸ್ಯೆ ಅಲ್ಲ. ಈ ವ್ಯವಸ್ಥೆಯ ಬಗ್ಗೆ ದೇಶದಾದ್ಯಂತ ಮತ್ತೆ ಮತ್ತೆ ಟೀಕೆ ವ್ಯಕ್ತವಾಗಿದೆ. ಈ ವ್ಯವಸ್ಥೆಯನ್ನು ಇನ್ನಿಲ್ಲವಾಗಿಸಬೇಕು ಎಂದು ರಾಷ್ಟ್ರೀಯ ಪೊಲೀಸ್ ಆಯೋಗವು ದಶಕಗಳ ಹಿಂದೆಯೇ ಶಿಫಾರಸು ಮಾಡಿದೆ. ಈ ವ್ಯವಸ್ಥೆಯು ಪೊಲೀಸರ ನೈತಿಕ ಸ್ಥೈರ್ಯವನ್ನು ಕುಗ್ಗಿಸುತ್ತದೆ. ಅತ್ಯಗತ್ಯವಾದ ಪೊಲೀಸ್ ಕರ್ತವ್ಯ ನಿರ್ವಹಿಸಬೇಕಾದವರನ್ನು ಇದು ಅನ್ಯ ಉದ್ದೇಶಕ್ಕೆ ಬಳಸಿಕೊಳ್ಳುತ್ತದೆ ಎಂದು ಆಯೋಗ ಹೇಳಿತ್ತು. ನ್ಯಾಯಾಲಯಗಳು ಕೂಡ ಈ ವ್ಯವಸ್ಥೆಯನ್ನು ಬಹಳ ತೀಕ್ಷ್ಣ ಮಾತುಗಳಲ್ಲಿ ಖಂಡಿಸಿವೆ. ಇದು 'ವಸಾಹತುಶಾಹಿ ಗುಲಾಮಿತನ'ದ ಒಂದು ರೂಪ ಎಂದು ಮದ್ರಾಸ್ ಹೈಕೋರ್ಟ್ ಹೇಳಿದೆ. ರಾಜಕೀಯ ನಾಯಕರು ಕೂಡ ಇದರ ಬಗ್ಗೆ ಆಕ್ರೋಶ ಹೊರಹಾಕಿದ್ದಾರೆ. ಕೇರಳ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಅವರು ಈ ವ್ಯವಸ್ಥೆಯು ಗುಲಾಮಿತನದ ರೂಪ, ಮಾನವ ಹಕ್ಕುಗಳ ಉಲ್ಲಂಘನೆ ಎಂದು ಕರೆದಿದ್ದಾರೆ. ಕೆಲವು ರಾಜ್ಯಗಳು ಪರ್ಯಾಯ ವ್ಯವಸ್ಥೆಗಳನ್ನು ಕಂಡುಕೊಳ್ಳುವ ಪ್ರಯೋಗ ನಡೆಸಿವೆ. ನಿಯಮಗಳ ಪಾಲನೆಯ ಮೇಲೆ ನಿಗಾ ಇರಿಸಲು ತಮಿಳುನಾಡಿನಲ್ಲಿ ಜಿಲ್ಲಾಧಿಕಾರಿ ನೇತೃತ್ವದ ಜಿಲ್ಲಾ ಮಟ್ಟದ ಸಮಿತಿಗಳನ್ನು ರಚಿಸಲಾಗಿದೆ. ಆರ್ಡರ್ಲಿರಗಳನ್ನು ಹಿಂದಕ್ಕೆ ಕರೆಸಿಕೊಳ್ಳುವುದನ್ನು ತೆಲಂಗಾಣದಲ್ಲಿ ಒಟ್ಟಾರೆ ಪೊಲೀಸ್ ವ್ಯವಸ್ಥೆಯ ಸುಧಾರಣೆಯ ಭಾಗವಾಗಿ ಕಾಣಲಾಗುತ್ತಿದೆ. ಹೀಗಿದ್ದರೂ, ಬಲಿಷ್ಠ ಪೊಲೀಸ್ ಅಧಿಕಾರಿಗಳ ಲಾಬಿಯು ನ್ಯಾಯಾಲಯಗಳು ಮತ್ತು ಸರ್ಕಾರಗಳ ಪ್ರಯತ್ನಗಳನ್ನು ಸೋಲಿಸುತ್ತಿದೆ.

ಕಾನೂನಿನ ಜಾರಿಗೆ, ಅಪರಾಧ ಕೃತ್ಯಗಳ ತನಿಖೆಗೆ ಮತ್ತು ಸಾರ್ವಜನಿಕ ಸುವ್ಯವಸ್ಥೆಯನ್ನು ಕಾಪಾಡಿಕೊಳ್ಳಲು ಕಾನ್‌ಸ್ಟೇಬಲ್‌ಗಳನ್ನು ನೇಮಕ ಮಾಡಿಕೊಂಡು, ಅವರಿಗೆ ತರಬೇತಿ ನೀಡಲು ಸರ್ಕಾರಗಳು ಲಕ್ಷಾಂತರ ರೂಪಾಯಿ ವೆಚ್ಚ ಮಾಡುತ್ತವೆ. ಆದರೆ, ಬಹಳಷ್ಟು ಮಂದಿ ಕಾನ್‌ಸ್ಟೇಬಲ್‌ಗಳು ಅಧಿಕಾರಿಗಳ ಮನೆಗಳಲ್ಲಿ ಕೆಲಸ ಮಾಡುತ್ತ, ಅವರಿಗಾಗಿ ದಿನಸಿ ವಸ್ತುಗಳನ್ನು ತಂದುಕೊಡುತ್ತ ತಮ್ಮ ವೃತ್ತಿ ಜೀವನ ಆರಂಭಿಸುತ್ತಿದ್ದಾರೆ. ತರಬೇತಿ ಪಡೆದ ಸಿಬ್ಬಂದಿಯನ್ನು ಈ ಬಗೆಯಲ್ಲಿ ಬಳಕೆ ಮಾಡಿಕೊಳ್ಳುವುದು ಅವಮಾನಕರ ಮಾತ್ರವೇ ಅಲ್ಲ. ಅದು ಸಂಪನ್ಮೂಲದ ದುರ್ಬಳಕೆಯೂ ಹೌದು. ಸಲೀಂ ಅವರು ಹೊರಡಿಸಿರುವ ಆದೇಶವು ಯಶಸ್ಸು ಕಾಣಬೇಕು ಎಂದಾದರೆ, ಉತ್ತರದಾಯಿತ್ವದ ಅಗತ್ಯ ಇದೆ. ಆರ್ಡರ್ಲಿರಗಳನ್ನು ಹೊಂದುವ ಅಧಿಕಾರಿಗಳು ಶಿಸ್ತುಕ್ರಮ ಎದುರಿಸುವಂತೆ ಮಾಡಬೇಕು. ಕಾನ್‌ಸ್ಟೆಬಲ್‌ಗಳನ್ನು ಮನೆಗೆಲಸಕ್ಕೆ ಬಳಕೆ ಮಾಡಿಕೊಳ್ಳುವ ಈ ವ್ಯವಸ್ಥೆಯು ಹೊಸ ಹೆಸರಿನಲ್ಲಿ ಮುಂದುವರಿಯಬಾರದು ಎಂದಾದರೆ ನಿರಂತರವಾದ, ಸ್ವತಂತ್ರವಾದ ನಿಗಾ ಬೇಕು. ಆರ್ಡರ್ಲಿರ ವ್ಯವಸ್ಥೆ ಎಂಬುದು ಆಡಳಿತಾತ್ಮಕ ಲೋಪ ಮಾತ್ರವೇ ಅಲ್ಲ ಅದು ಪೊಲೀಸ್ ವ್ಯವಸ್ಥೆಯಲ್ಲಿನ ಊಳಿಗಮಾನ್ಯ ಪದ್ಧತಿಯ ದ್ಯೋತಕ. ಅದನ್ನು ಇನ್ನಿಲ್ಲವಾಗಿಸಬೇಕು ಎಂದಾದರೆ ಸುತ್ತೋಲೆಗಳಿಗಿಂತ ಹೆಚ್ಚಿನ ಕ್ರಮಗಳು ಬೇಕು: ಪ್ರಬಲವಾದ ರಾಜಕೀಯ ಇಚ್ಛಾಶಕ್ತಿ ಹಾಗೂ ಸಾಂಸ್ಥಿಕ ಧೈರ್ಯ ಬೇಕು.



ಇಂದಿನ ಜಾಗತಿಕ ರಾಜಕೀಯದಲ್ಲಿ ಮಧ್ಯಪ್ರಾಚ್ಯದ ಪರಿಸ್ಥಿತಿ ಅತ್ಯಂತ ಸಂವೇದನಾಶೀಲವಾಗಿದೆ. ವಿಶೇಷವಾಗಿ Israel, Iran, United States ದೇಶಗಳ ನಡುವಿನ ಸಂಘರ್ಷಗಳು ಜಾಗತಿಕ ರಾಜಕೀಯದ ಮೇಲೆ ಮಹತ್ವದ ಪರಿಣಾಮ ಬೀರುತ್ತಿವೆ. ಈ ದೇಶಗಳ ನಡುವಿನ ಭಿನ್ನಾಭಿಪ್ರಾಯಗಳು ಕೆಲವೊಮ್ಮೆ ಯುದ್ಧದ ರೂಪ ತಾಳುವುದರಿಂದ ವಿಶ್ವ ಶಾಂತಿಗೆ ದೊಡ್ಡ ಸವಾಲಾಗಿ ಪರಿಣಮಿಸುತ್ತವೆ.



☛ ವಿಶ್ವಾಸ್.ಡಿ.ಗೌಡ

# ಅಮೆರಿಕ, ಇಸ್ರೇಲ್, ಇರಾನ್ ಸಂಘರ್ಷ ಜಾಗತಿಕ ಶಾಂತಿಗೆ ಸವಾಲು

ಇಸ್ರೇಲ್ ಮತ್ತು ಇರಾನ್ ನಡುವೆ ಹಲವು ವರ್ಷಗಳಿಂದ ರಾಜಕೀಯ ಹಾಗೂ ಸೈನಿಕ ಉದ್ವಿಗ್ನತೆ ಮುಂದುವರಿದಿದೆ. ಇಸ್ರೇಲ್ ತನ್ನ ಭದ್ರತೆಯನ್ನು ಮುಖ್ಯವಾಗಿಟ್ಟುಕೊಂಡು ಮಧ್ಯಪ್ರಾಚ್ಯದಲ್ಲಿ ಪ್ರಭಾವವನ್ನು ಹೆಚ್ಚಿಸಿಕೊಳ್ಳಲು ಪ್ರಯತ್ನಿಸುತ್ತಿದೆ. ಅದೇ ಸಮಯದಲ್ಲಿ ಇರಾನ್ ತನ್ನ ಅಣುಕಾರ್ಯಕ್ರಮ ಮತ್ತು ಪ್ರಾದೇಶಿಕ ಪ್ರಭಾವದ ಮೂಲಕ ತನ್ನ ಶಕ್ತಿಯನ್ನು ಪ್ರದರ್ಶಿಸಲು ಮುಂದಾಗಿದೆ. ಈ ಕಾರಣಗಳಿಂದ ಇಸ್ರೇಲ್ ಮತ್ತು ಇರಾನ್ ನಡುವೆ ಅನೇಕ ಬಾರಿ ಪರೋಕ್ಷವಾಗಿ ಹಾಗೂ ಕೆಲವೊಮ್ಮೆ ನೇರವಾಗಿ ಸಂಘರ್ಷಗಳು ಉಂಟಾಗುತ್ತಿವೆ.

ಇದರ ನಡುವೆ ಅಮೆರಿಕ ಕೂಡ ಪ್ರಮುಖ ಪಾತ್ರವಹಿಸಿದೆ. ಇಸ್ರೇಲ್ ದೇಶದೊಂದಿಗೆ ಅಮೆರಿಕದ ಸ್ನೇಹಪೂರ್ವಕ ಸಂಬಂಧ ಬಹಳ ಗಟ್ಟಿಯಾಗಿದೆ. ಇಸ್ರೇಲ್ ಮೇಲೆ ಯಾವುದೇ ದಾಳಿ ನಡೆದಾಗ ಅಮೆರಿಕ ಅದರ ಬೆಂಬಲಕ್ಕೆ ನಿಂತಿರುವುದು ಸಾಮಾನ್ಯ. ಮತ್ತೊಂದೆಡೆ ಅಮೆರಿಕ ಮತ್ತು ಇರಾನ್ ನಡುವೆ ಹಲವು ವರ್ಷಗಳಿಂದ ರಾಜಕೀಯ ಹಾಗೂ ಆರ್ಥಿಕ ಸಂಘರ್ಷಗಳು ನಡೆಯುತ್ತಿವೆ. ಇರಾನ್‌ನ ಅಣುಕಾರ್ಯಕ್ರಮವನ್ನು ಅಮೆರಿಕ ತೀವ್ರವಾಗಿ ವಿರೋಧಿಸುತ್ತಿದ್ದು, ಅದನ್ನು ನಿಯಂತ್ರಿಸಲು ಹಲವು ನಿರ್ಬಂಧಗಳನ್ನು ವಿಧಿಸಿದೆ.

ಈ ಸಂಘರ್ಷಗಳ ಪರಿಣಾಮವಾಗಿ ಮಧ್ಯಪ್ರಾಚ್ಯದಲ್ಲಿ ಶಾಂತಿ ಸ್ಥಾಪನೆ ಕಷ್ಟಕರವಾಗಿದೆ. ಯುದ್ಧ ಅಥವಾ ಸೈನಿಕ ದಾಳಿಗಳು ನಡೆಯುವಾಗ ಸಾಮಾನ್ಯ ಜನರು ಹೆಚ್ಚಿನ ಸಂಕಷ್ಟವನ್ನು ಅನುಭವಿಸುತ್ತಾರೆ. ಮನೆಗಳು ನಾಶವಾಗುವುದು, ಸಾವಿರಾರು ಜನರು ತಮ್ಮ ಊರುಗಳನ್ನು ಬಿಟ್ಟು ಬೇರೆಡೆಗೆ ವಲಸೆ ಹೋಗುವುದು, ಆರ್ಥಿಕ ಹಾನಿ ಮತ್ತು ಮಾನವೀಯ ಸಮಸ್ಯೆಗಳು ಹೆಚ್ಚಾಗುವುದು ಸಾಮಾನ್ಯವಾಗುತ್ತದೆ. ಯುದ್ಧದ ನಿಜವಾದ ಬಾಧಿತರಾಗುವವರು ಸಾಮಾನ್ಯ ಜನರೆಂಬುದು ಈ ಪರಿಸ್ಥಿತಿಯಿಂದ ಸ್ಪಷ್ಟವಾಗುತ್ತದೆ. ಈ ಸಂಘರ್ಷವು ಕೇವಲ ಮೂರು ದೇಶಗಳ ಸಮಸ್ಯೆಯಾಗಿರದೆ ಜಾಗತಿಕ ಮಟ್ಟದಲ್ಲೂ ಪರಿಣಾಮ ಬೀರುತ್ತದೆ. ಮಧ್ಯಪ್ರಾಚ್ಯವು ತೈಲ ಸಂಪತ್ತಿನ ಪ್ರಮುಖ ಕೇಂದ್ರವಾಗಿರುವುದರಿಂದ ಇಲ್ಲಿ ನಡೆಯುವ ಯಾವುದೇ ಉದ್ವಿಗ್ನತೆ ವಿಶ್ವದ ಆರ್ಥಿಕ ವ್ಯವಸ್ಥೆಯ ಮೇಲೆ ಪರಿಣಾಮ ಬೀರುತ್ತದೆ. ತೈಲದ ಬೆಲೆ ಏರಿಕೆಯಾಗುವುದು, ವ್ಯಾಪಾರದಲ್ಲಿ ಅಸ್ಥಿರತೆ ಉಂಟಾಗುವುದು ಮತ್ತು ವಿವಿಧ ದೇಶಗಳ ರಾಜಕೀಯ ಸಂಬಂಧಗಳು ಬದಲಾಗುವುದು ಇದರ ಪರಿಣಾಮಗಳಾಗಿವೆ.

ಆದರೆ ಈ ಎಲ್ಲಾ ಸಮಸ್ಯೆಗಳಿಗೆ ಯುದ್ಧವೇ ಪರಿಹಾರವಲ್ಲ ಎಂಬುದು ಇತಿಹಾಸವೇ ತೋರಿಸಿದೆ. ಸಂವಾದ, ರಾಜತಾಂತ್ರಿಕ ಮಾತುಕತೆ ಮತ್ತು ಪರಸ್ಪರ ಸಹಕಾರದ ಮೂಲಕವೇ ಶಾಂತಿಯನ್ನು ಸಾಧಿಸಲು ಸಾಧ್ಯ. ವಿಶ್ವದ ಪ್ರಮುಖ ರಾಷ್ಟ್ರಗಳು ಶಾಂತಿ ಮಾತುಕತೆಗಳಿಗೆ ಆದ್ಯತೆ ನೀಡಬೇಕು. ಯುದ್ಧವು ನಾಶವನ್ನು ಮಾತ್ರ ಉಂಟುಮಾಡುತ್ತದೆ; ಆದರೆ ಸಂವಾದವು ಸಮಾಧಾನ ಮತ್ತು ಅಭಿವೃದ್ಧಿಗೆ ದಾರಿ ಮಾಡಿಕೊಡುತ್ತದೆ.

ಕೊನೆಗೆ ಹೇಳುವುದಾದರೆ, ಅಮೆರಿಕ, ಇಸ್ರೇಲ್ ಮತ್ತು ಇರಾನ್ ನಡುವಿನ ಸಂಘರ್ಷವು ವಿಶ್ವ ರಾಜಕೀಯದಲ್ಲಿ ದೊಡ್ಡ ಚರ್ಚೆಯ ವಿಷಯವಾಗಿದೆ. ಆದರೆ ಜಾಗತಿಕ ಶಾಂತಿ ಮತ್ತು ಮಾನವೀಯ ಮೌಲ್ಯಗಳನ್ನು ಕಾಪಾಡಲು ಎಲ್ಲಾ ರಾಷ್ಟ್ರಗಳು ಸಹಕಾರದಿಂದ ಕೆಲಸ ಮಾಡಬೇಕು. ಯುದ್ಧದಿಂದಲ್ಲ, ಶಾಂತಿಯ ಮಾರ್ಗದಿಂದಲೇ ವಿಶ್ವವು ಉತ್ತಮ ಭವಿಷ್ಯವನ್ನು ಕಾಣಬಹುದು.






# ನಕಲಿ ಅರಿಶಿನ ಬಳಸುತ್ತಿದ್ದೀರಾ

ಮಾರುಕಟ್ಟೆಯಲ್ಲಿ ಚಲಾವಣೆಯಲ್ಲಿರುವ ಕಲಬೆರಕೆ ಅರಿಶಿನ ಪುಡಿಯ ಬಗ್ಗೆ ಗಮನ ಹರಿಸಲೇ ಬೇಕು. ನೀವು ಮನೆಯಲ್ಲಿ ಅರಿಶಿನ ಪುಡಿಯ ಶುದ್ಧತೆಯ ಪರಿಶೀಲನೆಯನ್ನು ಹೇಗೆ ಪರೀಕ್ಷೆ ಮಾಡಬಹುದು ಎಂಬುದನ್ನು ನಾವಿಲ್ಲಿ ತಿಳಿಯೋಣ.

**ಅರಿಶಿನಕ್ಕೆ ಸೇರಿಸಲಾದ ಸಾಮಾನ್ಯ ಕಲಬೆರಕೆಗಳು**

**ಮೆಟಾನಿಲ್ ಹಳದಿ:** ಇದು ವಿಷಕಾರಿ ಬಣ್ಣವಾಗಿದ್ದು ಇದು ಆಳವಾದ ಹಳದಿ ಬಣ್ಣವನ್ನು ನೀಡುತ್ತದೆ ಮತ್ತು ಯಕೃತ್ತು ಮತ್ತು ನರಗಳಿಗೆ ಹಾನಿ ಮಾಡುತ್ತದೆ. ● **ಸುಡಾನ್ ರೆಡ್:** ಇದು ಕ್ಯಾನ್ಸರ್‌ಗೆ ಸಂಬಂಧಿಸಿದ ವಿಷಕಾರಿ ಬಣ್ಣವಾಗಿದ್ದು, ಇದನ್ನು ಸೇವಿಸಲು ಉದ್ದೇಶಿಸಲಾಗಿಲ್ಲ

● **ಲೀಡ್ ಕ್ರೋಮೇಟ್:** ಅರಿಶಿನದಲ್ಲಿರುವ ಸೀಸವು ಮೆದುಳು ಮತ್ತು ಬೆಳವಣಿಗೆಗೆ ತೀವ್ರ ಹಾನಿಯನ್ನುಂಟುಮಾಡುತ್ತದೆ.

**ಕಲಬೆರಕೆ ಅರಿಶಿನ ಪುಡಿಯ ಅಡ್ಡಪರಿಣಾಮಗಳು**

ಕಲಬೆರಕೆ ಅರಿಶಿನವು ನಿಮ್ಮ ಆರೋಗ್ಯದ ಮೇಲೆ ಹಲವು ವಿಧಗಳಲ್ಲಿ ಪರಿಣಾಮ ಬೀರುವ ಸಾಧ್ಯತೆಯಿದೆ.

● **ವಾಕರಿಕೆ-ವಾಂತಿ** ● **ಹೊಟ್ಟೆ ಸಮಸ್ಯೆಗಳು** ● **ಮೂತ್ರಪಿಂಡ ಹಾನಿ** ● **ಯಕೃತ್ತಿನ ಹಾನಿ** ● **ಕಡಿಮೆ ರೋಗನಿರೋಧಕ ಶಕ್ತಿ** ● **ನರವೈಜ್ಞಾನಿಕ ಸಮಸ್ಯೆಗಳು** ● **ಮಕ್ಕಳಲ್ಲಿ ಸೀಸದ ವಿಷದ ಅಪಾಯ**

**ಅರಿಶಿನ ಕಲಬೆರಕೆಯ ಬಗ್ಗೆ ಅಧ್ಯಯನವು ಏನು ಹೇಳುತ್ತದೆ**

ನ್ಯಾಷನಲ್ ಲೈಬ್ರರಿ ಆಫ್ ಮೆಡಿಸಿನ್‌ನ ಅಧ್ಯಯನದ ಪ್ರಕಾರ, ಹಳದಿ ಅರಿಶಿನವು ಸುಡಾನ್ ರೆಡ್‌ನೊಂದಿಗೆ ಕಲಬೆರಕೆಯಾಗಿದೆ, ಇದು ಹಲವಾರು ಸಂಭಾವ್ಯ ಆರೋಗ್ಯ ಅಪಾಯಗಳೊಂದಿಗೆ ಸಂಬಂಧಿಸಿದೆ, ಪ್ರಾಥಮಿಕವಾಗಿ ಅದರ ಕ್ಯಾನ್ಸರ್ ಜನಕ ಮತ್ತು ಮ್ಯುಟಾಜೆನಿಕ್ ಗುಣಲಕ್ಷಣಗಳಿಂದಾಗಿ.

ಇದು ಸಸ್ತನಿಗಳಲ್ಲಿ ಯಕೃತ್ತು ಮತ್ತು ಮೂತ್ರಕೋಶದ ಗೆಡ್ಡೆಗಳನ್ನು ಉಂಟುಮಾಡಬಹುದು ಮತ್ತು ಇದನ್ನು ಮಾನವರಿಗೆ ಸಂಭಾವ್ಯ ಮ್ಯುಟಾಜೆನ್‌ಗಳು ಮತ್ತು ಕಾರ್ಸಿನೋಜೆನ್‌ಗಳು ಎಂದು ಪರಿಗಣಿಸಲಾಗುತ್ತದೆ. ಮೆಟಾನಿಲ್ ಹಳದಿ ಬಣ್ಣವನ್ನು ಕಲಬೆರಕೆಗಾಗಿ ಬಳಸಲಾಗುತ್ತದೆ ಎಂದು ಅಧ್ಯಯನವು ಉಲ್ಲೇಖಿಸುತ್ತದೆ. ಈ ಬಣ್ಣಗಳು ಅರಿಶಿನದ ಪೌಷ್ಟಿಕಾಂಶದ ಮೌಲ್ಯವನ್ನು ಕಡಿಮೆ ಮಾಡುತ್ತದೆ ಮತ್ತು ಕ್ಯಾನ್ಸರ್ ಅಪಾಯಗಳನ್ನು ಮತ್ತು ಯಕೃತ್ತಿನ ಹಾನಿಯಂತಹ ಇತರ ದೀರ್ಘಕಾಲೀನ ಆರೋಗ್ಯ ಅಪಾಯಗಳನ್ನು ಉಂಟುಮಾಡುತ್ತವೆ.

ಮನೆಯಲ್ಲಿ ಅರಿಶಿನ ಶುದ್ಧತೆಯನ್ನು ಪರೀಕ್ಷಿಸಲು 5 ಮಾರ್ಗಗಳು:

**ನೀರಿನ ಪರೀಕ್ಷೆ:** ಸಾಮಾಜಿಕ ಮಾಧ್ಯಮ ಉಪಕ್ರಮದ ಪ್ರಕಾರ, ನೀವು ಮಾಡಬೇಕಾಗಿರುವುದು, ಒಂದು ಲೋಟ ನೀರು ತೆಗೆದುಕೊಳ್ಳಿ. ನೀರಿಗೆ ಸ್ವಲ್ಪ ಪ್ರಮಾಣದ ಅರಿಶಿನ ಪುಡಿಯನ್ನು ಸೇರಿಸಿ. ಕಲಬೆರಕೆಯಿಲ್ಲದ ಮಾದರಿಯು ತಿಳಿ ಹಳದಿ ಬಣ್ಣಕ್ಕೆ ತಿರುಗುತ್ತದೆ ಮತ್ತು ಅರಿಶಿನವು ಕೆಳಭಾಗದಲ್ಲಿ ನೆಲೆಗೊಳ್ಳುತ್ತದೆ. ಕಲಬೆರಕೆ ಅರಿಶಿನದೊಂದಿಗೆ ದ್ರಾವಣದ ಬಣ್ಣವು ಬಲವಾದ ಹಳದಿ ಬಣ್ಣಕ್ಕೆ ಬದಲಾಗುತ್ತದೆ. ಮೆಟಾನಿಲ್ ಹಳದಿ ಕಲಬೆರಕೆಯನ್ನು ಪರೀಕ್ಷಿಸಲು ಈ ಪರೀಕ್ಷೆಯನ್ನು ಬಳಸಲಾಗುತ್ತದೆ.

**ಆಮ್ಲ ಪರೀಕ್ಷೆ:** ಈ ಪರೀಕ್ಷೆಗಾಗಿ, ಒಂದು ಲೋಟ ನೀರಿಗೆ ಒಂದು ಚಿಟಿಕೆ ಅರಿಶಿನ ಪುಡಿಯನ್ನು ಸೇರಿಸಿ. ನಂತರ ಕೆಲವು ಹನಿ ನಿಂಬೆ ರಸ ಅಥವಾ ವಿನೆಗರ್ ಸೇರಿಸಿ. ನೀವು ಸಿಂಪಡಣೆಯ ಶಬ್ದ ಅಥವಾ ಗುಳ್ಳೆಗಳನ್ನು ಕೇಳಿದರೆ, ಅದು ಸೀಮೆಸುಣ್ಣದ ಪುಡಿಯೊಂದಿಗೆ ಕಲಬೆರಕೆಯಾಗಿದೆ ಎಂದರ್ಥ.




# ರಾಮಾಯಣ

## ಸುಗ್ರೀವನು ಕಪಿಗಳನ್ನು ಪಡುವಣ ದಿಕ್ಕಿಗೆ ಕಳುಹಿಸಿದ್ದು

• ಹಿಂದಿನ ಸಂಚಿಕೆಯಿಂದ

121 ನೆಯ ಅಧ್ಯಾಯ

ಆ ಋಷಿಶ್ವರನಿಗೆ ಸಾಷ್ಟಾಂಗ ನಮಸ್ಕಾರವನ್ನು ಮಾಡಿ ಸೀತಾದೇವಿಯ ವೃತ್ತಾಂತವನ್ನು ಕೇಳಿರಿ ಎಲೈ ಕಪಿನಾಯಕರುಗಳಿರಾ, ಈ ಸ್ಥಳಗಳೇ ಕಪಿಗಳಿಗೆ ಸಂಚರಿಸುವುದಕ್ಕೆ ಸಾಧ್ಯವಾದವುಗಳು ಆಮೇಲೆ ಸೂರಸಂಚಾರವಿಲ್ಲದ ಭೂಮಿಯನ್ನು ನಾನು ಅರಿತವನಲ್ಲ. ನೀವು ಸೀತಾದೇವಿಯನ್ನರಸಿ ಕಂಡು ಒಂದು ತಿಂಗಳೊಳಗೆ ಬನ್ನಿ. ತಿಂಗಳ ಮೇಲೆ ವಿಳಂಬಮಾಡಿಕೊಂಡಿರಬೇಡಿ.

ಈ ಕಪಿನಾಯಕರಲ್ಲಿ ಯಾರು ಒಂದು ತಿಂಗಳೊಳಗಾಗಿ ಬರದಿರುವರೋ ಅವರಿಗೆ ಪ್ರಾಣಾಂತ್ಯವಾದ ಆಜ್ಞೆಯನ್ನು ಮಾಡಿಸುವೆನು. ಆದಕಾರಣ ನೀವು ನಾನು ಹೇಳಿದ ಸ್ಥಾನಗಳಿಗೆ ಹೋಗಿ ಸೀತಾದೇವಿಯನ್ನರಸಿಕೊಂಡು ಬನ್ನಿ. ಸುಷೇಣನು ನನಗೆ ಮಾವನಾಗಿ ಗುರುವಿಗೆ ಸಮಾನನಾದವನು.

ನೀವು ಆತನ ಮಾತಿಗೊಳಗಾಗಿರಿ. ನೀವು ಪಡುವಣ ದಿಕ್ಕಿಗೆ ಹೋಗಿ ಸೀತಾದೇವಿಯನ್ನರಸಿ ಕಂಡು ಬಂದಿರಾದರೆ ನಮಗೆ ಉಪಕಾರವನ್ನು ಮಾಡಿದ ಶ್ರೀರಾಮನಿಗೆ ಪ್ರತ್ಯು ಪ್ರಕಾರವನ್ನು ಮಾಡಿ ಕೃತಾರ್ಥರಾಗುವೆವು, ಸೀತಾದೇವಿಯನ್ನು ಕಂಡುಬರುವ ಕಾರ್ಯಪ್ರಸಂಗದಲ್ಲಿ ಆವಶ್ಯಕವಾಗುವ ಇತರೆ ಕಾರ್ಯಗಳನ್ನು ದೇಶಕಾಲಗಳನ್ನರಿತು ನೆರವೇರಿಸಿ ಎಂದು ಆಜ್ಞಾಪಿಸಿದನು. ಆ ಮಾತನ್ನು ಕೇಳಿ ಆ ಕಪಿನಾಯಕರು ಸುಷೇಣನನ್ನು ಮುಂದಿಟ್ಟುಕೊಂಡು ವರುಣನಿಂದ ಪರಿಪಾಲಿಸಲ್ಪಟ್ಟ ಪಶ್ಚಿಮದಿಕ್ಕಿನಲ್ಲಿ ಸೀತಾದೇವಿಯನ್ನರಸಿ ಕಾಣುವುದಕ್ಕೋಸ್ಕರ ತೆರಳಿದರು.

**ಸುಗ್ರೀವನು ಸೀತಾದೇನಿಯನರಸುವುದಕ್ಕಾಗಿ ಕಪಿಗಳನ್ನು ಬಡಗಣ ದಿಕ್ಕಿಗೆ ಕಳುಹಿಸಿದ್ದು**

ತರುವಾಯ ಸುಗ್ರೀವನು ಮಹಾಸಮರ್ಥನಾದ ಶತವಲಿಯನ್ನು ಕರೆದು ಆತನನ್ನು ಕುರಿತು ತನಗೂ ಶ್ರೀರಾಮನಿಗೂ ಹಿತವಾದ ಮಾತುಗಳಿಂದ ಹೀಗೆ ಆಜ್ಞಾಪಿಸಿದನು ಶತವಲ್ಲಿ ನೀನು ನಿನಗೆ ಸಮಾನರೂ ಯಮನ ಮಕ್ಕಳೂ ನಿನ್ನ ಮಂತ್ರಿಗಳೂ ಆದ ಕಪಿನಾಯಕರನ್ನು ಕೂಡಿಕೊಂಡು ಬಡಗಣ ದಿಕ್ಕಿಗೆ ಹೋಗು. ಹಿಮವರ್ತ್ಸಾತ ಪರ್ಯಂತ ಸಂಚಾರಮಾಡಿ ಶ್ರೀರಾಮನ ಪಟ್ಟದ ರಾಣಿಯಾದ ಸೀತಾದೇವಿಯನ್ನರಸಿ ಬಾ. ಈ ಸಮಯದಲ್ಲಿ ಶ್ರೀರಾಮನ ಕಾರ್ಯವನ್ನು ಸಾಧ್ಯಮಾಡಿದೆವಾದರೆ ನಾವೆಲ್ಲರೂ ಆತನ ಕರುಣೆಯಿಂದ ಕೃತಾರ್ಥರಾಗುವೆವು ನಾವು ಆತನಿಂದ ಮೊದಲೇ ಉಪಕಾರವನ್ನು ಪಡೆದವರು. ಆತನಿಗೆ ಪ್ರತ್ಯುಪಕಾರವನ್ನು ಮಾಡಿದರೆ ನಮ್ಮ ಜನ್ಮವು ಸಫಲವಾಗುವುದು. ನಾವು ಶ್ರೀರಾಮನಿಂದ ಉಪಕಾರವನ್ನು ಪಡೆದು ಪ್ರತ್ಯುಪಕಾರವನ್ನು ಮಾಡದಿರ ಬಾರದು. ಇದನ್ನು ನಿನ್ನ ಮನಸ್ಸಿಗೆ ಸರಿತಂದುಕೊಂಡು ನನಗೋಸ್ಕರ ಸೀತಾದೇವಿಯನ್ನರಸಿಕೊಂಡು ಬರಬೇಕು. ಶ್ರೀರಾಮನು ಸಾಮಾನ್ಯ ಮನುಷ್ಯನಲ್ಲ. ಆತನು ಪುರುಷೋತ್ತಮನು. ನಮ್ಮಲ್ಲಿ ಬಹು ಪ್ರೀತಿಯುಳ್ಳವನು.

ಮುಂದುವರಿಯುವುದು...

# ಅಗ್ನಿಹೋತ್ರದ ಮಹತ್ವ

## ಅಗ್ನಿಹೋತ್ರದ ಮಹತ್ವ ಅಪಾರ ನಿತ್ಯವೂ ತಪ್ಪದೇ ಮಾಡಿ !

### ಅಗ್ನಿಹೋತ್ರದ ವಿಭೂತಿಯ ಅನೇಕ ಉಪಯೋಗಗಳು

- ವಿಭೂತಿಯನ್ನು ಮನೆಯಲ್ಲಿ ಊದುವುದರಿಂದ ವಾಸ್ತು ಶುದ್ಧಿಯಾಗುತ್ತದೆ
- ವಿಭೂತಿಯನ್ನು ಹಚ್ಚಿಕೊಳ್ಳುವುದರಿಂದ ತ್ವಚೆಯ ವಿಕಾರಗಳಲ್ಲಿ ಸುಧಾರಣೆಯಾಗಲು ಸಹಾಯವಾಗುತ್ತದೆ
- ಪ್ರಾಣಶಕ್ತಿ ಕಡಿಮೆಯಾಗಿದೆ ಎನಿಸಿದಾಗ ಚಿಟಿಕೆ ವಿಭುತಿಯನ್ನು ಸೇವಿಸುವುದರಿಂದ ಪ್ರಾಣಶಕ್ತಿಯಲ್ಲಿ ಹೆಚ್ಚಳವಾಗುತ್ತದೆ
- ಚಿಟಿಕೆ ವಿಭೂತಿಯನ್ನು ಕುಡಿಯುವ ನೀರಿನಲ್ಲಿ ಹಾಕಿದರೆ ತೀರ್ಥ ಪ್ರಾಶನದ ಲಾಭವಾಗುತ್ತದೆ
- ಹೋಟೆಲ ಅಥವಾ ಹೊರಗಿನ ಊಟ-ತಿಂಡಿಯನ್ನು ಸೇವಿಸುವ ಮೊದಲು ಅದರ ಮೇಲೆ ಚಿಟಿಕೆ ವಿಭೂತಿಯನ್ನು ಸಿಂಪಡಿಸಿದರೆ ಅದರಲ್ಲಿರಬಹುದಾದ ನಕಾರಾತ್ಮಕ ಶಕ್ತಿ ನಾಶವಾಗುತ್ತದೆ.
- ಕೈದೋಟದಲ್ಲಿರುವ ಗಿಡ-ಮರಗಳಿಗೆ ಈ ವಿಭೂತಿಯನ್ನು ಗೊಬ್ಬರವೆಂದೂ ಉಪಯೋಗಿಸಬಹುದು.



ಪಂಚಮಹಾಯಜ್ಞಗಳಲ್ಲಿ ಸುಲಭವಾಗಿ ಮತ್ತು ಎಲ್ಲರೂ ಮಾಡಬಹುದಾದ ಯಜ್ಞವೆಂದರೆ ಅಗ್ನಿಹೋತ್ರ ! ವೇದ ಮತ್ತು ವೈದಿಕ ಸಂಸ್ಕೃತಿಯಷ್ಟೇ ಅಗ್ನಿಹೋತ್ರದ ಇತಿಹಾಸವೂ ಪ್ರಾಚೀನವಾಗಿದೆ. ಅನಾದಿಕಾಲದಿಂದಲೂ ಅಗ್ನಿಹೋತ್ರವು ಮನುಷ್ಯನ ದೈನಂದಿನ ದಿನಚರಿಯಲ್ಲಿ ಸಂಧ್ಯೆಯ ರೂಪದಲ್ಲಿ ಹಾಸು ಹೊಕ್ಕಾಗಿದೆ. ಶಾಸ್ತ್ರಗಳಿಗೆ ವಿರುದ್ಧವಾದ ಮನುಷ್ಯನ ಕರ್ಮಗಳಿಂದ ಪ್ರಕೃತಿಯಲ್ಲಿ ಆಗುವ ಮಾಲಿನ್ಯವನ್ನು ಶಮನಗೊಳಿಸುವ ಉಪಕರಣವೆಂದರೆ ಅಗ್ನಿಹೋತ್ರ. ದೇವಯಜ್ಞ ಅಥವಾ ಅಗ್ನಿಹೋತ್ರವನ್ನು ಮಾಡುವುದರಿಂದ ವಾಯು, ಮಳೆ ಮತ್ತು ಜಲ ಇವುಗಳ ಶುದ್ಧಿಯಾಗುತ್ತದೆ, ಒಳ್ಳೆಯ ಮಳೆಯಾಗಿ ಸಂಪೂರ್ಣ ಜಗತ್ತಿಗೆ ಸುಖ ಪ್ರಾಪ್ತಿಯಾಗುತ್ತದೆ.

**ಅಗ್ನಿಹೋತ್ರ ಹೋಮ ಸಾಮಗ್ರಿಗಳು**

● **ಹವನಪಾತ್ರ** : ಅಗ್ನಿಹೋತ್ರಕ್ಕಾಗಿ ವಿಶಿಷ್ಟ ಆಕಾರದ ತಾಮ್ರದ ಪಿರಮಿಡ್ ಪಾತ್ರೆ ● **ಗೋವಂಶದ ಬೆರಣಿ** : ಅಗ್ನಿಹೋತ್ರಕ್ಕಾಗಿ ಅಗ್ನಿಯನ್ನು ತಯಾರಿಸಲು ದೇಶಿ ಗೋವುಗಳ ಸೆಗಣಿಯ ಬೆರಣಿ ● **ಅಕ್ಕಿ (ಅಕ್ಷತೆ)** : ಪಾಲಿಶ್ ಮಾಡದ ಅಖಂಡ ಅಕ್ಕಿಯನ್ನೇ ಉಪಯೋಗಿಸಬೇಕು ● **ಆಕಳ ತುಪ್ಪ** : ದೇಶಿ ಆಕಳಿನ ತುಪ್ಪವನ್ನು ಬಳಸಿ ● **ಶುದ್ಧ ಕರ್ಪೂರ** : ಇದನ್ನು ಅಗ್ನಿ ಪ್ರಜ್ವಲಿಸಲು ಅಥವಾ ಆಹುತಿ ಎಂದು ಅರ್ಪಿಸಲು ● **ಇತರ ಸಾಮಗ್ರಿಗಳು** : ಬೆಂಕಿ ಪೊಟ್ಟಣ, ತಾಮ್ರದ ತಟ್ಟೆ, ಚಮಚ, ಕೈಬೀಸಣಿಗೆ, ವಿಭೂತಿ ಸಂಗ್ರಹಿಸಿಡಲು ಗಾಜಿನ ಅಥವಾ ಮಣ್ಣಿನ ಪಾತ್ರೆ

ಸೂರ್ಯೋದಯ ಮತ್ತು ಸೂರ್ಯಾಸ್ತದ ಸಮಯದಲ್ಲಿಯೇ ಅಗ್ನಿಹೋತ್ರವನ್ನು ಮಾಡಬೇಕು ಸೃಷ್ಟಿಯಲ್ಲಿರುವ ಪ್ರತಿಯೊಂದು ವಿಷಯವು ಸ್ಥಳ, ಕಾಲ ಮತ್ತು ಸಮಯಕ್ಕೆ ಬದ್ಧವಾಗಿರುತ್ತದೆ. ಕಾಲಕ್ಕನುಸಾರ ಪ್ರತಿಯೊಂದು ವಿಷಯದ ಸ್ಥಳ ಮತ್ತು ಅದಕ್ಕನುಸಾರ ಆ ಕೃತಿ ಘಟಿಸಲು ಬೇಕಾಗುವ ಸಮಯವು ಈಶ್ವರನ ಯೋಜನೆಯೇ ಆಗಿರುತ್ತವೆ. ಆದ್ದರಿಂದ ಯಾವುದಾದರೊಂದು ಕೃತಿಯನ್ನು ಕಾಲಕ್ಕನುಸಾರ ಮಾಡಿದರೆ ವ್ಯಕ್ತಿಗೆ ಅಪೇಕ್ಷಿತ ಲಾಭ ಸಿಗುತ್ತದೆ. ಆದುದರಿಂದ ಸೂರ್ಯೋದಯದ ಸಮಯದಲ್ಲಿ ಮತ್ತು ಸೂರ್ಯಾಸ್ತದ ಸಮಯದಲ್ಲಿ ಅಗ್ನಿಹೋತ್ರವನ್ನು ಮಾಡುವುದಕ್ಕೆ ಮಹತ್ವವಿದೆ.

**ಅಗ್ನಿಹೋತ್ರ ಮಾಡುವ ವಿಧಾನ:** ಅಗ್ನಿಹೋತ್ರ ಮಾಡುವಾಗ ಪೂರ್ವದಿಕ್ಕಿಗೆ ಮುಖ ಮಾಡಿ ಕುಳಿತುಕೊಳ್ಳಬೇಕು. ಹವನಪಾತ್ರೆಯಲ್ಲಿ ಎಲ್ಲಕ್ಕಿಂತ ಕೆಳಗೆ ಸಣ್ಣ ಆಕಾರದ ಒಂದು ಬೆರಣಿಯ ಚಪ್ಪಟೆ ತುಂಡನ್ನು ಇಡಬೇಕು. ಅದರ ಮೇಲೆ ತುಪ್ಪವನ್ನು ಹಚ್ಚಿದ ಬೆರಣಿಗಳ ತುಂಡುಗಳನ್ನು ಇಡಬೇಕು. ಎರಡು ಬೆರಣಿಗಳ ನಡುವೆ ಗಾಳಿ ಓಡಾಡುವ ಹಾಗೆ ಟೊಳ್ಳಿರಬೇಕು. ನಂತರ ಬೆರಣಿಯ ಒಂದು ತುಂಡಿಗೆ ಆಕಳ ತುಪ್ಪವನ್ನು ಹಚ್ಚಿ ಪ್ರಜ್ವಲಿಸಬೇಕು ಮತ್ತು ಆ ತುಂಡನ್ನು ಹವನಪಾತ್ರೆಯಲ್ಲಿಡಬೇಕು. ಸ್ವಲ್ಪ ಸಮಯದಲ್ಲಿ ಬೆರಣಿಗಳ ಎಲ್ಲ ತುಂಡುಗಳು ಪ್ರಜ್ವಲಿಸುವವು. ಅಗ್ನಿಯನ್ನು ಪ್ರಜ್ವಲಿಸಲು ಗಾಳಿ ಹಾಕಲು ಕೈಬೀಸಣಿಗೆಯನ್ನು ಉಪಯೋಗಿಸಬೇಕು; ಬಾಯಿಯಿಂದ ಊದಿ ಅಗ್ನಿಯನ್ನು ಪ್ರಜ್ವಲಿಸಬಾರದು, ಏಕೆಂದರೆ ಹೀಗೆ ಮಾಡುವುದರಿಂದ ಬಾಯಿಯಲ್ಲಿನ ರೋಗಜಂತುಗಳು ಅಗ್ನಿಯಲ್ಲಿ ಹೋಗುತ್ತವೆ. ಅಗ್ನಿಯನ್ನು ಪ್ರಜ್ವಲಿಸಲು ಸೀಮೆಎಣ್ಣೆಯಂತಹ ಜ್ವಲನಶೀಲ ಪದಾರ್ಥಗಳನ್ನು ಉಪಯೋಗಿಸಬಾರದು. ಅಗ್ನಿಯನ್ನು ಧೂಮರಹಿತವಾಗಿ ಪ್ರಜ್ವಲಿಸಬೇಕು, ಅಂದರೆ ಅದರಿಂದ ಹೊಗೆ ಬರಬಾರದು.

**ಹವನ ಸಾಮಗ್ರಿಗಳನ್ನು ಅಗ್ನಿಗೆ ಅರ್ಪಿಸುವುದು:** ಎರಡು ಚಿಟಿಕೆ ಅಕ್ಕಿಯನ್ನು ಅಂಗೈಯಲ್ಲಿ ಅಥವಾ ಒಂದು ತಾಮ್ರದ ತಟ್ಟೆಯಲ್ಲಿ ತೆಗೆದುಕೊಳ್ಳಬೇಕು. ಅದರ ಮೇಲೆ ಕೆಲವು ಹನಿ ಆಕಳ ತುಪ್ಪವನ್ನು ಹಾಕಬೇಕು. ಸೂರ್ಯೋದಯಕ್ಕೆ ಹಾಗೂ ಸೂರ್ಯಾಸ್ತದ ಸರಿಯಾದ ಸಮಯದಲ್ಲಿ ಕೆಳಗೆ ನೀಡಿರುವ ಮಂತ್ರಗಳ ಪೈಕಿ ಮೊದಲನೆಯ ಸಾಲನ್ನು ಒಮ್ಮೆ ಹೇಳಬೇಕು ಮತ್ತು ಸ್ವಾಹಾ ಶಬ್ದವನ್ನು ಹೇಳಿದ ನಂತರ ಬಲಗೈಯ ಮಧ್ಯದ ಬೆರಳು, ಅನಾಮಿಕ ಮತ್ತು ಹೆಬ್ಬೆರಳಿನ ಚಿಟಿಕೆಯಲ್ಲಿ ಮೇಲಿನ ಅಕ್ಕಿ-ತುಪ್ಪದ ಮಿಶ್ರಣವನ್ನು ತೆಗೆದುಕೊಂಡು ಅಗ್ನಿಯಲ್ಲಿ ಹಾಕಬೇಕು. (ಬೆರಳುಗಳ ಚಿಟಿಕೆಯಲ್ಲಿ ಹಿಡಿಸುವಷ್ಟು ಅಕ್ಕಿ ಸಾಕಾಗುತ್ತದೆ.) (ಚಿತ್ರ ನೋಡಿ) ಆಮೇಲೆ ಎರಡನೇ ಸಾಲನ್ನು ಒಮ್ಮೆ ಹೇಳಬೇಕು ಮತ್ತು ಸ್ವಾಹಾ ಶಬ್ದವನ್ನು ಹೇಳಿದ ನಂತರ ಬಲಗೈಯಿಂದ ಮೇಲಿನ ಅಕ್ಕಿ-ತುಪ್ಪದ ಮಿಶ್ರಣವನ್ನು ಅಗ್ನಿಯಲ್ಲಿ ಹಾಕಬೇಕು.

**ಅಗ್ನಿಹೋತ್ರ ಮಂತ್ರ:**

ಸೂರ್ಯೋದಯದ ಸಮಯದಲ್ಲಿ ಪಠಿಸಬೇಕಾದ ಮಂತ್ರ : ಸೂರ್ಯಾಯ ಸ್ವಾಹಾ, ಸೂರ್ಯಾಯ ಇದಂ ನ ಮಮ । ಪ್ರಜಾಪತಯೇ ಸ್ವಾಹಾ, ಪ್ರಜಾಪತಯ ಇದಂ ನ ಮಮ ॥

ಸೂರ್ಯಾಸ್ತದ ಸಮಯದಲ್ಲಿ ಪಠಿಸಬೇಕಾದ ಮಂತ್ರ : ಅಗ್ನಯೇ ಸ್ವಾಹಾ, ಅಗ್ನಯ ಇದಂ ನ ಮಮ । ಪ್ರಜಾಪತಯೇ ಸ್ವಾಹಾ, ಪ್ರಜಾಪತಯ ಇದಂ ನ ಮಮ ॥

ಮಂತ್ರಗಳ ಉಚ್ಚಾರವನ್ನು ಹೇಗೆ ಮಾಡಬೇಕು ಮಂತ್ರಗಳ ಉಚ್ಚಾರವು ಅಗ್ನಿಹೋತ್ರದ ಸ್ಥಳದಲ್ಲಿ ಝೇಂಕರಿಸುವಂತಹ ನಾದಮಯ ರೀತಿಯಲ್ಲಿ, ಹೆಚ್ಚು ವೇಗವಲ್ಲದ ಮತ್ತು ಹೆಚ್ಚು ನಿಧಾನವಾಗಿಯೂ ಅಲ್ಲ, ಹೀಗೆ ಸ್ಪಷ್ಟ ಮತ್ತು ಗಟ್ಟಿಧ್ವನಿಯಲ್ಲಿ ಹೇಳಬೇಕು.

ಮಂತ್ರವನ್ನು ಹೇಳುವಾಗ ಭಾವ ಹೇಗಿರಬೇಕು ಮಂತ್ರದಲ್ಲಿನ ಸೂರ್ಯ, ಅಗ್ನಿ, ಪ್ರಜಾಪತಿ ಈ ಶಬ್ದಗಳು ಈಶ್ವರ ವಾಚಕವಾಗಿವೆ. 'ಸೂರ್ಯ, ಅಗ್ನಿ, ಪ್ರಜಾಪತಿ ಇವರ ಅಂತರ್ಯದಲ್ಲಿರುವ ಪರಮಾತ್ಮನ ಶಕ್ತಿಗೆ ನಾನು ಆಹುತಿಯನ್ನು ಅರ್ಪಿಸುತ್ತಿದ್ದೇನೆ, ಇದು ನನ್ನದಲ್ಲ' ಎಂಬ ಅರ್ಥದಲ್ಲಿ ಈ ಮಂತ್ರವಿದೆ. ಇಡೀ ಸೃಷ್ಟಿಯನ್ನು ನಿರ್ಮಿಸುವ, ಅದನ್ನು ಧಾರಣೆ ಮಾಡುವ ಮತ್ತು ಅದರ ಪೋಷಣೆ ಮಾಡುವ ಪರಮಾತ್ಮನ ಶಕ್ತಿಯ ಕುರಿತು ಶರಣಾಗತಭಾವವನ್ನು ಈ ಮಂತ್ರದಲ್ಲಿ ಹೇಳಲಾಗಿದೆ; ಆದುದರಿಂದ ಈ ಮಂತ್ರಗಳನ್ನು ಶರಣಾಗತಭಾವದಿಂದ ಹೇಳಬೇಕು.

**ಮಂತ್ರವನ್ನು ಯಾರು ಹೇಳಬೇಕು:** ಮನೆಯಲ್ಲಿ ಒಬ್ಬರು ಅಗ್ನಿಹೋತ್ರವನ್ನು ಮಾಡುವಾಗ, ಮನೆಯಲ್ಲಿರುವ ಇತರ ಸದಸ್ಯರು ಆ ಸಮಯದಲ್ಲಿ ಅಲ್ಲಿ ಉಪಸ್ಥಿತರಿದ್ದು, ಆಹುತಿ ನೀಡುವ ವ್ಯಕ್ತಿಯೊಂದಿಗೆ ಅಗ್ನಿಹೋತ್ರದ ಮಂತ್ರವನ್ನು ಹೇಳಬಹುದು.

**ಅಗ್ನಿಹೋತ್ರವಾದ ನಂತರ ಇದನ್ನು ಮಾಡಿ: ಧ್ಯಾನ ಧಾರಣೆ :** ಅಗ್ನಿಹೋತ್ರವಾದ ನಂತರ ವಾತಾವರಣದ ಶುದ್ಧಿಯಾಗುವುದರಿಂದ ಇತರ ಸಮಯಕ್ಕೆ ಹೋಲಿಸಿದರೆ ಮನಸ್ಸು ಏಕಾಗ್ರವಾಗಲು ಹೆಚ್ಚಿನ ಸಮಯ ತಗುಲುವುದಿಲ್ಲ. ಆದುದರಿಂದ ಪ್ರತಿಯೊಂದು ಅಗ್ನಿಹೋತ್ರದ ನಂತರ ಸಾಧ್ಯವಿದ್ದಷ್ಟು ಹೆಚ್ಚು ಸಮಯವನ್ನು ಧ್ಯಾನಕ್ಕಾಗಿ ಇಡಬೇಕು. ಕನಿಷ್ಠ ಅಗ್ನಿಯು ಶಾಂತವಾಗುವ ವರೆಗಾದರೂ ಧ್ಯಾನವನ್ನು ಮಾಡಬೇಕು. ಅದರಲ್ಲೂ ಮನೆ ಮಂದಿಯೆಲ್ಲ ಸೇರಿ ಕುಳಿತು ಇಷ್ಟ ದೇವತೆಯ ನಾಮ ಜಪಿಸಿದರೆ ಎಲ್ಲರಿಗೂ ಅದರ ಲಾಭವಾಗುತ್ತದೆ.

**ಭಸ್ಮ ತೆಗೆದಿಡಬೇಕು :** ಮುಂದಿನ ಅಗ್ನಿಹೋತ್ರವನ್ನು ಮಾಡುವುದಕ್ಕಿಂತ ಸ್ವಲ್ಪ ಮೊದಲು ಹವನಪಾತ್ರೆಯಲ್ಲಿನ ವಿಭೂತಿ (ಭಸ್ಮ)ಯನ್ನು ತೆಗೆದು ಗಾಜಿನ ಅಥವಾ ಮಣ್ಣಿನ ಪಾತ್ರೆಯಲ್ಲಿ ಸಂಗ್ರಹಿಸಿಡಬೇಕು.

**ಆಧಾರ : ಸನಾತನ ನಿರ್ಮಿತ ಗ್ರಂಥ 'ಅಗ್ನಿಹೋತ್ರ'**
**ಸಂಗ್ರಹ : ಶ್ರೀ. ವಿನೋದ್ ಕಾಮತ್**

## ವಿದ್ಯಾರ್ಥಿಗಳಿಗೆ ನೈತಿಕ ಪಾಠ ಬೋಧಿಸುವ ಅಗತ್ಯವಿದೆ ; ಕೊಟ್ಟೂರು ಶ್ರೀ

• ಉದಯವಾಹಿನಿ ಬಳ್ಳಾರಿ

ಪ್ರಸ್ತುತ ದಿನಗಳಲ್ಲಿ ವಿದ್ಯಾರ್ಥಿಗಳಿಗೆ ನೈತಿಕ ಪ್ರಜ್ಞೆಯ ಪಾಠಗಳನ್ನು ಬೋಧಿಸುವ ಅನಿವಾರ್ಯತೆ ಇದೆ ಎಂದು ಜಗದ್ಗುರು ಕೊಟ್ಟೂರು ಬಸವಲಿಂಗ ಮಹಾಸ್ವಾಮಿಗಳು ತಿಳಿಸಿದ್ದಾರೆ. ನಗರದ ಕೊಟ್ಟೂರು ಸ್ವಾಮಿ ಮಠದಲ್ಲಿ ಅಕ್ಕನ ಬಳಗದ ಸಹಯೋಗದಲ್ಲಿ ನಡೆದ ಶಿವಾನುಭವ ಸಂಪದ 11ರದಲ್ಲಿ ಆಶೀರ್ವಾದ ಮಾಡಿದ ಶ್ರೀಗಳು, ವಿದ್ಯಾರ್ಥಿ ಜೀವನದಲ್ಲಿ ನೈತಿಕ ಪಾಠಗಳನ್ನು ಬೋಧಿಸುವ ಮೂಲಕ ವ್ಯಕ್ತಿತ್ವ ರೂಪಿಸಿ, ಸನ್ಮಾರ್ಗದಲ್ಲಿ ನಡೆಯುವಂತೆ ಪ್ರತಿಯೊಬ್ಬರನ್ನೂ ರೂಪಿಸಬಹುದಾಗಿದೆ ಎಂದರು.

ಯಾರೇ ಆಗಲಿ ಕಾಯಕದಲ್ಲಿ ನಿಷ್ಠೆಯನ್ನು ತಪ್ಪಬಾರದರು. ಆಸೆಪಡದೇ, ತಿರಸ್ಕಾರ ಭಾವನೆ ತೋರದೇ ಬಂದಿದ್ದನ್ನು ಪ್ರಸಾದ ಎಂದು ಸ್ವೀಕರಿಸಿ ಜೀವನ ನಡೆಸುವುದೇ ಸಾಧನೆ. ವಸ್ತುಗಳನ್ನು ಸಂಗ್ರಹ ಮಾಡುವುದೇ ಜೀವನ ಅಲ್ಲ, ವಸ್ತುಗಳನ್ನು ಹೊರ ಹಾಕುವುದು ಮತ್ತು ಸಂಗ್ರಹಿಸಿದ್ದನ್ನು ಸದ್ಬಳಕೆ ಮಾಡಿಕೊಳ್ಳುವುದೇ ಸಾಧನೆ ಎಂದರು. ಆಯ್ದಕ್ಕಿ ಲಕ್ಕಮ್ಮ ಮಹಾ ಶರಣೆ. ಸ್ತ್ರೀ ಶಕ್ತಿಯ ಪ್ರತೀಕ. ನಿಷ್ಠೆ ಮತ್ತು ಕಾಯಕತತ್ವದ ಮೂಲಕ ಶರಣತ್ವ ಪಡೆದವರು. ಆಕರ್ಷಣೆಗಳ ಮಧ್ಯೆ ಇದ್ದರೂ ಆಕರ್ಷಣೆಗಳನ್ನು ತಿರಸ್ಕರಿಸಿ ಕಾಯಕ ನಿಷ್ಠೆಯನ್ನು ಪಾಲನೆ ಮಾಡಿ ಸಾಧನೆ ಮಾಡಿ, ಅಮರರಾಗಿದ್ದಾರೆ. ವಿಶ್ವಕ್ಕೇ ಮಾದರಿ ಆಗಿದ್ದಾರೆ ಎಂದರು.

ಉಪನ್ಯಾಸಕಿ ಶ್ರೀಮತಿ ಸುಶೀಲಾ ಶಿರೂರು ಅವರು ಸ್ತ್ರೀ ಶಕ್ತಿ ಶರಣೆ ಆಯ್ದಕ್ಕಿ ಲಕ್ಕಮ್ಮ ವಿಷಯದ ಉಪನ್ಯಾಸ ನೀಡಿ, ಶರಣರ ನಿಷ್ಠೆ, ಕಾಯಕ ತತ್ವ, ದಾಸೋಹದ ಮಹತ್ವವನ್ನು ಅರಿತಿದ್ದ ಆಯ್ದಕ್ಕಿ ಲಕ್ಕಮ್ಮ, ಸ್ವಾಭಿಮಾನದ ಪ್ರತೀಕ. ಪ್ರಾಮಾಣಿಕತೆಯ ಪ್ರತೀಕ. ಬಡತನದಲ್ಲೂ ಮಾನಸಿಕ ಶ್ರೀಮಂತಿಕೆಯನ್ನು ಹೊಂದಿದ್ದ ಲಕ್ಕಮ್ಮಳ ಬದುಕು ಧಾರ್ಮಿಕ ಚಳವಳಿಯ ಪ್ರೇರಣಾ ಶಕ್ತಿ. ಲೀಲಾಮೃತ, ಶೂನ್ಯ ಸಂಪಾದನೆ ಇನ್ನಿತರೆ ಗ್ರಂಥಗಳಲ್ಲಿ ಆಯ್ದಕ್ಕಿ ಲಕ್ಕಮ್ಮರ ಕುರಿತು ಪ್ರಸ್ತಾಪ ಆಗಿರುವುದು ಅವರ ಬದುಕಿನ ಮಹಾನ್ ಸಾಧನೆ ಆಗಿದೆ ಎಂದರು. ಸ್ತ್ರೀರೋಗ ತಜ್ಞೆ ಡಾ. ಜ್ಯೋತಿ ಅರವಿಂದ ಪಾಟೇಲ್ ಅವರು, ಮುಖ್ಯ ಅತಿಥಿಗಳಾಗಿ, ಒತ್ತಡದ ದಿನಗಳಲ್ಲಿ ಸಮಾಜದಲ್ಲಿ ಬದಲಾವಣೆ ತರಲು ಆದರ್ಶಗಳನ್ನು ತತ್ವ ಸಿದ್ಧಾಂತಗಳನ್ನು ಕುಟುಂಬದಲ್ಲಿ ಪಾಲಿಸುವುದನ್ನು ಪ್ರಾರಂಭಿಸಬೇಕು. ಕುಟುಂಬದ ಮುಖ್ಯಸ್ಥರು ಈ ವಿಷಯಗಳತ್ತ ಗಮನ ನೀಡಬೇಕು ಎಂದು ಹೇಳಿದರು.

### ಗಡಿ ಬೀದರಿಗೂ ತಟ್ಟಿದ ಗ್ಯಾಸ್ ಸಮಸ್ಯೆ | ರಸ್ತೆ ಬದಿಯ ಬಂಡಿ ವ್ಯಾಪಾರಿಗಳ ಗಳಿಕೆಗೆ ಹೊಡೆತ

# ಅಡುಗೆ ಮನೆಯ ಕೋಣೆಗೆ ಬಂತು ಯುದ್ಧದ ನೇರ ಸಂಕಷ್ಟ.!

**ಉದಯವಾಹಿನಿ ವಿಶೇಷ**

• ಪರಮೇಶ.ಡಿ.ವಿಳಸಪೂರೆ

• ಉದಯವಾಹಿನಿ ಬೀದರ್

ಅಮೆರಿಕ-ಇಸ್ರೇಲ್ ಜತೆಯಾಗಿ ಇರಾನ್ ಮೇಲೆ ನಡೆಸುತ್ತಿರುವ ದಾಳಿ, ಜಾಗತಿಕ ಯುದ್ಧ ಭೀತಿಯಿಂದಾಗಿ ದೇಶದಾದ್ಯಂತ ಅಡುಗೆ ಅನಿಲ ಪೂರೈಕೆಯಲ್ಲಿ ವ್ಯತ್ಯಯ ಆಗಿದ್ದು, ಜಿಲ್ಲೆಯಲ್ಲೂ ಎಲ್‌ಪಿಜಿ ವಾಣಿಜ್ಯ ಸಿಲಿಂಡರ್‌ಗಳ ಪೂರೈಕೆ ತಗ್ಗಿದೆ. ಇದರಿಂದ ಕೈಗಾರಿಕೆಗಳು ಹಾಗೂ ಆತಿಥ್ಯ ವಲಯದ ಉದ್ಯಮಕ್ಕೆ ಸಂಕಷ್ಟ ಬಂದೊದಗಿದೆ.

ಕೆಲ ಹೋಟೆಲ್‌ಗಳವರು ಈಗಾಗಲೇ ಕಟ್ಟಿಗೆಗಳನ್ನು ಸಂಗ್ರಹಿಸಿ, ಒಲೆ ಉರಿಸುವ ಸಿದ್ಧತೆಗಳಲ್ಲಿದ್ದರೆ, ಮತ್ತೆ ಕೆಲವರು ಈಗಾಗಲೆ ಕಟ್ಟಿಗೆ ಒಲೆ ಆರಂಭಿಸಿದ್ದಾರೆ. ಪಾನಿಪುರಿ, ಚೈನೀಸ್ ಬಂಡಿಗಳು, ದೋಸೆ, ಇಡ್ಲಿ ಮಾರಾಟ ಮಾಡುವ ಬಂಡಿಗಳಲ್ಲಿ ವಾಣಿಜ್ಯ ಸಿಲಿಂಡರ್ ಖಾಲಿಯಾಗಿದ್ದು, ಬಹುತೇಕ ವ್ಯಾಪಾರ ಸ್ಥಗಿತಗೊಳಿಸುವ ಹಂತಕ್ಕೆ ತಲುಪಿವೆ. ಅಲ್ಲೆಲ್ಲೋ ಯುದ್ಧವಾಗುತ್ತಿದ್ದರೆ, ನಮ್ಮನೆಯ, ಹೋಟೆಲ್ ಒಲೆಗಳು ಪರಿಣಾಮ ಎದುರಿಸುವಂತಾಗಿದೆ.

**ಪೂರೈಕೆಯಲ್ಲಿ ವ್ಯತ್ಯಾಸ, ದರ ಹೆಚ್ಚಳ:** ದುಬೈ ಸೇರಿ ನಾನಾ ದೇಶಗಳಿಂದ ವಿಮಾನ, ಹಡಗುಗಳಲ್ಲಿ ದೇಶಕ್ಕೆ ಬರುವ ಖರ್ಜೂರ, ಡ್ರೈಫ್ರೂಟ್ಸ್‌ಗಳ ಪೂರೈಕೆಯಲ್ಲೂ ವ್ಯತ್ಯಾಸ ಆಗುತ್ತಿರುವುದರಿಂದ ಇವುಗಳ ದರದಲ್ಲೂ ಹೆಚ್ಚಾಗಿದೆ. ಜತೆಗೆ, ಸಿಎನ್‌ಜಿ ಗ್ಯಾಸ್ ಪೂರೈಕೆಯಲ್ಲೂ ವ್ಯತ್ಯಾಸ ಆಗುತ್ತಿರುವುದರಿಂದ ಇವುಗಳನ್ನೇ ನೆಚ್ಚಿಕೊಂಡಿರುವ ಬೈಕ್ ಸವಾರರು, ಆಟೋ ಓಡಿಸುವವರು, ಕಾರುಗಳ ಮಾಲೀಕರು ಹೆಚ್ಚಿನ ದರ ತೆತ್ತಬೇಕಾಗಿದೆ. ಒಟ್ಟಿನಲ್ಲಿ ಯುದ್ಧದ ಬಿಸಿ ಎಲ್ಲಾ ಕ್ಷೇತ್ರಗಳಿಗೂ ಹಬ್ಬುತ್ತಿದ್ದು, ಜನ ಜೀವನದ ಮೇಲೆ ನೇರವಾಗಿ ದುಷ್ಪರಿಣಾಮ ಬೀರುತ್ತಿದೆ. ವದಂತಿಗಳಿಗೆ ಕಿವಿಗೊಡದಿರಿ ದೇಶದಲ್ಲಿ ಇಂಧನ ಕೊರತೆಯಾಗಿದೆ ಎಂದು ಸಾಮಾಜಿಕ ಜಾಲತಾಣಗಳಲ್ಲಿ ಹರಡುತ್ತಿರುವ ಸುಳ್ಳು ಸುದ್ದಿ ವದಂತಿಗಳಿಗೆ ಸಾರ್ವಜನಿಕರು ಕಿವಿಗೊಡಬಾರದು ಎಂದು ಹಿಂದೂಸ್ತಾನ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್ ಮನವಿ ಮಾಡಿದೆ. ದೇಶಕ್ಕೆ ಬೇಕಿರುವಷ್ಟು ಇಂಧನ ಲಭ್ಯವಿದೆ. ಸಾರ್ವಜನಿಕರು ಯಾವುದೇ ರೀತಿಯ ಚಿಂತೆ ಆತಂಕಕ್ಕೆ ಒಳಗಾಗುವ ಅಗತ್ಯವಿಲ್ಲ. ಆದರೆ ಅಗತ್ಯಕ್ಕೆ ತಕ್ಕಂತೆ ಬಳಸಬೇಕೆಂದು ಪ್ರಕಟಣೆ ಹೊರಡಿಸಿದೆ.



ಉದಯವಾಹಿನಿ ಚಿತ್ರ



> ವಾಣಿಜ್ಯ ಸಿಲಿಂಡರ್‌ಗಳ ಕೊರತೆಯಿಂದ ಈಗಾಗಲೇ ಕೆಲವು ಕೈಗಾರಿಕೆಗಳು ಉತ್ಪಾದನೆ ತಗ್ಗಿಸಿದ್ದು ಕಾರ್ಮಿಕರಿಗೆ ರಜೆ ನೀಡುತ್ತಿವೆ. ಇದು ಉದ್ಯಮದ ಮೇಲೆ ಋಣಾತ್ಮಕ ಪರಿಣಾಮ ಬೀರಲಿದೆ. ಇತ್ತೀಚೆಗೆ ಹೋಟೇಲ್‌ಗಳು ಅತ್ಯಾಧುನಿಕ ಅಡುಗೆ ಮನೆ ವ್ಯವಸ್ಥೆ ಅಳವಡಿಸಿಕೊಂಡಿವೆ. ಹೀಗಾಗಿ ಇಲ್ಲಿ ಉರುವಲಾಗಿ ಕಟ್ಟಿಗೆ ಅಥವಾ ಇನ್ಯಾವುದೇ ದಹ್ಯ ವಸ್ತುಗಳನ್ನು ಬಳಸಲು ಅವಕಾಶವೇ ಇಲ್ಲ, ಇಂಥ ಅಡುಗೆ ಮನೆ ಹೊಂದಿರುವ ಹೋಟೇಲ್ ಮಾಲೀಕರು ಬಾಗಿಲು ಮುಚ್ಚಲೇ ಬೇಕಿದೆ.
>
> -ಚೇತನ್ ಸೋರಳ್ಳಿ ಸಾಮಾಜಿಕ ಹೋರಾಟಗಾರ ಬೀದರ್

**ಬುಕ್ ಮಾಡಲು ತೊಂದರೆ:** ಪ್ರಸ್ತುತ ಗೃಹ ಬಳಕೆಯ ಸಿಲಿಂಡರ್‌ಗಳನ್ನು ಬುಕ್ ಮಾಡಲು ಹೋದರೆ ಗ್ರಾಹಕರು ತಾಂತ್ರಿಕ ತೊಂದರೆ ಎದುರಿಸುತ್ತಿದ್ದಾರೆ. ಈ ಮುಂಚೆ ಮೊಬೈಲ್ ನಂಬರ್‌ಗೆ ಕರೆ ಮಾಡಿ ಬುಕ್ ಮಾಡಲಾಗುತಿತ್ತು. ಆದರೆ, ಈಗ ಕರೆ ಮಾಡಿ ಬುಕ್ ಮಾಡಲು ಹೋದರೆ ಮೊಬೈಲ್ ರಿಂಗ್ ಆಗುತ್ತಿಲ್ಲ. ಇದರಿಂದ ಗ್ರಾಹಕರು ಪರೇಶಾನ್ ಆಗಿ ಗ್ಯಾಸ್ ಏಜೆನ್ಸಿಗಳಿಗೆ ದೌಡಾಯಿಸಿ ಅಲ್ಲಿಯೇ ಹೋಗಿ ಬುಕ್ ಮಾಡಿ ಬರುತ್ತಿದ್ದಾರೆ.

**ಗ್ರಾಹಕರ ಮೇಲೆ ಪರಿಣಾಮ:** ಖಾಸಗಿ ಕಂಪನಿಯ ಗ್ಯಾಸ್ ಸಿಲಿಂಡರ್ ದರದಲ್ಲಿ ಭಾರಿ ಹೆಚ್ಚಳವಾಗಿದ್ದು, 17 ಕೆಜಿಯ ವಾಣಿಜ್ಯ ಸಿಲಿಂಡರ್‌ಗೆ 1600 ರೂ. ಇದ್ದ ದರವೀಗ, ಒಂದೆರಡು ದಿನಗಳಲ್ಲೇ 1850 ಏರಿಕೆಯಾಗಿತ್ತು. ಸದ್ಯಕ್ಕೆ ಮಾರುಕಟ್ಟೆಯಲ್ಲಿ 17 ಕೆಜಿಗೆ 2100 ರೂ. ಪಡೆಯಲಾಗುತ್ತಿದ್ದು, ಅನಿವಾರ್ಯವಾಗಿ ಹೋಟೆಲ್ ಮಾಲೀಕರು ಖರೀದಿಸುತ್ತಿದ್ದು, ಟೀ, ಕಾಫಿ, ತಿಂಡಿಗಳ ದರವೂ ಹೆಚ್ಚಳ ಆಗುವ ಸಾಧ್ಯತೆಯಿದೆ. ಇದರ ಪರಿಣಾಮವೂ ನೇರವಾಗಿ ಗ್ರಾಹಕರ ಮೇಲೆಯೇ ಬೀಳಲಿದೆ.

**ಬಿಸಿಯೂಟಕ್ಕೂ ಬಿಸಿ?:** ಸರ್ಕಾರಿ ಹಾಗೂ ಅನುದಾನಿತ ಶಾಲೆಗಳಲ್ಲಿನ ಅಕ್ಷರ ದಾಸೋಹ ಯೋಜನೆ, ವಿದ್ಯಾರ್ಥಿನಿಲಯಗಳಿಗೆ ಸಿಲಿಂಡರ್ ಪೂರೈಕೆಯ ಬಿಸಿ ತಟ್ಟುವ ಸಾಧ್ಯತೆ ಇದೆ. ಸದ್ಯ ಕೆಲವು ವಾರಗಳಿಗೆ ಆಗುವಷ್ಟು ದಾಸ್ತಾನು ಇದೆ. ಪರೀಕ್ಷೆಗಳು ನಡೆದಿದ್ದು, ಇನ್ನೇನು ಶೈಕ್ಷಣಿಕ ವರ್ಷ ಮುಗಿಯಲಿದೆ. ಹೀಗಾಗಿ ಹೆಚ್ಚು ತೊಂದರೆ ಆಗದು ಎಂದು ಅಧಿಕಾರಿಗಳು ಹೇಳುತ್ತಾರೆ.

## ಮಿನಿ ನ್ಯೂಸ್

### ಖೋಟಾ ನೋಟು ಚಲಾವಣೆ; 5 ವರ್ಷ ಜೈಲು ಶಿಕ್ಷೆ, 40,000 ದಂಡ

• ಉದಯವಾಹಿನಿ ದಾವಣಗೆರೆ

ಖೋಟಾ ನೋಟು ಮುದ್ರಿಸಿ, ಚಲಾವಣೆ ಮಾಡುತ್ತಿದ್ದ ಇಬ್ಬರು ಅಪರಾಧಿಗಳಿಗೆ ಇಲ್ಲಿನ 2ನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ 5 ವರ್ಷ ಜೈಲು ಶಿಕ್ಷೆ ಹಾಗೂ ತಲಾ ರೂ. 40,000 ದಂಡ ವಿಧಿಸಿದೆ. ದಾವಣಗೆರೆಯ ಯಲ್ಲಮ್ಮ ನಗರದ ನಿವಾಸಿ ಎಸ್. ಅಶೋಕ (40) ಹಾಗೂ ವಿಜಯನಗರ ಜಿಲ್ಲೆ ಹರಪನಹಳ್ಳಿ ತಾಲ್ಲೂಕಿನ ಹಲವಾಗಲು ಗ್ರಾಮದ ನಿವಾಸಿ ಹಾಲೇಶ ಶಿಕ್ಷೆಗೆ ಗುರಿಯಾದವರು. 2022ರಲ್ಲಿ ಯಲ್ಲಮ್ಮ ನಗರದಲ್ಲಿ ಅಪರಾಧಿಗಳು ಖೋಟಾ ನೋಟು ಚಲಾವಣೆಯಲ್ಲಿ ತೊಡಗಿದ್ದರು. ಪೊಲೀಸರು ದಾಳಿ ನಡೆಸಿ ಖೋಟಾ ನೋಟು ಹಾಗೂ ಅವುಗಳ ತಯಾರಿಕೆಗೆ ಬಳಸುತ್ತಿದ್ದ ಯಂತ್ರೋಪಕರಣಗಳನ್ನು ವಶಪಡಿಸಿಕೊಂಡಿದ್ದರು. ವಿಚಾರಣೆ ನಡೆಸಿದ ನ್ಯಾಯಾಧೀಶರಾದ ಪ್ರವೀಣಕುಮಾರ್ ಆರ್.ಎನ್. ಶಿಕ್ಷೆ ವಿಧಿಸಿ ತೀರ್ಪು ನೀಡಿದರು. ಅಪರಾಧಿಗಳು ಈಗಾಗಲೇ ನ್ಯಾಯಾಂಗ ಬಂಧನದಲ್ಲಿರುವುದರಿಂದ ಶಿಕ್ಷಾ ಅವಧಿಯನ್ನು ಸೆಟ್‌ಆಫ್ ಮಾಡಲಾಗಿದೆ.

### ಖಾಸಗಿ ಕಂಪನಿ ಮಾರಾಟಗಾರ ಲೋಕಾಯುಕ್ತ ಬಲೆಗೆ

• ಉದಯವಾಹಿನಿ ನ್ಯಾಮತಿ

ಶಿವಮೊಗ್ಗದ ಖಾಸಗಿ ಆಕ್ರೋ ಮಾರ್ಟ್ ಕಂಪನಿಯ ಸೇಲ್ಸ್ ಎಕ್ಸಿಕ್ಯೂಟಿವ್ ಕೃಷಿ ಇಲಾಖೆಯಿಂದ ಸಬ್ಸಿಡಿ ದರದಲ್ಲಿ ಯಂತ್ರೋಪಕರಣ ಕೊಡಿಸುವುದಾಗಿ ರೈತರೊಬ್ಬರಿಂದ ಲಂಚ ಪಡೆಯುವಾಗ ದಾವಣಗೆರೆ ಲೋಕಾಯುಕ್ತ ಪೊಲೀಸರು ಬಂಧಿಸಿದ್ದಾರೆ. ಯರಗನಾಳ್ ಗ್ರಾಮದ ರೈತ ಹತ್ತೂರು ಯುವರಾಜ ಎಂಬುವವರು ಕೃಷಿ ಇಲಾಖೆಯಿಂದ ಸಬ್ಸಿಡಿ ದರದಲ್ಲಿ ಯಂತ್ರೋಪಕರಣ ಪಡೆಯಲು ಅರ್ಜಿ ಸಲ್ಲಿಸಿದ್ದರು. ಕೃಷಿ ಅಧಿಕಾರಿಗಳಿಗೆ ಹಣ ನೀಡಿ ಯಂತ್ರೋಪಕರಣ ಕೊಡಿಸುವುದಾಗಿ ಆರೋಪಿ ರೂ. 2,500 ಮೊತ್ತಕ್ಕೆ ಬೇಡಿಕೆ ಇಟ್ಟಿದ್ದು, ರೂ. 2,000 ಲಂಚ ಪಡೆಯುವಾಗ ಆರೋಪಿಯನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಳಪಡಿಸಲಾಗಿದೆ. ಈ ಪ್ರಕರಣದಲ್ಲಿ ಅಧಿಕಾರಿಗಳ ಪಾತ್ರ ಇದೆಯೇ ಎಂಬುದು ತನಿಖೆಯಿಂದ ತಿಳಿಯಬೇಕಿದೆ ಎಂದು ಲೋಕಾಯುಕ್ತ ಪೊಲೀಸ್ ಪ್ರಭು ಬಿ.ಸೂರಿನ ಮಾಹಿತಿ ನೀಡಿದರು.

### ಆಶಾ ಕಾರ್ಯಕರ್ತೆಯರ ಬೇಡಿಕೆಗೆ ಸ್ಪಂದಿಸಿ

• ಉದಯವಾಹಿನಿ ಬೆಳಗಾವಿ

ಆಶಾ ಕಾರ್ಯಕರ್ತೆಯರ ವಿವಿಧ ಬೇಡಿಕೆಗಳಿಗೆ ಸಂಬಂಧಿತ ಅಧಿಕಾರಿಗಳು ತಕ್ಷಣವೇ ಸ್ಪಂದಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ ಸೂಚಿಸಿದರು. ಇಲ್ಲಿನ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ನಡೆದ ಆಶಾ ಕಾರ್ಯಕರ್ತೆಯರ ಕುಂದುಕೊರತೆ ಸಭೆಯಲ್ಲಿ ಅವರು ಮಾತನಾಡಿದರು.

ವಿವಿಧ ಕೆಲಸಗಳ ನಿಮಿತ್ತ ಆಶಾ ಕಾರ್ಯಕರ್ತೆಯರು ನಿಯಮಿತವಾಗಿ ತಾಲ್ಲೂಕು ಆಸ್ಪತ್ರೆಗಳಿಗೆ ಭೇಟಿ ನೀಡುತ್ತಾರೆ. ಹಾಗಾಗಿ ತಾಲ್ಲೂಕು ಆಸ್ಪತ್ರೆಗಳಲ್ಲಿ ಅವರಿಗೆ ವಿಶ್ರಾಂತಿ ಕೊಠಡಿಯ ವ್ಯವಸ್ಥೆ ಮಾಡಿಕೊಡಬೇಕು ಎಂದು ನಿರ್ದೇಶನ ನೀಡಿದರು. ಜಿ.ಪಂ ಉಪಕಾರ್ಯದರ್ಶಿ (ಅಭಿವೃದ್ಧಿ) ಬಸವರಾಜ ಅಡವಿಮಠ, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಐ.ಪಿ.ಗಡಾದ, ಚಿಕ್ಕೋಡಿ ಹೆಚ್ಚುವರಿ ಜಿಲ್ಲಾ ಆರೋಗ್ಯಾಧಿಕಾರಿ ಡಾ.ಎಸ್.ಎಸ್.ಗಡೇದ, ಇದ್ದರು. ಆಶಾ ತಂತ್ರಾಂಶದಲ್ಲಿ ಕೆಲಸದ ಮಾಹಿತಿ ದಾಖಲಿಸಲು ಆಗುತ್ತಿಲ್ಲ. ಹಾಗಾಗಿ ತಂತ್ರಾಂಶದಲ್ಲಿನ ಸಮಸ್ಯೆ ಪರಿಹರಿಸಬೇಕು ಎಂದು ಆಗ್ರಹಿಸಿ ಆಶಾ ಕಾರ್ಯಕರ್ತೆಯರ ಸಂಘದ ಪದಾಧಿಕಾರಿಗಳು ಶಿಂಧೆ ಅವರಿಗೆ ಮನವಿ ಕೊಟ್ಟರು.

### ಗುಣಮಟ್ಟದ ಶಿಕ್ಷಣ ಅಗತ್ಯ : ಚರಂತಿಮಠ

• ಉದಯವಾಹಿನಿ ಬಾಗಲಕೋಟೆ

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಗುಣಮಟ್ಟದ ಶಿಕ್ಷಣ ಅಗತ್ಯವಾಗಿದೆ ಎಂದು ಮಾಜಿ ಶಾಸಕ ವೀರಣ್ಣ ಚ ರಂತಿಮಠ ಅಭಿಪ್ರಾಯಪಟ್ಟರು.

ನಗರದಲ್ಲಿ ಇತ್ತೀಚೆಗೆ ನಡೆದ ಸಹನಾ ಶಿಕ್ಷಣ ಸಂಸ್ಥೆಯ ಅರುಂಧತಿ ಇಂಗ್ಲಿಷ್ ಮಾಧ್ಯಮ ಶಾಲೆಯ ನೂತನ ಕಟ್ಟಡ ಉದ್ಘಾಟಿಸಿ ಮಾತನಾಡಿದ ಅವರು, ಗುಣಮಟ್ಟದ ಶಿಕ್ಷಣದ ಜೊತೆಗೆ ಈ ಸಂಸ್ಥೆ ಶೈಕ್ಷಣಿಕ ವಾತಾವರಣ ವೃದ್ಧಿಸುವ ಸುಸಜ್ಜಿತ ಕಟ್ಟಡ ಹೊಂದಿರುವುದು ಆಶಾದಾಯಕ ಬೆಳವಣಿಗೆ ಎಂದರು. ರಾಜ್ಯಸಭಾ ಸದಸ್ಯ ನಾರಾಯಣ ಭಾಂಡಗೆ ಮಾತನಾಡಿ, ಶಿಸ್ತು, ಗುಣಮಟ್ಟದ ಶಿಕ್ಷಣ ನೀಡುವ ಕೆಲಸವನ್ನು ಸಂಸ್ಥೆ ಮಾಡುತ್ತಿದೆ ಎಂದು ಹೇಳಿದರು. ಕರ್ನಾಟಕ ವಿಶ್ವವಿದ್ಯಾಲಯದ ಕುಲಸಚಿವ ನಿಜಲಿಂಗಪ್ಪ ಮಟ್ಟಿಹಾಳ ಮಾತನಾಡಿ, ಮಕ್ಕಳ ಭವಿಷ್ಯಕ್ಕೆ ಗುಣಮಟ್ಟದ ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರವೂ ಅಷ್ಟೇ ಅಗತ್ಯ ಎಂದರು. ಸಂಸ್ಥೆಯ ಸಂಸ್ಥಾಪಕ ಲಕ್ಷ್ಮಣ ಯಂಕಂಚಿ ಅವರು, ಸಂಸ್ಥೆ ಬೆಳೆದು ಬಂದ ಯಶೋಗಾಥೆ, ಪಟ್ಟ ಶ್ರಮ, ಉದ್ದೇಶಗಳನ್ನು ವಿವರಿಸಿದರು.

ಹಂಪಿ ಮಾತಂಗ ಪೀಠದ ಪೂರ್ಣಾನಂದ ಭಾರತಿ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ಸಂಸ್ಥೆ ಅಧ್ಯಕ್ಷೆ ಚಂದ್ರಮ್ಮ ಯಂಕಂಚಿ ಅಧ್ಯಕ್ಷತೆ ವಹಿಸಿದ್ದರು. ಬಿಜೆಪಿ ಮುಖಂಡ ಉಮೇಶ ಕಾರಜೋಳ, ಪತ್ರಕರ್ತ ಮಲ್ಲಿಕಾರ್ಜುನ ಸಿದ್ದಣ್ಣವರ, ಜಿಲ್ಲಾಸ್ಪತ್ರೆ ಸಹಾಯಕ ಆಡಳಿತಾಧಿಕಾರಿ ಎಚ್.ವಿ. ಲಿಂಗಣ್ಣವರ ಇದ್ದರು.

## ಬೋರ್ಗಿಯಲ್ಲಿ ಸೌಹಾರ್ದತೆಯ ಇಫ್ತಾರ್ ಕೂಟ

• ಉದಯವಾಹಿನಿ ಔರಾದ್

ರಂಜಾನ್ ಹಬ್ಬದ ಹಿನ್ನೆಲೆಯಲ್ಲಿ ಸೌಹಾರ್ದತೆ, ಸಹೋದರತ್ವ ಮತ್ತು ಪರಸ್ಪರ ಗೌರವವನ್ನು ಬಲಪಡಿಸುವ ಉದ್ದೇಶದಿಂದ ಔರಾದ ತಾಲ್ಲೂಕಿನ ಬೋರ್ಗಿ ಗ್ರಾಮದಲ್ಲಿ ಸೌಹಾರ್ದತೆಯ ಇಫ್ತಾರ್ ಕೂಟ ಆಯೋಜಿಸಲಾಯಿತು.

ಯುವ ಚಿಂತಕ ಉಮಾಕಾಂತ ವಿಳಾಸಪೂರೆ ಅವರು ಮಾತಾನಾಡಿ ಪವಿತ್ರ ರಂಜಾನ್ ಮಾಸದಲ್ಲಿ ಸರ್ವಧರ್ಮದ ತತ್ವಸಾರವನ್ನು ತಿಳಿದುಕೊಳ್ಳಲು ಇಂತಹ ಸೌಹಾರ್ದತೆಯ ಕೂಟಗಳು ಅತ್ಯಂತ ಅವಶ್ಯಕ. ನಮ್ಮ ಗ್ರಾಮದಲ್ಲಿ ಹಿರಿಯರು ಹಿಂದಿನಿಂದಲೂ ಸರ್ವ ಸಮುದಾಯದವರು ಶಾಂತಿ, ಸೌಹಾರ್ದತೆ ಮತ್ತು ಸಹೋದರತ್ವದಿಂದ ಬದುಕಿದ್ದಾರೆ. ಅದೆ ಪರಂಪರೆ ಮುಂದುವರೆಸುವ ಜವಾಬ್ದಾರಿ ಯುವಕರ ಮೇಲಿದೆ ಎಂದು ಹೇಳಿದರು.

ಲಿಂಗಾಯತ ಸಮನ್ವಯ ಸಮಿತಿಯ ರಾಜ್ಯ ಸಂಚಾಲಕರು ಶ್ರೀಕಾಂತ ಸ್ವಾಮಿ, ಮಾತನಾಡಿ ಸಮಾಜದಲ್ಲಿ, ಶಾಂತಿ, ಸೌಹಾರ್ದತೆ ಮತ್ತು ಪರಸ್ಪರ ಗೌರವವನ್ನು ಬೆಳೆಸಲು ಸರ್ವಧರ್ಮದ ತತ್ವಸಾರವನ್ನು ತಿಳಿದುಕೊಳ್ಳಬೇಕು, ವಿಭಿನ್ನ ಧರ್ಮಗಳ ಸಾರ ಒಂದೇ



ಉದಯವಾಹಿನಿ ಚಿತ್ರ

ಮಾನವಿಯ ಮೌಲ್ಯಗಳನ್ನು ಸಾರುತ್ತವೆ ಎಂಬುದನ್ನು ಜನರಿಗೆ ತಿಳಿಸಲು ಸೌಹಾರ್ದ ಕೂಟಗಳಂತಹ ಕಾರ್ಯಕ್ರಮಗಳು ಮುಖ್ಯಪಾತ್ರ ವಹಿಸುತ್ತವೆ ಎಂದರು. ಗ್ರಾಮದ ಮುಖಂಡ ಅಯುಬಖಾನ್ ಪಾಟಿಲ್ ಮಾತನಾಡಿ ರಂಜಾನ್ ಮುಸ್ಲಿಮರ ಪವಿತ್ರ ತಿಂಗಳಾಗಿದ್ದು, ಅಲ್ಲಾನನ್ನು ಸಾಕ್ಷಾತ್ಕರಿಸಿಕೊಳ್ಳುವ ಮಾರ್ಗವಾಗಿದೆ. ಇದು ಕೋಮು ಸೌಹಾರ್ದದ ಸಂಕೇತವಾಗಿದೆ. ಎಲ್ಲರೂ ಸೇರಿ ಹಬ್ಬಹರಿದಿನ ಆಚರಿಸಿದರೆ, ಸಮಾಜದಲ್ಲಿ ಸಂತೋಷ ನೆಮ್ಮದಿ ಶಾಂತಿ ನೆಲಸಲಿದೆ. ಕಾರ್ಯಕ್ರಮದಲ್ಲಿ ಸಾಮಾಜಿಕ ಕಾರ್ಯಕರ್ತ ಜಗದೀಶ್ವರ ಬಿರಾದಾರ, ಸಂಗಮೇಶ ಕೌಟಗೆ, ಚನ್ನಪ್ಪಾ ಬಿರಾದಾರ, ವಿಶ್ವನಾಥ ಬುಣಗೆ, ಶಾಮರಾವ ಜೈನಾಪುರೆ, ಶೇಖ್ ಖಲೀಲ್, ಸಿದ್ದಪ್ಪಾ ಉಜ್ಜಣಗೆ ಮತ್ತು ಗ್ರಾಮದ ಸರ್ವ ಸಮುದಾಯದ ಹಿರಿಯರು, ಮುಖಂಡರು ಉಪಸ್ಥಿತರಿದ್ದರು.

> ಇಫ್ತಾರ್ ಕೂಟದಲ್ಲಿ ಪಾಲ್ಗೊಳ್ಳುವುದರಿಂದ ಪ್ರತಿಯೊಬ್ಬರೂ ಸನ್ಮಾರ್ಗದಲ್ಲಿ ನಡೆಯಲು ಪ್ರೇರಣೆಯಾಗಲಿದೆ. ಪವಿತ್ರ ಕುರಾನ್ ಮನುಷ್ಯನಿಗೆ ದೇಹ ದಂಡಿಸಿ, ಶಿಕ್ಷೆ ಕೊಡಲು ಉಪವಾಸ ಮಾಡು ಅಂತ ಹೇಳಿಲ್ಲ. ನನ್ನೊಳಗಿನ ಭ್ರಷ್ಟಾಚಾರ ಹೊಡೆದೋಡಿಸಲು, ಆತ್ಮಶುದ್ಧಿಗಾಗಿ ಉಪವಾಸ ಮಾಡುವುದಾಗಿದೆ. ಜಗತ್ತಿನ ಶ್ರೇಷ್ಠ ಆರಾಧನೆ ಉಪವಾಸ.
>
> -ಉಮಾಕಾಂತ ವಿಳಸಪೂರೆ, ಯುವ ಚಿಂತಕರು.

## ತಾತ್ವಿಕ ಚಿಂತನೆಯಲ್ಲೂ ಮಹಿಳಾ ಪರ ಧ್ವನಿ: ಲೇಖಕಿ

• ಉದಯವಾಹಿನಿ ಉಡುಪಿ

ಮಹಿಳಾ ಪರ ಚಿಂತನೆಗಳು ಕೇವಲ ಪಾಶ್ಚಿಮಾತ್ಯ ರಾಷ್ಟ್ರಗಳ ಕಲ್ಪನೆಯಲ್ಲಿ ಭಾರತೀಯ ತಾತ್ವಿಕ ಚಿಂತನೆಗಳಲ್ಲೂ ಮಹಿಳಾ ಪರ ಹೋರಾಟದ ಧ್ವನಿಗಳಿವೆ ಎಂದು ಲೇಖಕಿ ಬಿ.ಎಂ.ರೋಹಿಣಿ ಹೇಳಿದರು.

ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಡಾ.ಶಿವರಾಮ ಕಾರಂತ ಟ್ರಸ್ಟ್, ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಹಾಗೂ ಉಡುಪಿ ಜಿಲ್ಲಾ ಲೇಖಕಿಯರ ಮತ್ತು ವಾಚಕಿಯರ ಸಂಘದ ಸಂಯುಕ್ತ ಆಶ್ರಯದಲ್ಲಿ ಅಜ್ಜರಕಾಡಿನ ಜಿ.ಶಂಕರ್ ಮಹಿಳಾ ಪ್ರಥಮ ದರ್ಜೆ ಕಾಲೇಜಿನಲ್ಲಿ ನಡೆದ ಮಹಿಳಾ ದಿನಾಚರಣಾ ಸಪ್ತಾಹದ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ನಮ್ಮ ದೇಶದ ಪುರಾಣ ಮತ್ತು ಇತಿಹಾಸಗಳನ್ನು ವಾಸ್ತವಿಕ ದೃಷ್ಟಿಕೋನದಿಂದ ವಿಶ್ಲೇಷಿಸಿದರೆ ಮಹಿಳಾ ಪರ ಚಿಂತನೆಗಳನ್ನು ಕಾಣಬಹುದು. ಆ ಚಿಂತನೆಯು ನಮ್ಮ ದೇಶದ ಸ್ತ್ರೀಯರಲ್ಲಿ ಆತ್ಮಭಿಮಾನವನ್ನು ಹೆಚ್ಚಿಸಿ ಸಂವಿಧಾನವು ಪ್ರತಿಪಾದಿಸುವ ಸಮಾನತೆಯನ್ನು



ಉದಯವಾಹಿನಿ ಚಿತ್ರ

ಪ್ರತಿಪಾದಿಸಲು ದಾರಿಯಾಗುತ್ತದೆ ಎಂದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಕರ್ನಾಟಕ ಸಭಾಪತಿ ಬಸರೂರು ರಾಜೀವ ಶೆಟ್ಟಿ, ಒಂದೂವರೆ ಶತಮಾನದಿಂದಲೇ ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಮಹಿಳಾ ಸಮಾನತೆಯನ್ನು ಪ್ರತಿಪಾದಿಸಿದೆ. ಡಾ.ಶಿವರಾಮ ಕಾರಂತರ ದೃಷ್ಟಿಕೋನ ಅದಕ್ಕೆ ಪೂರಕವಾಗಿದೆ ಎಂದರು.

ಡಾ.ಶಿವರಾಮ ಕಾರಂತ ಟ್ರಸ್ಟಿನ ಅಧ್ಯಕ್ಷ ಗಣನಾಥ ಎಕ್ಕಾರು ಮಾತನಾಡಿ, ಯುವ ಜನತೆಗೆ ಮಹಿಳಾ ಸಬಲೀಕರಣದ ಮಹತ್ವವನ್ನು ತಿಳಿಸುವುದು ಈ ಕಾರ್ಯಕ್ರಮದ ಉದ್ದೇಶ ಎಂದರು.


## ರಾಜ್ಯ ಬಿಜೆಪಿ ಶಿಸ್ತು ಸಮಿತಿ ಅಧ್ಯಕ್ಷ ಲಿಂಗರಾಜ ಪಾಟೀಲ ರಾಜೀನಾಮೆ!

### 37 ವರ್ಷ ಪಕ್ಷಕ್ಕಾಗಿ ದುಡಿದರೂ ಅನ್ಯಾಯವೆಂದು ಆಕ್ರೋಶ

• ಉದಯವಾಹಿನಿ ಹುಬ್ಬಳ್ಳಿ

ವಿಧಾನ ಪರಿಷತ್ ಪಶ್ಚಿಮ ಪದವೀಧರ ಕ್ಷೇತ್ರದ ಚುನಾವಣೆಗೆ ಟಿಕೆಟ್ ಸಿಗದ ಹಿನ್ನೆಲೆಯಲ್ಲಿ ಬೇಸರಗೊಂಡ ರಾಜ್ಯ ಬಿಜೆಪಿ ಶಿಸ್ತು ಸಮಿತಿ ಅಧ್ಯಕ್ಷ ಸ್ಥಾನಕ್ಕೆ ಲಿಂಗರಾಜ ಪಾಟೀಲ ರಾಜೀನಾಮೆ ನೀಡಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಅವರಿಗೆ ರಾಜೀನಾಮೆ ಪತ್ರ ಬರೆದಿರುವ ಅವರು, ಕಳೆದ 37 ವರ್ಷಗಳಿಂದ ಪಕ್ಷದ ವಿವಿಧ ಜವಾಬ್ದಾರಿಯನ್ನು ನಿಭಾಯಿಸಿದ್ದೇನೆ. ಈ ಬಾರಿ ವಿಧಾನ ಪರಿಷತ್ ಚುನಾವಣೆಯಲ್ಲಿ ಟಿಕೆಟ್ ನೀಡಬಹುದು ಎನ್ನುವ ವಿಶ್ವಾಸದಲ್ಲಿದ್ದೆ. ಆದರೆ, ಟಿಕೆಟ್ ನೀಡದೇ ಅನ್ಯಾಯ ಮಾಡಲಾಗಿದೆ. ಅದಕ್ಕಾಗಿ ಪಕ್ಷ ನೀಡಿದ ಜವಾಬ್ದಾರಿ ಹುದ್ದೆಗೆ ರಾಜೀನಾಮೆ ನೀಡುವುದಾಗಿ ಲಿಂಗರಾಜ ಪಾಟೀಲ ತಿಳಿಸಿದ್ದಾರೆ. ಪಕ್ಷದ ಕಾರ್ಯಕರ್ತನಾಗಿರುವೆ ಶಿಸ್ತು ಸಮಿತ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿದರೂ ಕೂಡ ಪಕ್ಷದ ಕಾರ್ಯಕರ್ತನಾಗಿ ಮುಂದುವರೆಸುತ್ತೇನೆ ರಾಜ್ಯಾಧ್ಯಕ್ಷರಿಗೆ ಬರೆದ ಪತ್ರದಲ್ಲಿ ಉಲ್ಲೇಖ ಮಾಡಿದ್ದಾರೆ.

ರಾಜ್ಯಾಧ್ಯಕ್ಷರಿಗೆ ಬರೆದ ರಾಜೀನಾಮೆ ಪತ್ರದ ಸಾರಾಂಶ ಇಲ್ಲಿದೆ ನಾನು ಲಿಂಗರಾಜ ಪಾಟೀಲ ಕಳೆದ 37 ವರ್ಷಗಳಿಂದ ಭಾರತೀಯ ಜನತಾ ಪಾರ್ಟಿಯ ನಿಷ್ಠಾವಂತ ಕಾರ್ಯಕರ್ತನಾಗಿ ಪಕ್ಷ ನೀಡಿದ ಪ್ರತಿಯೊಂದು ಜವಾಬ್ದಾರಿಯನ್ನು ಪ್ರಾಮಾಣಿಕವಾಗಿ ನಿರ್ವಹಿಸಿ, ಪಕ್ಷದ ಬೆಳವಣಿಗೆಗೆ ನನ್ನದೇ ಆದ ಕೊಡುಗೆ ನೀಡಿದ್ದೇನೆ. ನನ್ನ ಪಕ್ಷದ ಸೇವೆಗೆ ರಾಜ್ಯದ ಅನೇಕ ಕಾರ್ಯಕರ್ತರು ಸಾಕ್ಷಿಯಾಗಿದ್ದಾರೆ. ನನ್ನ ಈ ದೀರ್ಘಕಾಲದ ಸೇವೆಯನ್ನು ಪರಿಗಣಿಸಿ, ಪಕ್ಷವು ನನಗೆ ಜನಪ್ರತಿನಿಧಿಯಾಗಿ



ಉದಯವಾಹಿನಿ ಚಿತ್ರ

ಸೇವೆ ಸಲ್ಲಿಸಲು ಒಂದು ಅವಕಾಶವನ್ನು ಖಂಡಿತವಾಗಿ ನೀಡುತ್ತದೆ ಎಂಬ ವಿಶ್ವಾಸ ನನ್ನಲ್ಲಿತ್ತು. ಆದರೆ, ಕಳೆದ ಹಲವು ವರ್ಷಗಳಿಂದ ನಾನು ಸಲ್ಲಿಸಿರುವ ಪ್ರಾಮಾಣಿಕ ಸೇವೆಯನ್ನು ಪರಿಗಣಿಸದೇ ಇರುವುದು ನನಗೆ ಮಾತ್ರವಲ್ಲದೆ, ರಾಜ್ಯದ ಎಲ್ಲಾ ನಿಷ್ಠಾವಂತ ಕಾರ್ಯಕರ್ತರಿಗೆ ಅನ್ಯಾಯ ಹಾಗೂ ನೋವುಂಟು ಮಾಡಿದ ಸಂಗತಿಯಾಗಿದೆ. ಆದ್ದರಿಂದ, ನಾನು ಪ್ರಸ್ತುತ ವಹಿಸಿರುವ ರಾಜ್ಯ ಬಿಜೆಪಿ ಶಿಸ್ತು ಸಮಿತಿಯ ಅಧ್ಯಕ್ಷ ಸ್ಥಾನಕ್ಕೆ ನನ್ನ ರಾಜಜಿನಾಮೆಯನ್ನು ಸಲ್ಲಿಸುತ್ತಿದ್ದೇನೆ. ದಯವಿಟ್ಟು ನನ್ನ ರಾಜೀನಾಮೆಯನ್ನು ಅಂಗೀಕರಿಸಲು ವಿನಂತಿಸುತ್ತೇನೆ. ಇಲ್ಲಿವರೆಗೆ ತಾವು ನೀಡಿದ ಸಹಕಾರಕ್ಕೆ ಹೃತ್ಪೂರ್ವಕ ಧನ್ಯವಾದಗಳು.

ವಿಧಾನ ಪರಿಷತ್ ಪಶ್ಚಿಮ ಪದವೀಧರ ಕ್ಷೇತ್ರ ಟಿಕೆಟ್ ಯಾರಿಗೆ? ಬಿಜೆಪಿ ಮುಂಬರುವ ವಿಧಾನ ಪರಿಷತ್ ಪಶ್ಚಿಮ ಪದವೀಧರ ಕ್ಷೇತ್ರಕ್ಕೆ ನಾಯಕ ಎಸ್.ವಿ. ಸಂಕನೂರು ಅವರಿಗೆ ಟಿಕೆಟ್ ನೀಡಿತ್ತು. ಉಳಿದಂತೆ ಈಶಾನ್ಯ ಶಿಕ್ಷಕರ ಕ್ಷೇತ್ರದ ಟಿಕೆಟ್ ಶಶೀಲ್ ಜಿ. ನಮೋಶಿ, ಆಗ್ನೇಯ ಪದವೀಧರರ ಕ್ಷೇತ್ರದ ಟಿಕೆಟ್ ಕೆ.ಎಂ. ಸುರೇಶ್ ಪಾಲಾಗಿದೆ.

## ಅಂಗನವಾಡಿ ಆಹಾರ ಪೂರೈಕೆಯಲ್ಲಿ ಔರಾದ್ ಶಾಸಕರಿಂದ ಭ್ರಷ್ಟಾಚಾರ ಆರೋಪ: ತನಿಖೆಗೆ ಲೋಕಾಯುಕ್ತಕ್ಕೆ ಹೈಕೋರ್ಟ್ ಆದೇಶ

• ಉದಯವಾಹಿನಿ ಬೀದರ್

ಅಂಗನವಾಡಿಗಳಿಗೆ ಆಹಾರ ಪೂರೈಸುವಲ್ಲಿ ಔರಾದ್ ಶಾಸಕ ಪ್ರಭು ಚವಾಣ್ ವಿರುದ್ಧದ ಭ್ರಷ್ಟಾಚಾರ ಆರೋಪ ಪ್ರಕರಣದ ಕುರಿತು ತನಿಖೆ ನಡೆಸುವಂತೆ ಕಲಬುರಗಿ ಹೈಕೋರ್ಟ್ ಪೀಠವು ಲೋಕಾಯುಕ್ತಕ್ಕೆ ಆದೇಶ ನೀಡಿದೆ.

ಔರಾದ್ ಮುಖಂಡ ದೀಪಕ್ ಪಾಟೀಲ ಚಾಂದೋರಿ ಅವರು ಸಲ್ಲಿಸಿದ ರಿಟ್ ಅರ್ಜಿ ಸಂಖ್ಯೆ 200464-2026ರ ವಿಚಾರಣೆ ನಡೆಸಿದ ನ್ಯಾಯಾಧೀಶ ಶ ಎಸ್.ವಿಶ್ವಜೀತ್ ಶೆಟ್ಟಿ ಅವರು ಮಾ.5 ರಂದು ಈ ಕುರಿತು ಆದೇಶ ಹೊರಡಿಸಿದ್ದಾರೆ.

ಭ್ರಷ್ಟಾಚಾರದ ದೂರಿನ ಸಂಬಂಧ ಒಂದು ತಿಂಗಳೊಳಗೆ ಕಾನೂನು ರೀತ್ಯ ಅಗತ್ಯ ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿದ್ದಾರೆ. ದೀಪಕ್ ಪಾಟೀಲ ಚಾಂದೋರಿ ಅವರ ಪರವಾಗಿ ವಕೀಲ ಸಿದ್ರಾಮೇಶ್ವರ ಪಾಟೀಲ ವಾದ ಮಂಡಿಸಿದ್ದರು.

ಔರಾದ್ ಕ್ಷೇತ್ರದ ಅಂಗನವಾಡಿಗಳಿಗೆ ಪೌಷ್ಟಿಕ ಆಹಾರ ಪೂರೈಸುವ ಟೆಂಡರ್ ಕೊಡಿಸಿದ್ದಕ್ಕೆ ಪ್ರತಿಯಾಗಿ ಔರಾದ್ ಶಾಸಕ ಸುಂದ್ರಮ್ಮ ಟ್ರೇಡಿಂಗ್ ಕಂಪನಿಯಿಂದ ರೂ.1 ಕೋಟಿ



ಲಂಚ ಪಡೆದಿದ್ದಾರೆ. ಹೀಗಾಗಿ ಪ್ರಕರಣದ ತನಿಖೆ ನಡೆಸಿ ಅದರಲ್ಲಿ ಶಾಮೀಲಾದ ಅಧಿಕಾರಿಗಳು, ಸುಂದ್ರಮ್ಮ ಟ್ರೇಡಿಂಗ್ ಕಂಪನಿ ಹಾಗೂ ಶಾಸಕರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ದೀಪಕ್ ಪಾಟೀಲ ಚಾಂದೋರಿ ಅವರು 10-11-2025 ರಂದು ಲೋಕಾಯುಕ್ತ ಎ.ಡಿ.ಜಿ.ಪಿ. ಹಾಗೂ ಬೀದರ್ ಡಿ.ವೈ.ಎಸ್.ಪಿ.ಗೆ ದೂರು ಸಲ್ಲಿಸಿದ್ದರು

ದೂರಿನ ಕುರಿತು ಲೋಕಾಯುಕ್ತ ಅಧಿಕಾರಿಗಳು ಯಾವುದೇ ಕ್ರಮ ಕೈಗೊಳ್ಳದ ಕಾರಣ ದೀಪಕ್ ಪಾಟೀಲ ಚಾಂದೋರಿ ಅವರು 2026 ಫೆಬ್ರುವರಿ 2 ರಂದು ಕಲಬುರಗಿ ಹೈಕೋರ್ಟ್ ಪೀಠದ ಮೊರೆ ಹೋಗಿದರು.

**ಆದೇಶದಿಂದ ಸಮಾಧಾನ, ಸತ್ಯಕ್ಕೆ ಜಯ ಸಿಗಲಿದೆ:** ಕಲಬುರಗಿ ಹೈಕೋರ್ಟ್ ಪೀಠದ ಆದೇಶದಿಂದ ಸಮಾಧಾನವಾಗಿದೆ. ನ್ಯಾಯಾಂಗ ವ್ಯವಸ್ಥೆಯ ಮೇಲೆ ಗೌರವ ಮತ್ತಷ್ಟು ಹೆಚ್ಚಾಗಿದೆ. ಪ್ರಕರಣದಲ್ಲಿ ಸತ್ಯಕ್ಕೆ ಜಯ ಸಿಗಲಿದೆ ಎಂದು ದೀಪಕ್ ಪಾಟೀಲ ಚಾಂದೋರಿ ಪ್ರತಿಕ್ರಿಯಿಸಿದ್ದಾರೆ. ಶಾಸಕರು ಅಂಗನವಾಡಿ ಆಹಾರ ಪೂರೈಕೆಯಲ್ಲಿ ಲಂಚ ಪಡೆದಿರುವ ಬಗ್ಗೆ ತಾವು ಮಾಡಿರುವ ಆರೋಪನೂರಕ್ಕೆ ನೂರರಷ್ಟು ಸತ್ಯವಾಗಿದೆ. ಸುಂದ್ರಮ್ಮ ಟ್ರೇಡಿಂಗ್ ಕಂಪನಿ ತನ್ನ ಖಾತೆಯಿಂದ ಶಾಸಕರ ಮಾಲೀಕತ್ವದ ಮುಂಬೈನ ಪ್ರಭು ಎಂಟರ್ ಪ್ರೈಸೆಸ್ ಖಾತೆಗೆ ಒಂದು ತಿಂಗಳಲ್ಲಿ ಹಂತ ಹಂತವಾಗಿ 1 ಕೋಟಿ ರುಹಣ ಜಮಾ ಮಾಡಿದೆ. ಖಾತೆ ಪರಿಶೀಲಿಸಿದರೆ ಭ್ರಷ್ಟಾಚಾರ ಬಯಲಾಗಲಿದೆ ಎಂದು ಹೇಳಿದ್ದಾರೆ.

> ಭ್ರಷ್ಟಾಚಾರದಿಂದಾಗಿ ಔರಾದ್ ಕ್ಷೇತ್ರದ ಅಂಗನವಾಡಿ ಮಕ್ಕಳಿಗೆ ಕಳಪೆ ಮಟ್ಟದ ಆಹಾರ ದೊರೆಯುತ್ತಿದೆ, ಮುಗ್ಧ ಮಕ್ಕಳ ಆಹಾರದಲ್ಲೂ ಭ್ರಷ್ಟಾಚಾರ ಎಸಗಿರುವವರಿಗೆ ಬಡ ಮತ್ತು ಕೂಲಿಕಾರರ ಮಕ್ಕಳ ಶಾಪ ತಟ್ಟಲಿದೆ.
>
> -ದೀಪಕ್ ಪಾಟೀಲ್ ಚಾಂದೋರಿ ಔರಾದ್ ಮುಖಂಡ

# ನೇತ್ರಾವತಿ ಒಡಲು ಕಲುಷಿತ: ಮೌನಕ್ಕೆ ಜಾರಿದ ಆಡಳಿತ

### ಕೊಳಚೆ ನೀರು ಸೇರಿ ಮಲಿನಗೊಳ್ಳುತ್ತಿದೆ ನೇತ್ರಾವತಿ, ಮೋರಿ, ರಾಜಾಕಾಲುವೆ ಮೂಲಕ ನದಿಗೆ ಕೊಳಚೆ ನೀರು

• ಉದಯವಾಹಿನಿ ಬಂಟ್ವಾಳ

2018 ರ ವಿಧಾನಸಭಾ ಚುನಾವಣೆ ಸಂದರ್ಭ, ಮಂಗಳೂರಿನ ಜನರಷ್ಟೇ ಅಲ್ಲ, ಬಂಟ್ವಾಳದವರೂ ಕುಡಿಯುವ ಜೀವಜಲ ನೇತ್ರಾವತಿ ನದಿಗೆ ಬಂಟ್ವಾಳ ಸುತ್ತಮುತ್ತ ಕೊಳಚೆ ನೀರು ಸೇರುತ್ತಿರುವುದು ಪ್ರಚಾರದ ವಸ್ತುವಾಗಿತ್ತು. ಈ ಕುರಿತು ಸಾಕಷ್ಟು ಟೀಕೆ, ಪ್ರತಿಟೀಕೆಗಳು, ಚರ್ಚೆಗಳು ನಡೆದವು. ಈಗ 2026, ಸಮಸ್ಯೆ ಇನ್ನೂ ಬಗೆಹರಿದಿಲ್ಲ, ಒಮ್ಮೆ ಎಚ್ಚೆತ್ತಂತೆ ಮಾಡಿದ ಆಡಳಿತ ಮತ್ತೆ ಮೌನ ವಹಿಸಿತು. 2025ರ ಮಾರ್ಚ್‌ನಲ್ಲಿ ಮತ್ತೆ ಈ ಕುರಿತು ವಿಸ್ತಾರವಾದ ವರದಿ ಪ್ರಕಟಿಸಿತ್ತು.

ಈ ವರದಿಯನ್ನು ಗಮನಿಸಿದ ಮಂಗಳೂರಿನ ಜಾಗೃತ ಹಿರಿಯ ನಾಗರಿಕರು, ಸ್ಥಳ ಸಮೀಕ್ಷೆ ಮಾಡಿ ಮಂಗಳೂರಿನಲ್ಲಿ ಸಂಬಂಧಪಟ್ಟ ಉನ್ನತಾಧಿಕಾರಿಗಳಿಗೆ ಮನವಿ ಸಲ್ಲಿಸಿದ್ದರು. ಈ ವಿಷಯದಲ್ಲಿ ಆಡಳಿತ ಮೌನಕ್ಕೆ ಶರಣಾಗುವುದು ಜನರ ಆರೋಗ್ಯ ದೃಷ್ಟಿಯಿಂದ ಹಿತಕರವಲ್ಲವೆಂದು ಸಲಹೆ ನೀಡಿದ್ದ ಮನವಿ ಅಲ್ಲೇ ಬಾಕಿಯಾಗಿದೆ. ಪರಿಸ್ಥಿತಿ ಇಂದಿಗೂ ಹಾಗೇ ಇದೆ.

**ನೀರೆತ್ತುವ ಜಾಗದಲ್ಲೇ ಕೊಳಚೆ:** ಬಂಟ್ವಾಳ ಬಸ್ತಿಪಡ್ಡು ಬಳಿಯೂ ಕಾಲುವೆಯಿಂದ ಬಿರುಬೇಸಿಗೆಯಲ್ಲೂ ಕೊಳಚೆ ನದಿಗೆ ಪ್ರವೇಶಿಸುತ್ತಿದ್ದರೆ, ನದಿ ದಡದ ಉದ್ದಕ್ಕೂ ಪೈಪ್ ನದಿಗೆ ಇಟ್ಟು, ತ್ಯಾಜ್ಯಗಳೆಲ್ಲಾ ಕುಡಿಯುವ ನೀರು ಸೇರುವಂಥ ಸನ್ನಿವೇಶ ಸೃಷ್ಟಿಯಾಗಿದೆ.



ಉದಯವಾಹಿನಿ ಚಿತ್ರ

**ಮೋರಿ, ರಾಜಾಕಾಲುವೆ ಮೂಲಕ ನದಿಗೆ**

ಬಡ್ಡಕಟ್ಟೆ, ಕೆಳಗಿನ ಪೇಟೆ, ಕಂಚಿಗಾರ ಪೇಟೆ, ಗೂಡಿನಬಳಿ, ಕೈಕುಂಜೆ, ಪಾಣೆ ಮಂಗಳೂರು, ಪರ್ಲಿಯಾ, ತಲಪಾಡಿ ವರೆಗೆ ಹಲವು ಕಡೆಗಳಲ್ಲಿ ಮೋರಿ, ರಾಜಕಾಲುವೆಗಳ ಮೂಲಕ ಹರಿದು ಹೋಗುವ ಕೊಳಚೆ ನೀರು ನೇರವಾಗಿ ನದಿ ಸೇರುತ್ತಿದೆ. ಮನೆಗಳು, ವಸತಿ ಸಮುಚ್ಚಯಗಳ ಶೌಚಾಲಯಗಳ ನೀರು, ಹೋಟೆಲ್ ತ್ಯಾಜ್ಯಗಳು, ಕೋಳಿ ಸಹಿತ ಮಾಂಸದ ಅಂಗಡಿಗಳ ನೀರು ಸೇರಿದಂತೆ ಎಲ್ಲಾ ರೀತಿಯ ಕೊಳಚೆ ನೀರು ಕೂಡ ನೇರವಾಗಿ ನದಿ ಸೇರುತ್ತಿದೆ ಎಂದು ಕಳೆದ ಬಾರಿಯೇ ಪುರಸಭೆ ಹಿರಿಯ ಸದಸ್ಯರಾಗಿದ್ದ ಎ. ಗೋವಿಂದ ಪ್ರಭು ಆಪಾದಿಸಿದ್ದರು.

**ಒಳಚರಂಡಿ ವ್ಯವಸ್ಥೆಯೇ ಇಲ್ಲ:** ಬಂಟ್ವಾಳ ಪುರಸಭಾ ವ್ಯಾಪ್ತಿಯಲ್ಲಿ ಸರಿಯಾದ ಒಳಚರಂಡಿ ವ್ಯವಸ್ಥೆ ಇಲ್ಲದೆ ಇರುವುದು ಈ ಸಮಸ್ಯೆಗೆ ಮುಖ್ಯ ಕಾರಣವಾಗಿದೆ. ದಿನನಿತ್ಯ ಸುಮಾರು 10 ಸಾವಿರಕ್ಕೂ ಅಧಿಕ ಮನೆಗಳ ಕೊಳಚೆ ನೀರು ನದಿಯ ಒಡಲು ಸೇರುತ್ತಿದೆ. ಕೊಳಚೆ ನೀರು ಸಂಸ್ಕರಣಾ ಘಟಕ (ಎಸ್‌ಟಿಪಿ)ಗಳ ನಿರ್ಮಾಣಕ್ಕೆ ಜಾಗದ ವಿವಾದ ಅಂತಿಮಗೊಳ್ಳದೇ ಇರುವುದರಿಂದ ಒಳಚರಂಡಿ ವ್ಯವಸ್ಥೆ ಅನುಷ್ಠಾನ ಸಾಧ್ಯವಾಗಿಲ್ಲ. ಹಲವು ವರ್ಷಗಳ ಹಿಂದೆ ಪೈಪ್‌ಲೈನ್ ಅಳವಡಿಸಿ ಅಲ್ಲಲ್ಲಿ ಮ್ಯಾನ್ ಹೋಲ್‌ಗಳನ್ನು ಮಾಡಿದ್ದರೂ ವ್ಯರ್ಥವಾಗಿದೆ. ವಸತಿ ಸಮುಚ್ಚಯಗಳು ತಮ್ಮಲ್ಲೇ ಎಸ್‌ಟಿಪಿಗಳನ್ನು ಮಾಡಿ ಕೊಳಚೆಯನ್ನು ಶುದ್ಧೀಕರಿಸಿಯೇ ಹೊರಗೆ ಬಿಡಬೇಕು ಎಂಬ ನಿಯಮವಿದ್ದರೂ, ಬಂಟ್ವಾಳ ನಗರ ವ್ಯಾಪ್ತಿಯ ಬಹುತೇಕ ವಸತಿ ಸಮುಚ್ಚಯಗಳು ಎಷ್ಟು ಪಾಲಿಸುತ್ತಿದ್ದಾರೆ ಎಂಬ ಕುರಿತು ಪುರಸಭೆ ಸರ್ವೆ ಮಾಡಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

**ಪರಿಹಾರವೇನು:** ಬಂಟ್ವಾಳ ಮತ್ತು ಆಸುಪಾಸಿನ ಪ್ರದೇಶಗಳನ್ನು ಸಂಪೂರ್ಣವಾಗಿ ಒಳಚರಂಡಿ ವ್ಯವಸ್ಥೆಗೆ ಒಳಪಡಿಸುವುದು ಅಥವಾ ದೊಡ್ಡ ದೊಡ್ಡ ಇಂಗು ಗುಂಡಿಗಳನ್ನು ಮಾಡಿ ಕೊಳಚೆ ನೀರು ಮತ್ತು ತ್ಯಾಜ್ಯಗಳನ್ನು ಅದಕ್ಕೆ ಬಿಡುವುದು ಜೊತೆಗೆ ನೇತ್ರಾವತಿ ನದಿ ನೀರು ಕಲುಷಿತವಾಗದಂತೆ ನೋಡುವುದು ಸದ್ಯದ ಮಟ್ಟಿಗೆ ಇರುವ ಪರಿಹಾರ.

> ಪ್ಲಾಸ್ಟಿಕ್ ಮತ್ತು ಕೊಳಚೆಯನ್ನು ನದಿ ನೀರಿಗೆ ಬಿಡುವುದು ಸರಿಯಲ್ಲ. ಆಡಳಿತ ಇದರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ತ್ಯಾಜ್ಯ ಎಸೆಯುವವರ ವಿರುದ್ಧ ಶಿಕ್ಷೆ ಆಗುತ್ತದೇ ಎಂಬುದು ಜಾರಿಯಾಗಬೇಕು.
>
> - ಶೀನ ಶೆಟ್ಟಿ, ಸಂಸ್ಥಾಪಕರು, ಜನಶಿಕ್ಷಣ ಟ್ರಸ್ಟ್

## ಗ್ಯಾಸ್ ಬುಕ್ಕಿಂಗ್ ನಂಬರ್ ಸ್ವಿಚ್ ಆಫ್ ಗ್ರಾಹಕರಲ್ಲಿ ಹೆಚ್ಚಿದ ಆತಂಕ!

• ಉದಯವಾಹಿನಿ ಹಾಸನ

ಅಮೆರಿಕ-ಇಸ್ರೇಲ್ ಹಾಗೂ ಇರಾನ್ ನಡುವಿನ ಯುದ್ಧದ ಹಿನ್ನೆಲೆಯಲ್ಲಿ ಜಾಗತಿಕವಾಗಿ ತೈಲ ಸೇರಿದಂತೆ ಅಡುಗೆ ಅನಿಲದಲ್ಲಿ ಕೊರತೆ ಎದುರಾಗುತ್ತಿದೆ. ಇದರ ಎಫೆಕ್ಟ್ ಸದ್ಯ ರಾಜ್ಯಕ್ಕೂ ತಟ್ಟಿದೆ. ಎಲ್‌ಪಿಜಿ ಬುಕಿಂಗ್ ಸ್ಥಗಿತಗೊಂಡಿದ್ದು, ಆನ್‌ಲೈನ್ ಬುಕಿಂಗ್ ಸಮಸ್ಯೆಯಾಗಿದೆ. ಗ್ಯಾಸ್ ಬುಕಿಂಗ್‌ಗೆ ಯತ್ನಿಸಿದರೆ ಸ್ವಿಚ್ ಆಫ್ ಸಂದೇಶ ಬರುತ್ತಿದೆ ಎನ್ನುತ್ತಿದ್ದಾರೆ ಗ್ರಾಹಕರು. ಮಧ್ಯಪ್ರಾಚ್ಯ ಸಂಘರ್ಷ ಹಾಗೂ ಕೊಲ್ಲಿ ರಾಷ್ಟ್ರದಲ್ಲಿ ತೈಲ ಘಟಕಗಳ ಮೇಲೆ ದಾಳಿ ಪರಿಣಾಮ ಉತ್ಪಾದನೆ ಸ್ಥಗಿತಗೊಂಡಿರುವ ಜತೆಗೆ, ಕಚ್ಚಾತೈಲ ಹಾಗೂ ಎಲ್‌ಪಿಜಿ ತುಂಬಿದ ಹಡಗುಗಳ ಸಂಚಾರ ಸ್ಥಗಿತಗೊಂಡಿರುವ ಕಾರಣ ಭಾರತದ ಮೇಲೂ ಪರಿಣಾಮ ಬೀರಿದೆ. ಅದರಲ್ಲೂ ಹಾಸನದಲ್ಲಿ ಇದರ ಎಫೆಕ್ಟ್ ಹೆಚ್ಚಾಗು ಕಾಣಸಿಗುತ್ತಿದ್ದು, ಜಿಲ್ಲೆಯಲ್ಲಿ 5.44 ಲಕ್ಷ ಗೃಹಬಳಕೆ ಹಾಗೂ 5.526 ವಾಣಿಜ್ಯ ಬಳಿಕೆ ಎಲ್‌ಪಿಜಿ ಗ್ರಾಹಕರಿದ್ದು, ಗೃಹಬಳಕೆ ಎಲ್‌ಪಿಜಿ ಸದ್ಯಕ್ಕೆ ಸಮಸ್ಯೆ ಇಲ್ಲ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಹೇಳುತ್ತಿದ್ದರೆ.

ಹೀಗೆ ಎಲ್ ಪಿಜಿ ಬುಕಿಂಗ್‌ನಲ್ಲಿ ಸಮಸ್ಯೆ ಇಲ್ಲ ಎಂದು ಹೇಳಿದಾಗಲೂ ಸಹ ಬುಕಿಂಗ್ ಪಡೆಯುತ್ತಿಲ್ಲ. ಗ್ಯಾಸ್ ಬುಕ್ ಮಾಡಲು ಆನ್ ಲೈನ್ ಬುಕಿಂಗ್ ನಂಬರ್‌ಗೆ ಕರೆ ಮಾಡಿದರೆ, ಸ್ವೀಚ್ ಆಫ್ ಆಗಿದೆ ಎಂದು ಕೇಳಿ ಬರುತ್ತಿದ್ದು, ಇತ್ತ ಈಗಾಗಲೇ ಬುಕಿಂಗ್ ಮಾಡಿರುವ ಸಿಲಿಂಡರ್ ಸಹ ಒಂದು ವಾರವಾದರೂ ಇನ್ನೂ ಕೈ ಸೇರಿಲ್ಲ ಎಂದು ಗ್ರಾಹರು ಆತಂಕ ವ್ಯಕ್ತ ಪಡಿಸುತ್ತಿದ್ದಾರೆ.

21-25 ದಿನ ಕಡ್ಡಾಯ ಈ ಸಮಸ್ಯೆಗಳಿಗೆ ಉತ್ತರಿಸಿ ಒಮ್ಮೆ ಸಿಲಿಂಡರ್ ಪಡೆದ ಬಳಿಕ 21-25 ದಿನದ ಬಳಿಕವೇ ಬುಕಿಂಗ್ ಪಡೆಯುತ್ತದೆ. ಅದಕ್ಕೆ ಮುನ್ನ ಬುಕಿಂಗ್ ಮಾಡಲು ಆನ್‌ಲೈನ್‌ನಲ್ಲಿ ಸಾಧ್ಯವಿಲ್ಲ. ಆದರೆ ಗ್ರಾಹಕರು ಮುನ್ನೆಚ್ಚರಿಕೆ ಕ್ರಮವಾಗಿ ಬುಕಿಂಗ್‌ಗೆ ಮುಗಿ ಬೀಳುತ್ತಿದ್ದಾರೆ. ಆನ್‌ಲೈನ್ ಬುಕಿಂಗ್ ಸಾಧ್ಯವಾಗದೆ ಏಜೆನ್ಸಿಗಳಿಗೆ ಎಡತಾಕುತ್ತಿದ್ದಾರೆ.

ಎಲ್‌ಪಿಜಿ ಕಂಪನಿಗಳ ಮುಖ್ಯಸ್ಥರೊಂದಿಗೆ ಚರ್ಚಿಸಿದ್ದು, ಗೃಹಬಳಕೆ ಸಿಲಿಂಡರ್ ಸಮಸ್ಯೆ ಆಗದಂತೆ ಮುನ್ನೆಚ್ಚರಿಕೆ ವಹಿಸಲಾಗುವುದು, ಎಂದು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಉಪ ನಿರ್ದೇಶಕ ಅರುಣ್‌ಕುಮಾರ್ ಸಂಗಾವಿ ತಿಳಿಸಿದ್ದಾರೆ. ಇನ್ನು, ಯುದ್ಧದಿಂದಾಗಿ ವಾಣಿಜ್ಯ ಬಳಕೆ ಎಲ್‌ಪಿಜಿ ಸಿಲಿಂಡರ್ ಪೂರೈಕೆಯಲ್ಲಿ ಎಲ್ಲೆಡೆಯಂತೆ ಜಿಲ್ಲೆಯಲ್ಲೂ ವ್ಯತ್ಯಯವಾಗಿದೆ. ಇದು ಕೇವಲ ಗೃಹಬಳಕೆ ಗ್ರಾಹಕರು ಮಾತ್ರವಲ್ಲದೆ ಹೋಟೆಲ್, ಪಿಜಿ, ಫುಡ್‌ಕೋರ್ಟ್ ಮಾಲೀಕರನ್ನು ಚಿಂತೆಗೀಡಾಗುವಂತೆ ಮಾಡಿದ್ದು, ಕೇಂದ್ರ, ಸರಕಾರ ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 01:30 ರಿಂದ 03:00 |
| ಗುಳಿಕ ಕಾಲ | ಬೆಳಿಗ್ಗೆ | 09:00 ರಿಂದ 10:30 |
| ಯಮಗಂಡ ಕಾಲ | ಬೆಳಿಗ್ಗೆ | 06:00 ರಿಂದ 07:30 |

**ಮೇಷ** ಆಶಾವಾದಿಗಳಾಗಿರಿ ಮತ್ತು ಜೀವನದ ಉಜ್ವಲ ಬದಿಯನ್ನು ನೋಡಿ. ನಿಮ್ಮ ಆತ್ಮವಿಶ್ವಾಸ ಭರಿತ ನಿರೀಕ್ಷೆಗಳು ನಿಮ್ಮ ಭರವಸೆಗಳು, ಆಸೆಗಳನ್ನು ಸಾಕ್ಷಾತ್ಕಾರಗೊಳಿಸಲು ಸಹಾಯ ಮಾಡುತ್ತವೆ. ಹಣಕ್ಕೆ ಸಂಬಂಧಿಸಿದ ಯಾವುದೇ ಸಮಸ್ಯೆಯನ್ನು ಇಂದು ಪರಿಹರಿಸಬಹುದು, ನೀವು ಹಣದಿಂದ ಲಾಭ ಪಡೆಯಬಹುದು.

**ವೃಷಭ** ಒಬ್ಬ ಆಧ್ಯಾತ್ಮಿಕ ವ್ಯಕ್ತಿ ಆಶೀರ್ವಾದ ಮಾಡುತ್ತಾರೆ, ಮನಸ್ಸಿನ ಶಾಂತಿ ತರುತ್ತಾರೆ. ಈ ರಾಶಿಚಕ್ರದ ಕೆಲವು ಜನರಿಗೆ ಇಂದು ಮಕ್ಕಳ ಬದಿಯಿಂದ ಆರ್ಥಿಕ ಲಾಭವನ್ನು ಪಡೆಯುವ ಭರವಸೆ ಇದ. ಇಂದು ನೀವು ನಿಮ್ಮ ಮಕ್ಕಳ ಮೇಲೆ ಹೆಮ್ಮೆಯನ್ನು ಅನುಭವಿಸುವಿರಿ. ನಿಮ್ಮ ಗೆಳತಿಯ ಜೊತೆ ಅಸಭ್ಯವಾಗಿ ನಡೆದುಕೊಳ್ಳಬೇಡಿ.

**ಮಿಥುನ** ನೀವು ದೈಹಿಕ ಅನಾರೋಗ್ಯದಿಂದ ಚೇತರಿಸಿಕೊಳ್ಳುವ ಸಾಧ್ಯತೆಗಳು ಹೆಚ್ಚಿದ್ದು ಇದು ನಿಮ್ಮನ್ನು ಕ್ರೀಡಾ ಸ್ಪರ್ಧೆಗಳಲ್ಲಿ ಭಾಗವಹಿಸಲು ಸಕ್ರಿಯಗೊಳಿಸುತ್ತದೆ. ನಿಮ್ಮ ಆರ್ಥಿಕ ಸ್ಥಿತಿ ಸುಧಾರಿಸಿದರೂ ಹಣದ ಹೊರಹರಿವು ನಿಮ್ಮ ಯೋಜನೆಗಳನ್ನು ಕಾರ್ಯರೂಪಕ್ಕೆ ತರುವಲ್ಲಿ ತೊಂದರೆಯುಂಟುಮಾಡುತ್ತದೆ.

**ಕರ್ಕಾಟಕ** ಆಹಾರವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ, ಫಿಟ್‌ಆಗಿ ಉಳಿಯಲು ವ್ಯಾಯಾಮ ಮಾಡಿ. ಬಹಳ ಪ್ರಯೋಜನಕಾರಿ ದಿನವಲ್ಲ- ಆದ್ದರಿಂದ ನಿಮ್ಮ ಹಣದ ಪರಿಸ್ಥಿತಿಯನ್ನು ಪರಿಶೀಲಿಸಿ, ನಿಮ್ಮ ವೆಚ್ಚಗಳ ಮೇಲೆ ಮಿತಿ ಹೇರಿ. ಮನೆಯ ವಾತಾವರಣವನ್ನು ಬದಲಾಯಿಸುವ ಮೊದಲು ಅದಕ್ಕೆ ಎಲ್ಲರ ಅನುಮೋದನೆಯಿದೆಯೆಂದು ಖಾತ್ರಿಪಡಿಸಿಕೊಳ್ಳಿ.

**ಸಿಂಹ** ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಇಂದು ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿರಿಸಲು ನಿಮ್ಮ ಜೀವನಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ. ಸಂಜೆಯ ಸಮಯದಲ್ಲಿ ಯಾವುದೇ ಕಾರಣದಿಂದ ನಿಮ್ಮ ಹಣ ಖರ್ಚಾಗಬಹುದು.

**ಕನ್ಯಾ** ನೀವು ವಿಶ್ರಾಂತಿ ಪಡೆಯಲು ಸಾಧ್ಯವಾಗುವ ಒಂದು ದಿನ. ನಿಮ್ಮ ಸ್ನಾಯುಗಳಿಗೆ ವಿಶ್ರಾಂತಿ ನೀಡಲು ತೈಲದಿಂದ ನಿಮ್ಮ ದೇಹಕ್ಕೆ ಮಸಾಜ್ ಮಾಡಿ ಎಲ್ಲಾದರೂ ಹೂಡಿಕೆ ಮಾಡಿರುವ ಜನರು, ಇಂದಿನ ದಿನ ಆರ್ಥಿಕ ನಷ್ಟ ಸಂಭವಿಸಬಹುದು ಕುಟುಂಬದ ಸದಸ್ಯರೊಂದಿಗೆ ಕೆಲವು ವಿಶ್ರಾಂತಿಯ ಕ್ಷಣಗಳನ್ನು ಕಳೆಯಿರಿ.

**ತುಲಾ** ಪ್ರೀತಿ, ಭರವಸೆ, ನಂಬಿಕೆ, ಸಹಾನುಭೂತಿ, ಆಶಾವಾದ ಮತ್ತು ನಿಷ್ಠೆಗಳಂಥ ಧನಾತ್ಮಕ ಭಾವನೆಗಳನ್ನು ಗ್ರಹಿಸಲು ಮನಸ್ಸನ್ನು ಪ್ರೋತ್ಸಾಹಿಸಿ. ಒಮ್ಮೆ ಈ ಭಾವನೆಗಳು ಸಂಪೂರ್ಣವಾಗಿ ಹತೋಟಿಗೆ ತೆಗೆದುಕೊಂಡ ನಂತರ ಮನಸ್ಸು ತಾನಾಗಿಯೇ ಪ್ರತಿ ಪರಿಸ್ಥಿತಿಗೂ ಧನಾತ್ಮಕವಾಗಿ ಪ್ರತಿಕ್ರಿಯಿಸುತ್ತದೆ.

**ವೃಶ್ಚಿಕ** ನಿಮ್ಮ ಬಗ್ಗೆ ನಿಮಗೇ ಉತ್ತಮ ಅಭಿಪ್ರಾಯ ಬರಲು ಕೆಲಸ ಮಾಡಲು ಅದ್ಭುತ ದಿನ. ಇಂದು ಯಾವುದೇ ವಿರುದ್ಧ ಲಿಂಗದ ಸಹಾಯದಿಂದ ನೀವು ವ್ಯಾಪರ, ಉದ್ಯೋಗದಲ್ಲಿ ಆರ್ಥಿಕ ಲಾಭವನ್ನು ಪಡೆಯುವ ಸಾಧ್ಯತೆ ಇದೆ. ಮನೆಯಲ್ಲಿ ಸಮಸ್ಯೆಗಳು ಉದ್ಭವವಾಗುವಂತೆ ತೋರುತ್ತಿರುವುದರಿಂದ ಮಾತುಗಳ ಬಗ್ಗೆ ಎಚ್ಚರ ವಹಿಸಿ.

**ಧನಸ್ಸು** ನಿಮ್ಮ ಚಿಂತನೆ ಮತ್ತು ಶಕ್ತಿಯನ್ನು ನೀವು ವಾಸ್ತವವಾಗಿ ಏನನ್ನು ನೋಡಬಯಸುತ್ತೀರೋ ಅದನ್ನು ಸಾಧಿಸುವಲ್ಲಿ ನಿರ್ದೇಶಿಸಿ. ಇದುವರೆಗೆ ನಿಮ್ಮ ಸಮಸ್ಯೆಯಂದರೆ ನೀವು ಪ್ರಯತ್ನಿಸದೇ ಕೇವಲ ಆಸೆಪಡುತ್ತೀರಿ. ಇಂದು ನೀವು ಯಾವುದೇ ಅಜ್ಞಾತ ಮೂಲಗಳಿಂದ ಹಣವನ್ನು ಪಡೆಯಬಹುದು,

**ಮಕರ** ದ್ವೇಷ ಪ್ರೀತಿಗಿಂತ ಹೆಚ್ಚು ಶಕ್ತಿಶಾಲಿಯಾಗಿದ್ದು ನಿಮ್ಮ ದೇಹದ ಮೇಲೆ ಪ್ರಾಣಾಂತಿಕ ಪರಿಣಾಮ ಬೀರುವದರಿಂದ ನಿಮ್ಮ ದ್ವೇಷವನ್ನು ಸಾಯಿಸಲು ಒಂದು ಸಮರಸದ ಸ್ವಭಾವವನ್ನು ರೂಪಿಸಿಕೊಳ್ಳಿ. ದುಷ್ಟತೆಯು ಒಳಿತಿಗಿಂತ ಬೇಗ ವಿಜಯ ಸಾಧಿಸುತ್ತದೆಂದು ನೆನಪಿಡಿ. ದೀರ್ಘಕಾಲದ ದೃಷ್ಟಿಕೋನದಿಂದ ಹೂಡಿಕೆ ಮಾಡಬೇಕು.

**ಕುಂಭ** ನಿಮ್ಮ ಕಚೇರಿಯನ್ನು ಬೇಗನೆ ಬಿಡಲು, ನೀವು ನಿಜವಾಗಿಯೂ ಆನಂದಿಸುವದನ್ನು ಮಾಡಲು ಪ್ರಯತ್ನಿಸಿ. ನಿಮ್ಮ ಮಕ್ಕಳ ಕಾರಣದಿಂದ ಆರ್ಥಿಕ ಲಬಹವನ್ನು ಪಡೆಯುವ ಸಾಧ್ಯತೆ ಕಂಡುಬರುತ್ತಿದೆ. ಇದರಿಂದ ನೀವು ತುಂಬಾ ಸಂತೋಷಪಡುತ್ತೀರಿ. ಕುಟುಂಬದ ಜೊತೆಗೆ ಸಾಮಾಜಿಕ ಚಟುವಟಿಕೆಗಳು ಸಂತೋಷಕರವಾಗಿರುತ್ತವೆ.

**ಮೀನ** ಇಂದಿನ ಮನರಂಜನೆ ಕ್ರೀಡಾ ಚಟುವಟಿಕೆಗಳು, ಹೊರಾಂಗಣ ಕಾರ್ಯಕ್ರಮಗಳನ್ನು ಒಳಗೊಂಡಿರಬೇಕು. ದೀರ್ಘ ಕಾಲ ಬಾಕಿಯಿದ್ದ ಬಾಕಿಗಳು ಕೊನೆಗೂ ದೊರಕುತ್ತವೆ ಮಕ್ಕಳು ನಿಮಗೆ ಮನೆಕೆಲಸಗಳನ್ನು ಮಾಡಲು ಸಹಾಯ ಮಾಡುತ್ತಾರೆ. ನೀವು ಒಳ್ಳೆಯ ಅಭಿವೃದ್ಧಿ ಸಾಧಿಸುತ್ತಿದ್ದ ಹಾಗೆ ಪ್ರೇಮ ಜೀವನ ಒಳ್ಳೆಯ ತಿರುವು ತೆಗೆದುಕೊಳ್ಳುತ್ತದೆ

• ವೈದ್ಯರ ಕೊರತೆಯಿಂದ ಖಾಸಗಿ ಆಸ್ಪತ್ರೆಗಳತ್ತ ಬಡವರ್ಗದ ಜನತೆ ಮುಖಮಾಡಬೇಕಾದ ಸ್ಥಿತಿ ನಿರ್ಮಾಣವಾಗಿದೆ

# ಸರ್ಕಾರಿ ಆಸ್ಪತ್ರೆಗಳು ಖಾಲಿ..ಖಾಲಿ..! ಔಷಧಿಗೂ ಬಂತು ಬರ..!

• ಉದಯವಾಹಿನಿ ಪುತ್ತೂರು

ಜನಾರೋಗ್ಯದ ದೃಷ್ಟಿಯಿಂದ ಜನತೆಯ ಮೂಲಭೂತ ವ್ಯವಸ್ಥೆ ಆಗಿರುವ ಸರ್ಕಾರಿ ಆಸ್ಪತ್ರೆಗಳ ಪ್ರಸ್ತುತ ಸ್ಥಿತಿ ಶೋಚನೀಯವಾಗಿದೆ. ಸಾಮಾನ್ಯವಾಗಿ ಆಸ್ಪತ್ರೆಯಲ್ಲಿ ವೈದ್ಯಾಧಿಕಾರಿಗಳ ಕೊರತೆ, ಸಿಬಂಧಿಗಳ ಕೊರತೆ ಎದ್ದು ಕಾಣುತ್ತದೆ. ಆದರೆ ಇದೀಗ ಸರ್ಕಾರಿ ಆಸ್ಪತ್ರೆಗಳಲ್ಲಿ ಈ ಎರಡೂ ಕೊರತೆಗಳೊಂದಿಗೆ ಬಹುಮುಖ್ಯವಾದ ಔಷಧಗಳ ಕೊರತೆ ಉಂಟಾಗಿದೆ. ದಕ ಜಿಲ್ಲೆಯಲ್ಲಿ ಆಸ್ಪತ್ರೆಯ ಎಲ್ಲಾ ವರ್ಗದ ಅಧಿಕಾರಿ-ಸಿಬಂದಿಗಳ ಒಟ್ಟು 2054 ಹುದ್ದೆಗಳಲ್ಲಿ ಬರೋಬ್ಬರಿ 1220 ಹುದ್ದೆಗಳು ಖಾಲಿಯಾಗಿವೆ. ಇದರಲ್ಲಿ ವೈದ್ಯಾಧಿಕಾರಿಗಳ ಹುದ್ದೆ 77 ಖಾಲಿಯಾಗಿದೆ..!

**ಬರೋಬ್ಬರಿ 1220 ಹುದ್ದೆಗಳು ಖಾಲಿ**

ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರ, ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆಯಿಂದ ಖಾಸಗಿ ಆಸ್ಪತ್ರೆಗಳತ್ತ ಬಡವರ್ಗದ ಜನತೆ ಮುಖಮಾಡಬೇಕಾದ ಸ್ಥಿತಿ ನಿರ್ಮಾಣವಾಗಿದೆ. ಸುಳ್ಯ ತಾಲ್ಲೂಕಿನಲ್ಲಿ 7 ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ 7 ವೈದ್ಯಾಧಿಕಾರಿಗಳ ಹುದ್ದೆಯೂ ಖಾಲಿ. ಪುತ್ತೂರು ತಾಲ್ಲೂಕಿನಲ್ಲಿ ಎಲ್ಲಾ ವೃಂದಗಳನ್ನೂ ಸೇರಿಸಿ ಒಟ್ಟು 146 ಹುದ್ದೆಗಳಿವೆ. ಇದರಲ್ಲಿ ಕೇವಲ 62 ಹುದ್ದೆಗಳು ಮಾತ್ರ ತುಂಬಿದ್ದು, 84 ಹುದ್ದೆಗಳು ಖಾಲಿಯಾಗಿವೆ. ಪುತ್ತೂರು ತಾಲ್ಲೂಕು ಸರ್ಕಾರಿ ಆಸ್ಪತೆಯಲ್ಲಿ 15 ವೈದ್ಯಾಧಿಕಾರಿಗಳು ಇರಬೇಕಿದ್ದು, ಈ ಪೈಕಿ ಕೇವಲ 9 ಮಂದಿ ಮಾತ್ರ ಇದ್ದಾರೆ.ಅದರಲ್ಲಿಯೂ ಒಂದು ಹೊರಗುತ್ತಿಗೆ ಆಧಾರಿತವಾಗಿದೆ. ಕಡಬ ತಾಲ್ಲೂಕಿನಲ್ಲಿ ಸಮುದಾಯ ಆಸ್ಪತ್ರೆಯಲ್ಲಿ ದಂತ ವೈದ್ಯರೊಬ್ಬರನ್ನು ಬಿಟ್ಟರೆ ಉಳಿದ ಐದು ವೈದ್ಯಾಧಿಕಾರಿಗಳ ಹುದ್ದೆಯೂ ಖಾಲಿ ಆಗಿದೆ. ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳಲ್ಲಿ ಒಟ್ಟು 180 ಮಂದಿ ವೈದ್ಯಾಧಿಕಾರಿಗಳ ಹುದ್ದೆ ಇದೆ. ಆದರೆ ಅದರಲ್ಲಿ ಕೇವಲ ಅರ್ಧದಷ್ಟು ಮಾತ್ರ ಹುದ್ದೆಗಳು ಭರ್ತಿಯಾಗಿವೆ. ಆಸ್ಪತ್ರೆಗಳಲ್ಲಿ ಇರಬೇಕಾದ ಫಾರ್ಮಾಸಿಸ್ಟ್‌ಗಳ ಬದಲಿಗೆ ವೈದ್ಯರಿಗೆ ನಿರ್ವಹಣೆ ಮಾಡಬೇಕು ಎಂದು ಇಲಾಖೆ ಸೂಚಿಸಿದೆ. ಲ್ಯಾಬ್ ಟೆಕ್ನೀಷಿಯನ್‌ಗಳ ಹುದ್ದೆಯೂ ಖಾಲಿಯಾಗಿದೆ. ಸಮುದಾಯ ಆಸ್ಪತ್ರೆಗಳಲ್ಲಿ ಎಂಬಿಬಿಎಸ್ ವೈದ್ಯರು ಸಾಕು ಎಂಬ ಚಿಂತನೆಯೂ ಆರೋಗ್ಯ ಇಲಾಖೆಯದ್ದಾಗಿದೆ. ಇಲ್ಲಿರುವ ತಜ್ಞವೈದ್ಯರನ್ನು ತಾಲ್ಲೂಕು ಆಸ್ಪತ್ರೆಗಳಿಗೆ ಬದಲಾಯಿಸುವ ಯೋಚನೆ ಮಾಡಲಾಗುತ್ತಿದೆ. ಸಾಕಷ್ಟು ವ್ಯವಸ್ಥೆಗಳಿರುವ ಈ ಸಮುದಾಯ ಆಸ್ಪತ್ರೆಗಳಲ್ಲಿ ತಜ್ಞವೈದ್ಯರ ಅವಶ್ಯಕತೆ ಇದೆ. ಹಾಗಿದ್ದರೂ ಆರೋಗ್ಯ ಇಲಾಖೆ ಯಾವ ಆಧಾರದಲ್ಲಿ ಇಂತಹದ್ದೊಂದು ಚಿಂತನೆ ಮಾಡಿದೆ ಎಂಬುವುದು ಯೋಚನೆಗೆ ನಿಲುಕದ್ದಾಗಿದೆ.

ಬಡವರ್ಗದ ಬಹುತೇಕ ಮಂದಿ ಖಾಸಗಿ ಆಸ್ಪತ್ರೆಗಳ ಬದಲಿಗೆ ಸರ್ಕಾಇ ಆಸ್ಪತ್ರೆಗಳನ್ನು ಆಶ್ರಯಿಸುತ್ತಾರೆ. ಅದು ತಾಲ್ಲೂಕು ಆಸ್ಪತ್ರೆಯಿಂದ ಹಿಡಿದು ಪ್ರಾಥಮಿಕ ಆರೋಗ್ಯ ಕೇಂದ್ರಗಳ ತನಕ. ಆದರೆ ಇಲ್ಲಿ ವೈದ್ಯರೂ ಇಲ್ಲ.. ಔಷಧಿಯೂ ಇಲ್ಲ ಎನ್ನುವ ಸ್ಥಿತಿ ನಿರ್ಮಾಣವಾದರೆ ಮುಂದೆ ಸರ್ಕಾರಿ ಆಸ್ಪತ್ರೆಗಳು ಪಾಳುಬೀಳುವ ಅಪಾಯ ಸೃಷ್ಟಿಯಾಗಲಿದೆ. ಅದರಲ್ಲೂ ಗ್ರಾಮೀಣ ಭಾಗದ ಜನತೆಯ ಪಾಲಿಗೆ ಸರ್ಕಾರಿ ಆಸ್ಪತ್ರೆಗಳು ಮರೀಚಿಕೆಯಾಗುವ ಸ್ಥಿತಿ ನಿರ್ಮಾಣವಾಗಲಿದೆ. ಇದು ಜನಾರೋಗ್ಯಕ್ಕೆ ಮಾರಕವಾಗಿ ಪರಿಣಮಿಸಲಿದೆ.


ಉದಯವಾಹಿನಿ ಚಿತ್ರ

### ಖಾಸಗಿ ಸೇವೆಗೂ ಅರ್ಧಚಂದ್ರ..!

ಈ ನಡುವೆ ಸರ್ಕಾರಿ ಆಸ್ಪತ್ರೆಯ ವೈದ್ಯಾಧಿಕಾರಿಗಳು ತಮ್ಮ ಕರ್ತವ್ಯದ ಅವಧಿಯ ಬಳಿಕ ಖಾಸಗಿ ಆಸ್ಪತ್ರೆಗಳಲ್ಲಿ ಸೇವೆ ಸಲ್ಲಿಸುವ ಅವಕಾಶ ಇತ್ತು. ಆದರೆ ಇದೀಗ ಈ ವಿಚಾರದಲ್ಲಿಯೂ ಸಮಸ್ಯೆ ತಲೆದೋರಿದೆ. ಸರ್ಕಾರಿ ವೈದ್ಯರು ಖಾಸಗಿ ಆಸ್ಪತ್ರೆಗಳಲ್ಲಿ ಕೇವಲ ಹೊರರೋಗಿಗಳಷ್ಟೇ ಚಿಕಿತ್ಸೆ ನೀಡಬೇಕು ಎಂಬ ಹೊಸ ನಿಯಮವೊಂದನ್ನು ಇಲಾಖೆ ಮುಂದಿಟ್ಟಿದೆ. ಒಳರೋಗಿಗಳಿಗೆ ಈ ವೈದ್ಯಾಧಿಕಾರಿಗಳನ್ನು ಚಿಕಿತ್ಸೆ ಮಾಡಲು ಇದ್ದ ಅವಕಾಶವನ್ನು ಕಿತ್ತುಕೊಳ್ಳುವ ಚಿಂತನೆ ನಡೆಸಲಾಗಿದೆ.

### ಔಷಧಿ ಕೊರತೆ ಹೆಚ್ಚಾಗಿದೆ

ಪ್ರಸ್ತುತ ಸರ್ಕಾರಿ ಆಸ್ಪತ್ರೆಗಳು ಕೇವಲ ವೈದ್ಯಾಧಿಕಾರಿಗಳು ಮತ್ತು ನೌಕರರ ಕೊರತೆಯಿಂದ ಮಾತ್ರ ಬಳಲುತ್ತಿಲ್ಲ. ಔಷಧಗಳ ಕೊರತೆಯಿಂದಲೂ ಬಳಲುತ್ತಿದೆ. ಸರ್ಕಾರಿ ಆಸ್ಪತ್ರೆಗಳಿಗೆ ಔಷಧ ಹಾಗೂ ಖಾಲಿ ಇರುವ ಹುದ್ದೆಗಳನ್ನು ಭರ್ತಿಗೊಳಿಸಬೇಕು ಎಂಬ ಎರಡು ಪ್ರಮುಖ ಬೇಡಿಕೆಗಳು ಸೇರಿ 12 ಬೇಡಿಕೆಗಳನ್ನು ಮುಂದಿಟ್ಟುಕೊಂಡು ನಾವು ಪ್ರತಿಭಟನೆಗೆ ಇಳಿಯುತ್ತಿದ್ದೇವೆ. ನಮ್ಮ ಬೇಡಿಕೆಗಳಿಗೆ ಸರ್ಕಾರ ಸ್ಪಂಧಿಸುತ್ತದೆ ಎಂಬ ನಂಬಿಕೆ ಇದೆ. -ಡಾ.ದೀಪಕ್ ರೈ ಸರ್ಕಾರಿ ವೈದ್ಯಾಧಿಕಾರಿಗಳ ಸಂಘದ ಜಿಲ್ಲಾಧ್ಯಕ್ಷ.

## ಭಾರತೀಯ ವಾಸ್ತುಶಿಲ್ಪ ಜ್ಞಾನ ವಿದ್ಯಾರ್ಥಿಗಳಿಗೆ ಅಗತ್ಯ

• ಉದಯವಾಹಿನಿ ಚಿತ್ರದುರ್ಗ

ಭಾರತೀಯ ದೇವಾಲಯಗಳ ಪರಂಪರೆಗೆ ಸುದೀರ್ಘ, ಪ್ರಾಚೀನ ಇತಿಹಾಸವಿದೆ. ಮುಂದಿನ ದಿನಗಳಲ್ಲಿ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ವಿದ್ಯಾರ್ಥಿಗಳು ಭಾರತೀಯ ಕಲೆ ಮತ್ತು ವಾಸ್ತುಶಿಲ್ಪದ ಜ್ಞಾನ ಅಳವಡಿಸಿಕೊಳ್ಳುವುದು ಅತ್ಯಗತ್ಯ ಎಂದು ದಾವಣಗೆರೆ ವಿಶ್ವವಿದ್ಯಾಲಯದ ಸ್ನಾತಕೋತ್ತರ ಇತಿಹಾಸ, ಪುರಾತತ್ವ ವಿಭಾಗದ ಮುಖ್ಯಸ್ಥ ಡಾ.ಹೊನ್ನೂರು ಸ್ವಾಮಿ ಅಭಿಪ್ರಾಯಪಟ್ಟರು.

ನಗರದ ಸರ್ಕಾರಿ ಕಲಾ ಕಾಲೇಜು (ಸ್ವಾಯತ್ತ) ಸ್ನಾತಕೋತ್ತರ ಸಭಾಂಗಣದಲ್ಲಿ ಸರ್ಕಾರಿ ಕಲಾ ಕಾಲೇಜು ಇತಿಹಾಸ ವಿಭಾಗ ಹಾಗೂ ಐಕ್ಯೂಎಸಿ ಸಹಯೋಗದಲ್ಲಿ ಹಮ್ಮಿಕೊಂಡಿದ್ದ 'ಭಾರತೀಯ ಕಲೆ ಮತ್ತು ವಾಸ್ತುಶಿಲ್ಪ' ಕುರಿತ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಬೌದ್ಧ ಸ್ತೂಪಗಳು, ವಿಹಾರಗಳು, ಚೈತ್ಯಾಲಯಗಳ ಅಧ್ಯಯನದಿಂದ ವಿವಿಧ ಧರ್ಮಗಳ ಮೂಲ ಆಶಯಗಳನ್ನು ಅರ್ಥಮಾಡಿಕೊಳ್ಳಲು ಸಾಧ್ಯವಿದೆ ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು. ಸರ್ಕಾರಿ ಕಲಾ ಕಾಲೇಜಿನ ಪ್ರಾಂಶುಪಾಲ ಪ್ರೊ.ಜೆ. ಕರಿಯಪ್ಪ ಮಾಳಿಗೆ ಮಾತನಾಡಿ, ದೇವಾಲಯ, ವಾಸ್ತುಶಿಲ್ಪಗಳು ಜಾತ್ಯತೀತ ಮೌಲ್ಯಗಳನ್ನು ಒಳಗೊಂಡಿದ್ದು, ಸಮಾಜದಲ್ಲಿ ಸಾಮರಸ್ಯ ಮೂಡಿಸುವ ಕೆಲಸ ಮಾಡುತ್ತಿವೆ. ಹಾಗಾಗಿ, ಪ್ರಾಚೀನ ಪರಂಪರೆಯ ಬಗ್ಗೆ ವಿದ್ಯಾರ್ಥಿಗಳು ತೀವ್ರ ಕಳಕಳಿ ಹೊಂದಬೇಕು ಎಂದರು.


ಉದಯವಾಹಿನಿ ಚಿತ್ರ

ಇತಿಹಾಸ ವಿಭಾಗದ ಮುಖ್ಯಸ್ಥ ಡಾ. ಬಿ. ಸುರೇಶ್ ಅವರು ಗಾಂಧಾರ ಮತ್ತು ಮಥುರಾ ಕಲೆಗಳ ವಿಶೇಷತೆ ಪರಿಚಯಿಸಿದರು. ಐಕ್ಯೂಎಸಿ ಸಂಚಾಲಕಿ ಪ್ರೊ. ತಾರಿಣಿ ಶುಭದಾಯಿನಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಅಧ್ಯಾಪಕರ ಸಂಘದ ಕಾರ್ಯದರ್ಶಿ ಪ್ರೊ. ಹನುಮಂತಪ್ಪ, ಡಾ. ರೇವಣಸಿದ್ದಪ್ಪ ಹಾಗೂ ಸ್ನಾತಕ ಪದವಿ ಮುಖ್ಯಸ್ಥ ಪ್ರೊ. ಮಹ್ಮದ್ ಬಾಷ ಇದ್ದರು.

## ಪರೀಕ್ಷೆ ವ್ಯವಸ್ಥಿತವಾಗಿ ಹಾಗೂ ಅಚ್ಚುಕಟ್ಟಾಗಿ ನಡೆಸಲು ಕ್ರಮ ವಹಿಸಿ

• ಉದಯವಾಹಿನಿ ಗದಗ

ಜಿಲ್ಲೆಯಲ್ಲಿ ಮಾರ್ಚ 18 ರಿಂದ ಏಪ್ರಿಲ್ 2 ರವರೆಗೆ ಜರುಗುವ ಎಸ್‌ಎಸ್‌ಎಲ್‌ಸಿ ಪರೀಕ್ಷೆ-1 ಯನ್ನು ವ್ಯವಸ್ಥಿತವಾಗಿ ಹಾಗೂ ಅಚ್ಚುಕಟ್ಟಾಗಿ ನಡೆಸಲು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು. ಗದಗ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ-1 ಕುರಿತು ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪರೀಕ್ಷೆಗಳಲ್ಲಿ ಯಾವುದೇ ಅಕ್ರಮಗಳು ಅವ್ಯವಹಾರಗಳು ನಡೆಯದಂತೆ ನೋಡಿಕೊಳ್ಳಬೇಕು. ಪರೀಕ್ಷಾ ಕೇಂದ್ರಗಳಲ್ಲಿ ಸೂಕ್ತ ಆಸನದ ವ್ಯವಸ್ಥೆ ಇರುವಂತೆ ಕ್ರಮ ಜರುಗಿಸಬೇಕು. ಜಿಲ್ಲೆಯಲ್ಲಿ ಒಟ್ಟು 61 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆಗಳು ನಡೆಯಲಿದ್ದು ಅಲ್ಲಿ ಕುಡಿಯುವ ನೀರು, ವಿದ್ಯುತ್ ವ್ಯವಸ್ಥೆ ಸೇರಿದಂತೆ ಮೂಲಭೂತ ಸೌಲಭ್ಯಗಳು ಇರುವಂತೆ ನೋಡಿಕೊಳ್ಳಬೇಕು. ಪರೀಕ್ಷಾ ಅವಧಿಯಲ್ಲಿ ಪರೀಕ್ಷಾ ಕೇಂದ್ರಗಳ ಸುತ್ತಲೂ ನಿಷೇಧಾಜ್ಞೆ ಜಾರಿಗೊಳಿಸಲಾಗಿದ್ದು ಪರೀಕ್ಷಾ ಅವಧಿಯಲ್ಲಿ ಯಾವುದೇ ಲೋಪದೋಷಗಳಾಗದಂತೆ ಕ್ರಮ ಜರುಗಿಸಬೇಕು. ಒಟ್ಟಾರೆಯಾಗಿ ಜಿಲ್ಲೆಯಲ್ಲಿ ಎಸ್‌ಎಸ್‌ಎಲ್ ಸಿ ಪರೀಕ್ಷೆ-1 ಪರೀಕ್ಷೆಗಳು ಶಾಂತಿಯುತವಾಗಿ, ಪಾರದರ್ಶಕವಾಗಿ ನಡೆಯುವಂತೆ ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್‌ಸೂಚಿಸಿದರು.


ಉದಯವಾಹಿನಿ ಚಿತ್ರ

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್. ಎಸ್.ಬುರುಡಿ ಮಾತನಾಡಿ ಎಸ್‌ಎಸ್‌ಎಲ್‌ಸಿ-1 ಪರೀಕ್ಷೆಯು ಮಾರ್ಚ 18 ರಿಂದ ಏಪ್ರಿಲ್ 2 ರವರೆಗೆ ಜಿಲ್ಲೆಯ 61 ಪರೀಕ್ಷಾ ಕೇಂದ್ರಗಳಲ್ಲಿ ಜರುಗಲಿವೆ. ಒಟ್ಟು 17146 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಪರೀಕ್ಷಾ ಕೇಂದ್ರಗಳಲ್ಲಿ ಮೂಲಭೂತ ಸೌಲಭ್ಯ ಒದಗಿಸಲು ಕ್ರಮ ವಹಿಸಲಾಗಿದೆ. ಪರೀಕ್ಷೆಗಳನ್ನು ಅಚ್ಚುಕಟ್ಟಾಗಿ ನಡೆಸಲು ಸಕಲ ಕ್ರಮ ಕೈಗೊಳ್ಳಲಾಗಿದೆ ಎಂದರು.

ಸಭೆಯಲ್ಲಿ ಪರೀಕ್ಷಾ ಕೇಂದ್ರಗಳ ಸುತ್ತ ಸೂಕ್ತ ಪೊಲೀಸ ಬಂದೋಬಸ್ತ್, ಪರೀಕ್ಷಾರ್ಥಿಗಳು ಪರೀಕ್ಷಾ ಕೇಂದ್ರಗಳಿಗೆ ಹೋಗಿ ಬರಲು ಅನುಕೂಲವಾಗುವಂತೆ ಸೂಕ್ತ ಸಾರಿಗೆ ವ್ಯವಸ್ಥೆ ಕುರಿತು ಚರ್ಚಿಸಲಾಯಿತು. ಈ ಸಂದರ್ಭದಲ್ಲಿ ಡಿವೈಎಸ್‌ಪಿ ಮಹಾಂತೇಶ ಸಜ್ಜನ, ಡಯಟ್ ಪ್ರಾಚಾರ್ಯರಾದ ಜೆ ಎಂ ಮುಂದಿನಮನಿ, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರು ಹಾಜರಾಗಿದ್ದರು

## ಆಟೋದಲ್ಲಿ ಹೋಗುತ್ತಿದ್ದ ಮಹಿಳೆಯ 6.73 ಲಕ್ಷ ರೂ.ಮೌಲ್ಯದ ಚಿನ್ನಾಭರಣ ಕಳವು

• ಉದಯವಾಹಿನಿ ಕಲಬುರಗಿ

ಬೈಕ್ ಮೇಲೆ ಬಂದ 20-25 ವರ್ಷ ವಯಸ್ಸಿನ ಮೂವರು ಅಪರಿಚಿತ ವ್ಯಕ್ತಿಗಳು ಆಟೋದಲ್ಲಿ ಹೋಗುತ್ತಿದ್ದ ಮಹಿಳೆಯೊಬ್ಬರ ವ್ಯಾನಿಟಿ ಬ್ಯಾಗ್ ಕಿತ್ತುಕೊಂಡು ಹೋಗಿರುವ ಘಟನೆ ನಗರದಲ್ಲಿ ನಡೆದಿದೆ.

ವಾಡಿ ಪಟ್ಟಣದ ವೈಟ್ ಹೌಸ್ ಬಿರ್ಲಾ ಏರಿಯಾ ನಿವಾಸಿ ಸೈಯ್ಯದಾ ಸಾಜೀರಾ ಮತೀನ್ ಎಂಬುವವರ 6.73 ಲಕ್ಷ ರೂ. ಮೌಲ್ಯದ ಚಿನ್ನಾಭರಣ, 20 ಸಾವಿರ ರೂ.ಮೌಲ್ಯದ ಮೊಬೈಲ್ ಮತ್ತು 17 ಸಾವಿರ ರೂ.ನಗದು ಹಣವಿದ್ದ ವ್ಯಾನಿಟಿ ಬ್ಯಾಗ್‌ನ್ನು ಕಸಿದುಕೊಂಡು ಹೋಗಲಾಗಿದ್ದು, ಅವರು ಈ ಸಂಬಂಧ ಬ್ರಹ್ಮಪುರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ.

## ವಿದ್ಯೆಗೆ ಜಾತಿಯಿಲ್ಲ; ಮನುಷ್ಯನಿಗೇಕೆ ಜಾತಿ


• ಉದಯವಾಹಿನಿ ಜೇವರಗಿ

ತಾಲ್ಲೂಕಿನ ದತ್ತನಗರದಲ್ಲಿರುವ ಜ್ಞಾನಜ್ಯೋತಿ ಹಿರಿಯ ಪ್ರಾಥಮಿಕ ಹಾಗೂ ಅರುಣೋದಯ ಆಂಗ್ಲ ಮಾಧ್ಯಮ ಶಾಲೆಯ ವತಿಯಿಂದ ಶಾಲಾ ಆವರಣದಲ್ಲಿ 19ನೇ ವಾರ್ಷಿಕೋತ್ಸವ ಹಾಗೂ 8ನೇ ತರಗತಿ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭ ನಡೆಯಿತು. ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದ ಆಲೂರು ಕೆಂಚವೃಷಬೇಂದ್ರ ಶಿವಾಚಾರ್ಯರು, ವಿದ್ಯೆ ಇರುವವನ ಹತ್ತಿರ ದೇವರು ಇರುತ್ತಾನೆ; ವಿದ್ಯೆಗೆ ಜಾತಿಯಿಲ್ಲ. ವಿದ್ಯಾರ್ಥಿಗಳಿಗೆ ವಿದ್ಯೆಯ ಜೊತೆಗೆ ಸಂಸ್ಕಾರವೂ ಅಗತ್ಯ. ಸಂಸ್ಕಾರವಿಲ್ಲದ ವಿದ್ಯೆ ಸಂಪೂರ್ಣವಾಗುವುದಿಲ್ಲ ಎಂದು ಹೇಳಿದರು. ವಿದ್ಯಾರ್ಥಿಗಳು ಉತ್ತಮ ವ್ಯಕ್ತಿತ್ವವನ್ನು ಬೆಳೆಸಿಕೊಳ್ಳಲು ಶಿಸ್ತು ಹಾಗೂ ಸಂಸ್ಕಾರ ಮುಖ್ಯವೆಂದು ಅವರು ತಿಳಿಸಿದರು.ಕಾರ್ಯಕ್ರಮವನ್ನು ಡಿಸಿಸಿ ಬ್ಯಾಂಕ್ ನಿರ್ದೇಶಕ ಬಸವರಾಜ ಎಸ್. ಪಾಟೀಲ ನರಿಬೋಳ ಉದ್ಘಾಟಿಸಿದರು.


## ಮೂಲಸೌಕರ್ಯಕ್ಕೆ ಬ್ಯಾಂಕ್ ಕಾಲೊನಿ ನಿವಾಸಿಗಳ ಆಗ್ರಹ

• ಉದಯವಾಹಿನಿ ಬೀದರ್

ನಗರದ ಕುಂಬಾರವಾಡ ಸಮೀಪದ ಬ್ಯಾಂಕ್ ಕಾಲೊನಿಗೆ ಅಗತ್ಯ ಮೂಲಸೌಕರ್ಯ ಒದಗಿಸಬೇಕು ಎಂದು ಕಾಲೊನಿ ನಿವಾಸಿಗಳು ಆಗ್ರಹಿಸಿದ್ದಾರೆ. ಈ ಕುರಿತು ನಿಯೋಗದಲ್ಲಿ ಜಿಲ್ಲಾಧಿಕಾರಿಗೆ ಬರೆದ ಮನವಿ ಪತ್ರವನ್ನು ಹೆಚ್ಚುವರಿ ಜಿಲ್ಲಾಧಿಕಾರಿ ಅವರಿಗೆ ಸಲ್ಲಿಸಿದ್ದಾರೆ. ಕಾಲೊನಿ ವಾರ್ಡ್ ಸಂಖ್ಯೆ 29-30 ರ ವ್ಯಾಪ್ತಿಯಲ್ಲಿದೆ. ನಗರಸಭೆಗೆ ಸೇರಿ 40 ವರ್ಷಗಳಾದರೂ ಕುಡಿಯುವ ನೀರು, ರಸ್ತೆ, ಚರಂಡಿ ಸೇರಿದಂತೆ ಮೂಲಸೌಕರ್ಯಗಳು ಇಲ್ಲ. ಹೀಗಾಗಿ ನಾಗರಿಕರು ತೊಂದರೆ ಅನುಭವಿಸುವಂತಾಗಿದೆ ಎಂದು ಅಳಲು ತೋಡಿಕೊಂಡಿದ್ದಾರೆ. ಕುಂಬಾರವಾಡದಿಂದ ಬೌದ್ಧ ಮಂದಿರ ವರೆಗಿನ ರಸ್ತೆ ಸಂಪೂರ್ಣ ಹಾಳಾಗಿದೆ. ದೂಳು ಮನೆಗಳಿಗೆ ಸೇರುತ್ತಿದೆ. ಇದರಿಂದ ಹಿರಿಯರು, ಮಕ್ಕಳ ಆರೋಗ್ಯದ ದುಷ್ಪರಿಣಾಮ ಉಂಟಾಗುತ್ತಿದೆ ಎಂದು ಹೇಳಿದ್ದಾರೆ. ಕಾಲೊನಿ ಸಮಸ್ಯೆಯನ್ನು ಹಿಂದೆ ಸಚಿವರು, ಪೌರಾಯುಕ್ತರ ಗಮನಕ್ಕೆ ತಂದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ಅಳಲು ತೋಡಿಕೊಂಡಿದ್ದಾರೆ. ಕೂಡಲೇ ಕುಂಬಾರವಾಡ ಮುಖ್ಯರಸ್ತೆಯಿಂದ ಬೌದ್ಧ ಮಂದಿರದ ವರೆಗಿನ ರಸ್ತೆ ನಿರ್ಮಿಸಬೇಕು ಹಾಗೂ ಕಾಲೊನಿಗೆ ಮೂಲಸೌಕರ್ಯ ಕಲ್ಪಿಸಲು ಕ್ರಮ ಕೈಗೊಳ್ಳಬೇಕು ಎಂದು ಬೇಡಿಕೆ ಮಂಡಿಸಿದ್ದಾರೆ.


ಉದಯವಾಹಿನಿ ಚಿತ್ರ

## ಪಾರದರ್ಶಕತೆಯಿಂದ ಪರೀಕ್ಷೆ ನಡೆಸಿ: ತಹಶೀಲ್ದಾರ್


ಉದಯವಾಹಿನಿ ಚಿತ್ರ

• ಉದಯವಾಹಿನಿ ಮುದ್ದೇಬಿಹಾಳ

ಮಾರ್ಚ್ 18 ರಿಂದ ಏಪ್ರಿಲ್ 2 ರವರೆಗೆ ನಡೆಯಲಿರುವ ಎಸ್.ಎಸ್.ಎಲ್.ಸಿ ಪರೀಕ್ಷೆಗಳು ಅತ್ಯಂತ ಪಾರದರ್ಶಕವಾಗಿ ಹಾಗೂ ಗೊಂದಲಗಳಿಗೆ ಆಸ್ಪದ ನೀಡದಂತೆ ನಡೆಯಬೇಕು. ಯಾವುದೇ ಲೋಪದೋಷಗಳಿಗೆ ಅವಕಾಶ ನೀಡದೆ, ಪರೀಕ್ಷಾ ಕೇಂದ್ರಗಳಲ್ಲಿ ಸಕಲ ಸಿದ್ಧತೆಗಳನ್ನು ಕೈಗೊಳ್ಳಬೇಕು, ಎಂದು ತಹಶೀಲ್ದಾರ್ ಶ್ರೀಮತಿ ಕೀರ್ತಿ ಚಾಲಕ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಬುಧವಾರ ಪಟ್ಟಣದ ಎಂಜಿವಿಸಿ ಕಾಲೇಜಿನಲ್ಲಿ ಹಮ್ಮಿಕೊಳ್ಳಲಾಗಿದ್ದ ಎಸ್.ಎಸ್.ಎಲ್.ಸಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪರೀಕ್ಷೆ ಆರಂಭಕ್ಕೆ ಇನ್ನು ಸಾಕಷ್ಟು ಸಮಯವಿದ್ದು, ಈ ಅವಧಿಯಲ್ಲಿ ಯಾವುದೇ ತಾಂತ್ರಿಕ ಸಮಸ್ಯೆಗಳು ಎದುರಾಗದಂತೆ ಎಚ್ಚರಿಕೆ ವಹಿಸಬೇಕು. ಪರೀಕ್ಷಾ ಕೊಠಡಿಗಳಲ್ಲಿ ಸಮರ್ಪಕ ವಿದ್ಯುತ್ ಸಂಪರ್ಕ, ಸಿಸಿಟಿವಿ ಕ್ಯಾಮೆರಾ ಕಣ್ಗಾವಲು, ಶೌಚಾಲಯ, ಕುಡಿಯುವ ನೀರಿನ ವ್ಯವಸ್ಥೆಯನ್ನು ಕಡ್ಡಾಯವಾಗಿ ಮಾಡಬೇಕು. ಮುದ್ದೇಬಿಹಾಳ ಕ್ಷೇತ್ರವೆಂದರೆ ಪರೀಕ್ಷಾ ದೃಷ್ಟಿಯಿಂದ ಸೂಕ್ಷ್ಮ ಎಂಬ ಹಣೆಪಟ್ಟಿಯಿದೆ, ಅದನ್ನು ಅಧಿಕಾರಿಗಳು ತಮ್ಮ ಜವಾಬ್ದಾರಿಯುತ ಕೆಲಸದ ಮೂಲಕ ಅಳಿಸಿ ಹಾಕಬೇಕು, ಎಂದು ಅವರು ಕರೆ ನೀಡಿದರು.

ಕ್ಷೇತ್ರ ಸಮನ್ವಯಾಧಿಕಾರಿ ಆರ್.ಬಿ. ದಮ್ಮೂರಮಠ ಮಾಹಿತಿ ನೀಡಿ, ಮುದ್ದೇಬಿಹಾಳ ತಾಲೂಕಿನಲ್ಲಿ ಒಟ್ಟು 19 ಪರೀಕ್ಷಾ ಕೇಂದ್ರಗಳಿದ್ದು, 6147 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ ಎಂದು ತಿಳಿಸಿದರು. ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ಎಸ್. ಸಾವಳಗಿ ಹಾಗೂ ಡಯಟ್ ಪ್ರಾಚಾರ್ಯ ಎಸ್.ಎ. ಮುಜಾವರ ಅವರು ಮಾತನಾಡಿ, ಪರೀಕ್ಷಾ ಕರ್ತವ್ಯಕ್ಕೆ ನಿಯೋಜಿತರಾದ ಸಿಬ್ಬಂದಿಗಳು ಪಾಲಿಸಬೇಕಾದ ನಿಯಮಗಳು ಹಾಗೂ ಜವಾಬ್ದಾರಿಗಳ ಕುರಿತು ಮಹತ್ವದ ಸಲಹೆಗಳನ್ನು ನೀಡಿದರು.

**ಬಿಗಿ ಪೊಲೀಸ್ ಬಂದೋಬಸ್ತ್;** ಪಿಎಸ್‌ಐ ಸಂಜಯ ತಿಪ್ಪಾರೆಡ್ಡಿ ಮಾತನಾಡಿ, ರಕ್ಕಸಗಿ, ನಾಲತವಾಡ, ಬಳಬಟ್ಟಿ, ಬಸರಕೋಡ, ಮುದ್ದೇಬಿಹಾಳದ ವಿಬಿಸಿ ಕೇಂದ್ರಗಳಲ್ಲಿ ಮುನ್ನೆಚ್ಚರಿಕೆ ಕ್ರಮವಾಗಿ ಹೆಚ್ಚಿನ ಬ್ಯಾರಿಕೇಡ್‌ಗಳನ್ನು ಅಳವಡಿಸಲು ಸೂಚಿಸಿದರು. ಇದೇ ವೇಳೆ ಸರಕಾರಿ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಎಂ.ಎಸ್. ಕವಡಿಮಟ್ಟಿ ಅವರು, ಪರೀಕ್ಷಾ ಕೇಂದ್ರಗಳಲ್ಲಿ ಪಾಲಕರನ್ನು ನಿಯಂತ್ರಿಸಲು ಆರಕ್ಷಕ ಸಿಬ್ಬಂದಿಗಳು ಪರೀಕ್ಷೆ ಆರಂಭದ ಅರ್ಧ ಗಂಟೆ ಮುಂಚಿತವಾಗಿಯೇ ಹಾಜರಿರಬೇಕು ಎಂದು ಮನವಿ ಮಾಡಿದರು. ಸಭೆಯಲ್ಲಿ ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಎಂ.ಎಂ. ಬೆಳಗಲ್, ಆರೋಗ್ಯ ಶಿಕ್ಷಣಾಧಿಕಾರಿ ಅನಸೂಯಾ ತೆರದಾಳ, ಬಿ.ಹೆಚ್. ತಿಳಿಗೋಳ, ಎಂ.ಕೆ. ಬಾಗವಾನ ಸೇರಿದಂತೆ ಹಲವು ಇಲಾಖಾ ಅಧಿಕಾರಿಗಳು ಉಪಸ್ಥಿತರಿದ್ದರು. ಸಿಆರ್‌ಪಿ ಗುಂಡು ಚವ್ಹಾಣ ಕಾರ್ಯಕ್ರಮ ನಿರೂಪಿಸಿದರೆ, ಎಸ್.ಎಸ್. ರಾಮತಾಳ ವಂದಿಸಿದರು.

## ಪಿಎಂಎಸ್ ವೈಎಂ ಯೋಜನೆ ಸದುಪಯೋಗ ಪಡೆದು ಪ್ರತಿತಿಂಗಳ 3000 ಪಿಂಚಣಿ ಪಡೆಯಿರಿ: ಫಕೀರಪ್ಪ ಕಟ್ಟಿಮನಿ

• ಉದಯವಾಹಿನಿ ಯಲಬುರ್ಗಾ

ಪ್ರಧಾನ ಮಂತ್ರಿ ಶ್ರಮ ಯೋಗಿ ಮಾನ್-ಧನ್ ಎನ್ನುವುದು ಅಸಂಘಟಿತ ವಲಯದ ಕಾರ್ಮಿಕರಿಗಾಗಿ ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಒಂದು ಸ್ವಯಂಪ್ರೇರಿತ ಮತ್ತು ಕೊಡುಗೆ ಆಧಾರಿತ ಪಿಂಚಣಿ ಯೋಜನೆಯಾಗಿದ್ದು, ಈ ಯೋಜನೆಯಡಿ 60 ವರ್ಷ ವಯಸ್ಸಿನ ನಂತರ ಪ್ರತಿ ತಿಂಗಳು 3,000 ಖಚಿತವಾದ ಪಿಂಚಣಿ ದೊರೆಯುತ್ತದೆ ಎಂದು ಪಿಡಿಒರಾದ ಫಕೀರಪ್ಪ ಕಟ್ಟಿಮನಿ ಹೇಳಿದರು. ಕೊಪ್ಪಳ ಜಿಲ್ಲೆಯ ಯಲಬುರ್ಗಾ ತಾಲ್ಲೂಕಿನ ಸಂಕನೂರ ಗ್ರಾಮ ಪಂಚಾಯತಿಯ ಸಂಕನೂರ ಗ್ರಾಮದಲ್ಲಿ ನರೇಗಾ ಯೋಜನೆಯಡಿ ಅನುಷ್ಠಾನ ಮಾಡುತ್ತಿರುವ ನಾಲಾ ಹೂಳೆತ್ತುವ ಕಾಮಗಾರಿ ಸ್ಥಳದಲ್ಲಿ ಕೂಲಿಕಾರರಿಗೆ ರೋಜಗಾರ್ ದಿನಾಚರಣೆ ಹಾಗೂ ಪ್ರಧಾನ ಮಂತ್ರಿ ಶ್ರಮಯೋಗಿ ಮಾನ್ ಧನ್ ನೊಂದಣಿ ಅಭಿಯಾನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಅಸಂಘಟಿತ ವಲಯದ ಕಾರ್ಮಿಕರು ಎಂದರೆ ಬೀದಿ ಬದಿ ವ್ಯಾಪಾರಿಗಳು, ರಿಕ್ಷಾ ಚಾಲಕರು, ಕಟ್ಟಡ ಕಾರ್ಮಿಕರು, ಕೃಷಿ ಕೂಲಿ ಕಾರ್ಮಿಕರು, ಮನೆ ಕೆಲಸದವರು ಹಾಗೂ ನರೇಗಾ ಕೂಲಿಕಾರರು ಸೇರಿದಂತೆ ವಿವಿಧ ರೀತಿಯ ಕಾರ್ಮಿಕರು 18 ರಿಂದ 40 ವರ್ಷಗಳ ಒಳಗಿರಬೇಕು. ಮಾಸಿಕ ಆದಾಯ ರೂ.15,000 ಅಥವಾ ಅದಕ್ಕಿಂತ ಕಡಿಮೆ ಇರಬೇಕು. ಅರ್ಜಿದಾರರು ಆದಾಯ ತೆರಿಗೆ ಪಾವತಿದಾರರಾಗಿರಬಾರದು ಮತ್ತು EPFO, ESIC ಅಥವಾ NPS ಸದಸ್ಯರಾಗಿರಬಾರದು ಎಂದು ತಿಳಿಸಿದರು. ತಾಲ್ಲೂಕು ಐಇಸಿ ಸಂಯೋಜಕರಾದ ಶರಣಪ್ಪ ಹಾಳಕೇರಿ ಮಾತನಾಡಿ, ಯೋಜನೆಯಡಿ 60 ವರ್ಷ ತುಂಬಿದ ನಂತರ ಪ್ರತಿ ತಿಂಗಳು ರೂ.3,000 ಪಿಂಚಣಿ ಸಿಗುತ್ತದೆ. ಕೂಲಿಕಾರರು ಪ್ರತಿ ತಿಂಗಳು ವಯಸ್ಸಿಗೆ ತಕ್ಕಂತೆ ಎಷ್ಟು ಹಣ ಪಾವತಿಸುತ್ತೀರಿ, ಅಷ್ಟೇ ಮೊತ್ತವನ್ನು ಕೇಂದ್ರ ಸರ್ಕಾರವು ನಿಮ್ಮ ಪಿಂಚಣಿ ಖಾತೆಗೆ ಜಮೆ ಮಾಡುತ್ತದೆ. ಫಲಾನುಭವಿಯ ಮರಣದ ನಂತರ, ಅವರ ಸಂಗಾತಿಗೆ (ಪತಿ ಅಥವಾ ಪತ್ನಿ) ಪಿಂಚಣಿಯ 50% ಅಂದರೆ ರೂ.1,500) ಮೊತ್ತವನ್ನು ಕುಟುಂಬ ಪಿಂಚಣಿಯಾಗಿ ನೀಡಲಾಗುತ್ತದೆ. ನಿಮ್ಮ ವಯಸ್ಸಿಗೆ ಅನುಗುಣವಾಗಿ ತಿಂಗಳಿಗೆ ರೂ.55 ರಿಂದ ರೂ.200 ವರೆಗೆ ಇರುತ್ತದೆ. ಹೆಚ್ಚಿನ ಮಾಹಿತಿಗಾಗಿ ನೀವು ಉಚಿತ ಸಹಾಯವಾಣಿ ಸಂಖ್ಯೆ 1800 2676 888 ಗೆ ಕರೆ ಮಾಡಬಹುದೆಂದು ತಿಳಿಸಿದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಕಂಪ್ಯೂಟರ್ ಆಪರೇಟರ್ ಭೀಮರಾವ್ ದೇಸಾಯಿ, ಗ್ರಾಮ ಕಾಯಕ ಮಿತ್ರ ಜಯಶ್ರೀ ಬೇನಾಳ, ಕಾಯಕ ಬಂಧುಗಳು, 103 ಕೂಲಿಕಾರರು ಹಾಜರಿದ್ದರು.


ಉದಯವಾಹಿನಿ ಚಿತ್ರ

## ಮಹಿಳೆಗೆ ಎಲ್ಲಾ ಕ್ಷೇತ್ರದಲ್ಲೂ ಸಾಧನೆ ಗರಿ

• ಉದಯವಾಹಿನಿ ವಿಜಯಪುರ

ಮಹಿಳೆ ಇಂದು ಎಲ್ಲ ರಂಗದಲ್ಲಿಯೂ ಉನ್ನತವಾದ ಸಾಧನೆಯ ನಗೆ ಬೀರಿದ್ದಾಳೆ ಎಂದು ಅಧೀಕ್ಷಕ ಅಭಿಯಂತರ ಸಿದ್ದಪ್ಪ ಬಿಂಜಿಗೇರಿ ಹೇಳಿದರು ವಿಜಯಪುರದ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಹಾಗೂ ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ಸಹಯೋಗದಲ್ಲಿ ಆಯೋಜಿಲಾಗಿದ್ದ ವಿಶ್ವ ಮಹಿಳಾ ದಿನಾಚರಣೆ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಮಹಿಳೆ ಅಂದು ನಾಲ್ಕು ಗೋಡೆಗಳಿಗೆ ಸೀಮಿತವಾಗಿದ್ದಳು. ಅನೇಕ ಸವಾಲುಗಳನ್ನು ಎದುರಿಸಿ ತನ್ನ ಸ್ವಸ್ವಾಮರ್ಥ್ಯದ ಮೇಲೆ ಇಂದು ಎಲ್ಲಾ ರಂಗದಲ್ಲಿಯೂ ಸಾಧನೆ ತೋರಿದ್ದಾಳೆ. ವಿಮಾನ ನಡೆಸುವ ಜೊತೆಗೆ ಅಂತರಿಕ್ಷ ನೌಕೆಯನ್ನೂ ಸಹ ಸಮರ್ಥವಾಗಿ ಚಲಾಯಿಸುವ ಮಟ್ಟಕ್ಕೆ ಬೆಳೆದಿದ್ದಾಳೆ. ಪ್ರತಿ ಬಾರಿಯ ಫಲಿತಾಂಶದಲ್ಲಿಯೂ ಬಾಲಕಿಯರ ಮೇಲುಗೈ ಸಾಧಿಸುತ್ತಿದ್ದಾರೆ. ತೊಟ್ಟಿಲು ತೂಗುವ ಕೈ ವಿಶ್ವವನ್ನೇ ಆಳಬಲ್ಲದು ಎಂಬುದನ್ನು ನಿರೂಪಿಸಿದ್ದಾಳೆ, ಮಹಿಳೆ ಅಪಾರ ಶಕ್ತಿವಂತಳು. ಕರುಣೆ, ವಾತ್ಸಲ್ಯದ ಪ್ರತಿರೂಪ. ಮಹಿಳೆಗೆ ಸಾಧನೆ ತೋರಲು ವೇದಿಕೆ ಬೇಕು ಎಂದರು.

# ಜಿಲ್ಲಾಡಳಿತಕ್ಕೆ ವಾರದ ಗಡುವು ನೀಡಿದ ಉಮೇಶ ಕೆ. ಮುದ್ನಾಳ

• ಹಿರೆನೂರು-ಕಂದಳ್ಳಿ ಬ್ರಿಡ್ಜ್ ಕಂ ಬ್ಯಾರೇಜ್ ಮೇಲೆ ವಿನೂತನ ಕುಂಟಲೀಪಿ ಆಟ ಆಡಿ ಪ್ರತಿಭಟನೆ

• ಉದಯವಾಹಿನಿ ಯಾದಗಿರಿ

ಯಾದಗಿರಿ-ಸೈದಾಪೂರ ಸಮೀಪ ಹಿರೆನೂರು, ಕಂದಳ್ಳಿ ಬ್ರಿಡ್ಜ್ ಕಂ ಬ್ಯಾರೇಜ್ 6 ತಿಂಗಳ ಹಿಂದೆ ಧಾರಾಕಾರ ಸುರಿದ ಮಳೆಗೆ ಪ್ರವಾಹ ಬಂದು ಕಂದಳ್ಳಿ-ಹಿರೆನೂರ 2 ಭಾಗದಲ್ಲಿ ರಸ್ತೆ ಕೊಚ್ಚಿ ಹೋಗಿ ಬೃಹತ್ ಆಕಾರದ ಗುಂಡಿಗಳು ಬಿದ್ದು, ಸಂಚಾರ ಸಂಪೂರ್ಣ ಬಂದ್ ಆಗಿ ಹೋಗಿದ್ದು, ಇಲ್ಲಿಯವರೆಗೂ ಸರಿಪಡಿಸಲು ಜಿಲ್ಲಾಡಳಿತ ಸಂಪೂರ್ಣ ವಿಫಲವಾಗಿದೆ ಎಂದು ಸಾಮಾಜಿಕ ಹೋರಾಟಗಾರ ಉಮೇಶ.ಕೆ. ಮುದ್ನಾಳ ಆರೋಪಿಸಿದರು.

ಸಾಮಾಜಿಕ ಹೋರಾಟಗಾರ ಉಮೇಶ.ಕೆ.ಮುದ್ನಾಳ ಸ್ಥಳಕ್ಕೆ ಭೇಟಿ ನೀಡಿ, ರಸ್ತೆ 2 ಬದಿಯಲ್ಲಿ ಸಂಪೂರ್ಣ ಪರಿಶೀಲಿಸಿದ ನಂತರ ರೈತರ ಜೊತೆ ಸೇರಿ ವಿನೂತನವಾಗಿ ದಿಢೀರ ಪ್ರತಿಭಟನೆ ಮಾಡಿ ಬ್ರಿಡ್ಜ್ ಕಂ ಬ್ಯಾರೇಜ್ ಬಿದ್ದಿರುವ ತಗ್ಗು ಗುಂಡಿಗಳ ಮಧ್ಯೆ ಕುಂಟಲೀಸಿ ಆಟ ಆಡುವ ಮುಖಾಂತರ ಸರಕಾರಕ್ಕೆ ಜಿಲ್ಲಾಡಳಿತಕ್ಕೆ ಎಚ್ಚರಿಸಿದರು, ರಸ್ತೆ ಹಾಳಾಗಿರುವುದರಿಂದ ಸಮಯಕ್ಕೆ ಸರಿಯಾಗಿ ತಲುಪಲು ಆಗದೇ ಕುಂಟಲಿಪಿ ಆಟವಾಡುವ ಮುಖಾಂತರ ವಿನೂತನ ಪ್ರತಿಭಟನೆಯನ್ನು ಪ್ರದರ್ಶಿಸಿದರು. ಸಂಬಂಧಪಟ್ಟ ಅಧಿಕಾರಿಗಳು ಇಲ್ಲಿಯವರೆಗೂ ಕುಂಭಕರ್ಣ ನಿದ್ರೆಯಲ್ಲಿ ಜಾರಿದ್ದು ದುರದೃಷ್ಟಕರ ಸಂಗತಿ, ಜನತೆಗೆ ಸುಗಮ ಸಂಚಾರಕ್ಕೆ ತೊಂದರೆಯಾಗುತ್ತಿದೆ. ಗುಂಡಿಗಳು ದೊಡ್ಡವಾಗಿ ಬದಲಾಗಿವೆ. ಇದರಿಂದ ವಾಹನ ಸವಾರರು ಜೀವ ಕೈಯಲ್ಲಿ ಹಿಡಿದು ಸಂಚರಿಸುವ ಪರಿಸ್ಥಿತಿ ನಿರ್ಮಾಣ ಆಗಿದೆ, ಏನಾದರೂ ಅನಾಹುತ ಸಂಭವಿಸಿದಲ್ಲಿ ಜಿಲ್ಲಾಡಳಿತ ನೇರ ಹೊಣೆಯಾಗುತ್ತದೆ ಎಂದು ಹೇಳಿದರು. ಜಿಲ್ಲಾಡಳಿತ ಎಚ್ಚೆತ್ತುಕೊಂಡು ಸಂಬಂಧಪಟ್ಟ ಅಧಿಕಾರಿಗಳನ್ನು ಕುಂಭಕರ್ಣ ನಿದ್ರೆಯಿಂದ ಎಬ್ಬಿಸಿ ಕೆಲಸಕ್ಕೆ ಹಚ್ಚಬೇಕೆಂದು 1 ವಾರದಲ್ಲಿ ಸಮಸ್ಯೆ ಇತ್ಯರ್ಥಕ್ಕೆ ಮುಂದಾಗಬೇಕು ಇಲ್ಲವಾದರೆ ಬೃಹತ್ ಪ್ರತಿಭಟನೆ ಮಾಡಲಾಗುವುದು ಎಂದು ಅವರು ಎಚ್ಚರಿಸಿದರು. ಇದೇ ಸಂದರ್ಭದಲ್ಲಿ ಮಾಣಿಕರಡ್ಡಿ ಪಾಟೀಲ್, ಹಣಮಂತ, ಸುನೀಲ್ ಶೆಟ್ಟಿ, ಬನ್ನಪ್ಪ, ನಬಿಸಾಬ್, ಭೀಮರಾಯ, ಪವನ, ಶರಣಪ್ಪ, ಸಾಬಣ್ಣ, ಮರಿಲಿಂಗಪ್ಪ, ಮಲ್ಲಪ್ಪ, ಪ್ರಭು, ಮರೆಪ್ಪ, ಭೀಮಾಶಂಕರ, ರೆಡ್ಡೆಪ್ಪ, ಸತೀಶ, ಮೋನಪ್ಪ, ಭಾಗಪ್ಪ, ಸಿದ್ದಪ್ಪ, ಬನ್ನಪ್ಪ, ಬಸಪ್ಪ, ಮಹಾದೇವಪ್ಪ, ಹಣಮಂತ, ಜಗದೀಶ, ಬನ್ನಪ್ಪ, ಸುರೇಶ, ಚಂದ್ರು, ಶಾಂತಪ್ಪ, ಹಸೇನ, ಗಂಗು, ಅನೀಲ್, ಭೀಮಣ್ಣ, ಮೆಹಬೂಬಸಾಬ್, ಶರಣಪ್ಪ ನಿಂಗಪ್ಪ, ಕಲ್ಲಪ್ಪ, ಶಾಂತಪ್ಪ, ಮಲ್ಲಪ್ಪ, ಮರಗಪ್ಪ, ದೇವಪ್ಪ, ಬನ್ನಪ್ಪ, ಕುಮಾರ, ನರಸಪ್ಪ, ಬೂದೆಪ್ಪ, ಸುರೇಶ ರವಿ, ತಾಯಪ್ಪ, ಭರತ ಪೀರ್ ಮಹ್ಮದ್ , ದೇವಪ್ಪ, ಶಿವಾನಂದ ಸೇರಿದಂತೆ ಸಹಸ್ರಾರು ಸಂಖ್ಯೆಯಲ್ಲಿ ರೈತರು ಭಾಗಿಯಾದರು.


ಉದಯವಾಹಿನಿ ಚಿತ್ರ

**ಜಿಲ್ಲಾಡಳಿತ ಸಂಪೂರ್ಣ ವಿಫಲ**

ಪ್ರವಾಹ ಬಂದ ಮೇಲೆ ಇಲ್ಲಿಯವರೆಗೂ ಸರ್ಕಾರಿ ಬಸ್ ಗಳ ಸಂಚಾರ ಬಂದ್ ಆಗಿದೆ. 2 ಬದಿಯಲ್ಲಿರುವ ರೈತರೇ ಸ್ವಂತ ಹಣದಲ್ಲಿ, ರಸ್ತೆಗೆ ತಾತ್ಕಾಲಿಕ ಮುರಂ ಹಾಕಿಕೊಂಡು ಜಮೀನು ಅಕ್ಕಪಕ್ಕದ ಗ್ರಾಮಗಳಿಗೆ ಟ್ರ್ಯಾಕ್ಟರ್, ಎತ್ತಿನ ಬಂಡಿ, ವಾಹನಗಳ ಮುಖಾಂತರ ಸಂಚಾರಕ್ಕೆ ಅನುವು ಮಾಡಿಕೊಂಡಿದ್ದಾರೆ.
- ಉಮೇಶ ಕೆ. ಮುದ್ನಾಳ ಸಾಮಾಜಿಕ ಹೋರಾಟಗಾರ




# ಗರ್ಲ್‌ಫ್ರೆಂಡ್‌ನ ಅಭಿಮಾನಿಗಳಿಗೆ ಪರಿಚಯಿಸಿದ ಸ್ಟಾರ್ ನಟ

ತೆಲುಗು ನಟ ಬೆಲ್ಲಂಕೊಂಡ ಸಾಯಿ ಶ್ರೀನಿವಾಸ್ ಅವರು ಸೋಮವಾರ ನಿಶ್ಚಿತಾರ್ಥ ಮಾಡಿಕೊಳ್ಳುತ್ತಾರೆ ಎನ್ನುವ ಸುದ್ದಿ ಹರಿದಾಡಿತ್ತು. ಈಗ ಅವರು ತಮ್ಮ ಗರ್ಲ್‌ಫ್ರೆಂಡ್‌ನ ಪರಿಚಯಿಸಿದ್ದಾರೆ.

ತೆಲುಗು ನಟ ಬೆಲ್ಲಂಕೊಂಡ ಸಾಯಿ ಶ್ರೀನಿವಾಸ್ ಅಭಿಮಾನಿಗಳಿಗೆ ಖುಷಿ ಸುದ್ದಿ ನೀಡಿದ್ದಾರೆ. ಅವರು ತಮ್ಮ ಗರ್ಲ್‌ಫ್ರೆಂಡ್‌ನ ಅಭಿಮಾನಿಗಳ ಎದುರು ಪರಿಚಯಿಸಿದ್ದಾರೆ. ಈ ಸಂದರ್ಭದ ಫೋಟೋ ವೈರಲ್ ಆಗಿದೆ. ಬೆಲ್ಲಂಕೊಂಡ ಸಾಯಿ ಶ್ರೀನಿವಾಸ್ ರಹಸ್ಯವಾಗಿ ನಿಶ್ಚಿತಾರ್ಥ ಮಾಡಿಕೊಂಡಿದ್ದಾರೆ ಎಂಬ ಸುದ್ದಿ ಹರಿದಾಡಿತ್ತು. ಈ ಬಗ್ಗೆ ಅವರಿಂದ ಸ್ಪಷ್ಟನೆ ಸಿಗಲಿ ಎಂದು ಫ್ಯಾನ್ಸ್ ಬಯಸಿದ್ದರು. ಕೊನೆಗೂ ಇದಕ್ಕೆ ಉತ್ತರ ಸಿಕ್ಕಿದೆ. ಅವರು ಗರ್ಲ್‌ಫ್ರೆಂಡ್ ಫೋಟೋ ಪೋಸ್ಟ್ ಮಾಡಿದ್ದಾರೆ. ಶ್ರೀನಿವಾಸ್ ಅವರ ಗೆಳತಿ ಹೆಸರು ಕಾವ್ಯಾ ರೆಡ್ಡಿ. ನಿಶ್ಚಿತಾರ್ಥ ಹಾಗೂ ಮದುವೆ ಇನ್ನಷ್ಟೇ ಜರುಗಬೇಕಿದೆ ಎಂದು ಅವರು ಹೇಳಿದ್ದಾರೆ. ತನ್ನವಳನ್ನು ಪರಿಚಯಿಸುತ್ತಿರುವುದಾಗಿ ಅವರು ಕ್ಯಾಪ್ಷನ್ ಅಲ್ಲಿ ಬರೆದುಕೊಂಡಿದ್ದಾರೆ. 'ನನ್ನ ಜೀವನದಲ್ಲಿ ಬಂದಿದ್ದಕ್ಕೆ ಧನ್ಯವಾದ' ಎಂದು ಕಾವ್ಯಾಗೆ ಹೇಳಿದ್ದಾರೆ.

ಇದು ಅನೌನ್ಸ್‌ಮೆಂಟ್ ಮಾಡಲು ಕ್ಲಿಕ್ಕಿಸಿಕೊಂಡ ಫೋಟೋ ಅಷ್ಟೇ ಎಂದು ಅವರು ಹೇಳಿದ್ದಾರೆ. ಕಾವ್ಯಾ ಬಗ್ಗೆ ಹೆಚ್ಚಿನ ಮಾಹಿತಿ ತಿಳಿದು ಬಂದಿಲ್ಲ. ಶ್ರೀನಿವಾಸ್ ಗಿಂತ ಅವರು ಐದು ವರ್ಷ ಸಣ್ಣವರು.



## ಮಹೇಶ್ ಫ್ಯಾನ್ಸ್ ಗರಂ

## ಕ್ಷಮೆ ಕೇಳಿದ ಪವನ್



ಪವನ್ ಕಲ್ಯಾಣ್ ಮತ್ತು ಮಹೇಶ್ ಬಾಬು ಅಭಿಮಾನಿಗಳ ನಡುವೆ ಕಿರಿಕ್ ಶುರುವಾಗಿದೆ. ಇದಕ್ಕೆ ಕಾರಣ ಆಗಿರುವುದು ಪವನ್ ಕಲ್ಯಾಣ್ ಅವರ ಆಪ್ತ ನಿರ್ದೇಶಕರೊಬ್ಬರ ಟ್ವೀಟ್. ಬಿಡುಗಡೆ ಆಗಲಿರುವ 'ಉಸ್ತಾದ್ ಭಗತ್ ಸಿಂಗ್' ಸಿನಿಮಾದ ನಿರ್ದೇಶಕ ಮಾಡಿರುವ ಟ್ವೀಟ್‌ನಿಂದಾಗಿ ಮಹೇಶ್ ಬಾಬು ಅಭಿಮಾನಿಗಳು ಬೇಸರಗೊಂಡಿದ್ದಾರೆ. ತೆಲುಗು ರಾಜ್ಯಗಳಲ್ಲಿ ಫ್ಯಾನ್ಸ್ ವಾರ್‌ಗಳು ಸಾಮಾನ್ಯ. ಕರ್ನಾಟಕಕ್ಕೆ ಹೋಲಿಸಿದರೆ ತುಸು ಹೆಚ್ಚೇ ಎನ್ನಬಹುದು. ಮೆಗಾಸ್ಟಾರ್ ಅಭಿಮಾನಿಗಳು ಮತ್ತು ನಂದಮೂರಿ ಅಭಿಮಾನಿಗಳ ನಡುವಿನ ಫ್ಯಾನ್ಸ್ ವಾರ್‌ಗೆ ದಶಕಗಳ ಇತಿಹಾಸವಿದೆ. ಇವುಗಳ ನಡುವೆ ಜೂ ಎನ್‌ಟಿಆರ್ ತ ಪವನ್ ಕಲ್ಯಾಣ್, ಪವನ್ ಕಲ್ಯಾಣ್ v/s ಮಹೇಶ್ ಬಾಬು ಹೀಗೆ ಬೇರೆ ಬೇರೆ ಫ್ಯಾನ್ಸ್ ವಾರ್‌ಗಳು ಆಗಾಗ್ಗೆ ನಡೆಯುತ್ತಲೇ ಇರುತ್ತವೆ. ಇದೀಗ ಮತ್ತೊಮ್ಮೆ ಪವನ್ ಕಲ್ಯಾಣ್ ಮತ್ತು ಮಹೇಶ್ ಬಾಬು ಅಭಿಮಾನಿಗಳ ನಡುವೆ ಕಿರಿಕ್ ಶುರುವಾಗಿದೆ.

ಇದಕ್ಕೆ ಕಾರಣ ಆಗಿರುವುದು ಪವನ್ ಕಲ್ಯಾಣ್ ಅವರ ಆಪ್ತ ನಿರ್ದೇಶಕರೊಬ್ಬರ ಟ್ವೀಟ್. ಪವನ್ ಕಲ್ಯಾಣ್ ನಟನೆಯ 'ಉಸ್ತಾದ್ ಭಗತ್ ಸಿಂಗ್' ಸಿನಿಮಾ ಬಿಡುಗಡೆ ಆಗುತ್ತಿದೆ. ಮಾರ್ಚ್ 19 ರಂದು 'ಧುರಂಧರ್ 2' ಸಿನಿಮಾದ ಎದುರು ಅದು ರಿಲೀಸ್ ಆಗುತ್ತಿದೆ. ಈ ಸಿನಿಮಾವನ್ನು ಹರೀಶ್ ಶಂಕರ್ ನಿರ್ದೇಶನ ಮಾಡಿದ್ದು, ಪವನ್ ಕಲ್ಯಾಣ್‌ರ ಆಪ್ತ ನಿರ್ದೇಶಕರುಗಳಲ್ಲಿ ಇವರೂ ಒಬ್ಬರಾಗಿದ್ದಾರೆ. ಸಹಜವಾಗಿಯೇ ಪವನ್ ಕಲ್ಯಾಣ್ ಅಭಿಮಾನಿಗಳು ಸಿನಿಮಾ ನೋಡಲು ಉತ್ಸುಕರಾಗಿದ್ದಾರೆ.

ಇತ್ತೀಚೆಗೆ ಪವನ್ ಕಲ್ಯಾಣ್ ಅಭಿಮಾನಿಯೊಬ್ಬ ಟ್ವೀಟ್ ಮಾಡಿ, ಮಹೇಶ್ ಬಾಬು ಸಿನಿಮಾಗಳ ರೆಕಾರ್ಡ್ ಅನ್ನು 'ಉಸ್ತಾದ್ ಭಗತ್ ಸಿಂಗ್' ಸಿನಿಮಾ ಬ್ರೇಕ್ ಮಾಡಬೇಕು ಎಂದಿದ್ದ. ಮಹೇಶ್ ಬಾಬು ಎಂದು ನೇರವಾಗಿ ಹೆಸರು ಬಳಸುವ ಬದಲಿಗೆ ಮಹೇಶ್ ಬಾಬು ಅಡ್ಡ ಹೆಸರಾದ 'ಬಾಬ್' ಎಂದು ಬರೆದಿದ್ದ. ಆ ಟ್ವೀಟ್‌ಗೆ ಪ್ರತಿಕ್ರಿಯೆ ನೀಡಿದ್ದ ಹರೀಶ್ ಶಂಕರ್ 'ತಥಾಸ್ತು' ಎಂದಿದ್ದರು. ಆ ಮೂಲಕ ಮಹೇಶ್ ಬಾಬು ರೆಕಾರ್ಡ್‌ಗಳನ್ನು ಬ್ರೇಕ್ ಮಾಡುತ್ತೇನೆ ಎಂದಿದ್ದರು. ಹರೀಶ್ ಶಂಕರ್ ಅವರ ಈ ಟ್ವೀಟ್ ಮಹೇಶ್ ಅಭಿಮಾನಿಗಳನ್ನು ಕೆರಳಿಸಿದೆ.

ಆದರೆ ಶೀಘ್ರವೇ ತಮ್ಮ ತಪ್ಪು ತಿಳಿದುಕೊಂಡ ಹರೀಶ್ ಶಂಕರ್ ಕೂಡಲೇ ತಮ್ಮ 'ತಥಾಸ್ತು' ಟ್ವೀಟ್ ಅನ್ನು ಡಿಲೀಟ್ ಮಾಡಿದ್ದಲ್ಲದೆ, ತಾವು ಟ್ವೀಟ್ ಅನ್ನು ಪೂರ್ಣವಾಗಿ ಓದದೆ ಹಾಗೂ ಸರಿಯಾಗಿ ಅರ್ಥೈಸಿಕೊಳ್ಳದೆ ಪ್ರತಿಕ್ರಿಯೆ ನೀಡಿದ್ದಾಗಿ ಹೇಳಿದ್ದಾರೆ. ಅಲ್ಲದೆ ತಮ್ಮ ಟ್ವೀಟ್‌ನಿಂದ ಮಹೇಶ್ ಬಾಬು ಅಭಿಮಾನಿಗಳಿಗೆ ಬೇಸರ ಉಂಟಾಗಿದ್ದರೆ ಕ್ಷಮೆ ಕೇಳುವುದಾಗಿ ಸಹ ಹರೀಶ್ ಶಂಕರ್ ಹೇಳಿದ್ದಾರೆ. ಟಾಲಿವುಡ್ ಖ್ಯಾತ ನಿರ್ದೇಶಕ ಹರೀಶ್ ಶಂಕರ್ ಅವರು ತಮ್ಮ ಮುಂಬರುವ ಚಿತ್ರ, 'ಉಸ್ತಾದ್ ಭಗತ್ ಸಿಂಗ್' (ಪವನ್ ಕಲ್ಯಾಣ್ ನಟನೆಯ ಸಿನಿಮಾ) ಪ್ರಚಾರದ ಸಂದರ್ಭದಲ್ಲಿ ಮಾಡಿದ್ದ ಒಂದು ಟ್ವೀಟ್ ಭಾರೀ ವಿವಾದಕ್ಕೆ ಕಾರಣವಾಗಿತ್ತು.

## ನಮ್ಮ ಸಂಬಂಧ ಆ ರೀತಿ ಇಲ್ಲ

## ಮಲೈಕಾ ಫೋಟೋ ವೈರಲ್

ಮಲೈಕಾ ಅರೋರಾ ಮತ್ತು ಸೋರಬ್ ಬೇಡಿ ಸಿಕ್ಕಾಪಟ್ಟೆ ಕ್ಲೋಸ್ ಆಗಿರುವ ಫೋಟೋಗಳು ವೈರಲ್ ಆಗಿವೆ. ಹಾಗಾಗಿ ಅವರಿಬ್ಬರ ಸಂಬಂಧದ ಬಗ್ಗೆ ಜನರಿಗೆ ಅನುಮಾನ ಮೂಡಿದೆ. ನೆಟ್ಟಿಗರು ಕೆಟ್ಟ ಕಮೆಂಟ್ ಮಾಡಿದ್ದಾರೆ. ಟ್ರೋಲ್ ಕಾಟ ಜಾಸ್ತಿ ಆದ ಬಳಿಕ ಸೋರಬ್ ಬೇಡಿ ಅವರು ಮಲೈಕಾ ಜೊತೆಗಿನ ಸಂಬಂಧಕ್ಕೆ ಸ್ಪಷ್ಟನೆ ನೀಡಿದ್ದಾರೆ.

ಬಾಲಿವುಡ್‌ನ ಗ್ಲಾಮರಸ್ ನಟಿ ಮಲೈಕಾ ಅರೋರಾ ಮತ್ತು ಸ್ಪರ್ಧಿ ಸೋರಬ್ ಬೇಡಿ ಡೇಟಿಂಗ್ ಮಾಡುತ್ತಿದ್ದಾರೆ ಎಂಬ ವದಂತಿ ಕಳೆದ ಕೆಲವು ದಿನಗಳಿಂದ ಸೋಷಿಯಲ್ ಮೀಡಿಯಾದಲ್ಲಿ ಸಖತ್ ಸದ್ದು ಮಾಡುತ್ತಿತ್ತು. ಇತ್ತೀಚೆಗೆ ಅವರಿಬ್ಬರು ಒಟ್ಟಿಗೆ ಕಾಣಿಸಿಕೊಂಡ ಫೋಟೋಗಳು ವೈರಲ್ ಆದ ಬೆನ್ನಲ್ಲೇ ಈ ಚರ್ಚೆ ಶುರುವಾಗಿತ್ತು. ಈಗ ಈ ಎಲ್ಲಾ ವದಂತಿಗಳಿಗೆ ಸೋರಬ್ ಬೇಡಿ ತೆರೆ ಎಳೆದಿದ್ದಾರೆ. 'ನಾವಿಬ್ಬರೂ ಕೇವಲ ಸ್ನೇಹಿತರು' ಎಂದು ಅವರು ಹೇಳಿದ್ದಾರೆ. ಟ್ರೋಲ್ ಮಾಡುವವರ ವಿರುದ್ಧ ಸೋರಬ್ ಬೇಡಿ ಗರಂ ಆಗಿದ್ದಾರೆ. ಈ ಕುರಿತು ಮಾಧ್ಯಮವೊಂದರ ಜೊತೆ ಮಾತನಾಡಿದ ಸೋರಬ್ ಬೇಡಿ, 'ನಾವಿಬ್ಬರೂ ಕೇವಲ ಸ್ನೇಹಿತರು ಅಷ್ಟೇ. ಜನರು ಯಾವುದನ್ನಾದರೂ ಕಾಮೆಂಟ್ ಮಾಡುವ ಮೊದಲು ಯೋಚಿಸಬೇಕು. ನಮಗೆ ಕಳೆದ 4 ವರ್ಷಗಳಿಂದ ಪರಿಚಯವಿದೆ. 2022ರಲ್ಲಿ ನನ್ನ ಮಾಡೆಲಿಂಗ್ ದಿನಗಳಲ್ಲಿ ನಾನು ಮೊದಲ ಬಾರಿಗೆ ಮಲೈಕಾರನ್ನು ಭೇಟಿಯಾಗಿದ್ದೆ' ಎಂದು ಸ್ಪಷ್ಟಪಡಿಸಿದ್ದಾರೆ.

ಮಹಿಳೆಯರ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ಅಸಭ್ಯ ಕಾಮೆಂಟ್‌ಗಳ ಬಗ್ಗೆ ಸೋರಬ್ ತೀವ್ರ ಬೇಸರ ವ್ಯಕ್ತಪಡಿಸಿದ್ದಾರೆ. 'ಜನರು ತಮಗೆ ಅನಿಸಿದ್ದೇ ಸತ್ಯ ಎಂದು ಬಿಂಬಿಸುತ್ತಿದ್ದಾರೆ. ನಾವು ಈ ಹಿಂದೆಯೂ ಹಲವು ಬಾರಿ ಪಾರ್ಟಿ ಮಾಡಿದ್ದೇವೆ. ನಾನು ಅವರ ಜೊತೆಗಿನ ಫೋಟೋ-ವಿಡಿಯೋಗಳನ್ನು ಈ ಮೊದಲೇ ಹಂಚಿಕೊಂಡಿದ್ದೆ. ಆಗ ನಾನು ಯಾರಿಗೂ ಪರಿಚಯವಿರಲಿಲ್ಲ, ಆದರೆ ಇಂದು ಜನರು ನನ್ನನ್ನು ಗುರುತಿಸುತ್ತಿದ್ದಾರೆ ಅಷ್ಟೇ ವ್ಯತ್ಯಾಸ' ಎಂದಿದ್ದಾರೆ. 'ನಮ್ಮ ಬಗ್ಗೆ ಮತ್ತು ಮಲೈಕಾ ಬಗ್ಗೆ ಬರುತ್ತಿರುವ ಕೀಳುಮಟ್ಟದ ಕಾಮೆಂಟ್‌ಗಳನ್ನು ಓದಿದಾಗ ನೋವಾಗುತ್ತದೆ. ಅವರೊಬ್ಬ ಮಹಿಳೆ, ಅವರ ಬಗ್ಗೆ ಇಷ್ಟು ಕೀಳಾಗಿ ಮಾತನಾಡಲು ಹೇಗೆ ಸಾಧ್ಯ ನಿಮ್ಮ ಮನೆಯಲ್ಲೂ ಸಹೋದರಿ ಅಥವಾ ಮಗಳು ಇರುತ್ತಾರೆ ಅಲ್ವೇ ಸತ್ಯ ತಿಳಿಯದೆ ಮಾತನಾಡುವುದು ಸರಿಯಲ್ಲ' ಎಂದು ಸೋರಬ್ ಬೇಡಿ ಕಿಡಿಕಾರಿದ್ದಾರೆ.



## ಕಂಗನಾ ಸಿನಿಮಾಕ್ಕೆ ಆ ಕರಾಳ ಘಟನೆ ಸ್ಫೂರ್ತಿ


ಸಂಸದೆಯೂ ಆಗಿರುವ ನಟಿ ಕಂಗನಾ ರನೌತ್, ಕಳೆದ ಕೆಲವಾರು ವರ್ಷಗಳಿಂದಲೂ ಮಹಿಳಾ ಪ್ರಧಾನ ಸಿನಿಮಾಗಳಲ್ಲಿ ಮಾತ್ರವೇ ನಟಿಸುತ್ತಿದ್ದಾರೆ. ಅದರಲ್ಲೂ ಐತಿಹಾಸಿಕ, ಸಾಮಾಜಿಕ ಕತೆಯುಳ್ಳ ಸಿನಿಮಾಗಳನ್ನೇ ಆಯ್ಕೆ ಮಾಡಿಕೊಳ್ಳುತ್ತಿದ್ದಾರೆ. ಇದೀಗ ಕಂಗನಾ ಹೊಸದೊಂದು ಸಿನಿಮಾನಲ್ಲಿ ನಟಿಸಲಿದ್ದು, ಈ ಸಿನಿಮಾ ಮುಂಬೈನಲ್ಲಿ ನಡೆದ ಧಾರುಣ ಘಟನೆಯೊಂದರಿಂದ ಸ್ಫೂರ್ತಿ ಪಡೆದಿದೆ. ಕಂಗನಾ ರನೌತ್, ಬಾಲಿವುಡ್‌ನ ಪ್ರತಿಭಾವಂತ ನಟಿ. ನಟನೆಗೆ ನಾಲ್ಕು ರಾಷ್ಟ್ರಪ್ರಶಸ್ತಿ ಗೆದ್ದಿರುವ ನಟಿ ಕಂಗನಾ ರನೌತ್. ಅತಿ ಹೆಚ್ಚು ರಾಷ್ಟ್ರಪ್ರಶಸ್ತಿ ಪಡೆದ ಭಾರತೀಯ ನಟಿಯರ ಪಟ್ಟಿಯಲ್ಲಿ ಎರಡನೇ ಸ್ಥಾನದಲ್ಲಿದ್ದಾರೆ. ಐದು ಪ್ರಶಸ್ತಿಗಳನ್ನು ಪಡೆದಿರುವ ಶಬಾನಾ ಆಜ್ಮಿ ಮೊದಲ ಸ್ಥಾನದಲ್ಲಿದ್ದಾರೆ. ಸಂಸದೆಯೂ ಆಗಿರುವ ನಟಿ ಕಂಗನಾ ರನೌತ್, ಕಳೆದ ಕೆಲವಾರು ವರ್ಷಗಳಿಂದಲೂ ಮಹಿಳಾ ಪ್ರಧಾನ ಸಿನಿಮಾಗಳಲ್ಲಿ ಮಾತ್ರವೇ ನಟಿಸುತ್ತಿದ್ದಾರೆ.

ಅದರಲ್ಲೂ ಐತಿಹಾಸಿಕ, ಸಾಮಾಜಿಕ ಕತೆಯುಳ್ಳ ಸಿನಿಮಾಗಳನ್ನೇ ಆಯ್ಕೆ ಮಾಡಿಕೊಳ್ಳುತ್ತಿದ್ದಾರೆ. ಇದೀಗ ಕಂಗನಾ ಹೊಸದೊಂದು ಸಿನಿಮಾನಲ್ಲಿ ನಟಿಸಲಿದ್ದು, ಈ ಸಿನಿಮಾ ಮುಂಬೈನಲ್ಲಿ ನಡೆದ ಧಾರುಣ ಘಟನೆಯೊಂದರಿಂದ ಸ್ಫೂರ್ತಿ ಪಡೆದಿದೆ. 2008 ರ ಮುಂಬೈ ದಾಳಿಯ ಬಗೆಗಿನ ಕತೆಯನ್ನು ಹೊಂದಿರುವ ಸಿನಿಮಾನಲ್ಲಿ ಕಂಗನಾ ರನೌತ್ ನಟಿಸಲಿದ್ದಾರೆ. ಆ ಕರಾಳ ದಿನದಂದು ದುರುಳ ಭಯೋತ್ಪಾದಕರು ರೈಲ್ವೆ ನಿಲ್ದಾಣ, ರೆಸ್ಟೋರೆಂಟ್, ಐಶಾರಾಮಿ ಹೋಟೆಲ್‌ಗಳ ಜೊತೆಗೆ ಆಸ್ಪತ್ರೆಯೊಂದರ ಮೇಲೂ ಸಹ ದಾಳಿ ಮಾಡಿದ್ದರು. ಆಸ್ಪತ್ರೆಯಲ್ಲಿ ಗುಂಡಿನ ಸುರಿಮಳೆಯನ್ನೇ ಸುರಿಸಿದ್ದರು. ಆಸ್ಪತ್ರೆಯ ಮೇಲಿನ ದಾಳಿಯ ಘಟನೆಯನ್ನು ಆಧರಿಸಿದೆ.

## ದೇವರ ಚಿತ್ರವನ್ನು ಕಾಲಿಗೆ ತಾಗಿಸಿದ ರಶ್ಮಿಕಾ

ಪ್ಯಾನ್ ಇಂಡಿಯಾ ಸ್ಟಾರ್ ರಶ್ಮಿಕಾ ಮಂದಣ್ಣ ಮತ್ತು ಟಾಲಿವುಡ್ ನಟ ವಿಜಯ್ ದೇವರಕೊಂಡ ಅವರ ವಿವಾಹದ ಸಂಭ್ರಮ ಜೋರಾಗಿತ್ತು. ಇತ್ತೀಚೆಗಷ್ಟೇ ಈ ಜೋಡಿಯು ತಮ್ಮ ಮೆಹಂದಿ ಶಾಸ್ತ್ರದ ಸುಂದರ ಚಿತ್ರಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಂಡಿದ್ದರು. ಆದರೆ, ಈ ಖುಷಿಯ ನಡುವೆಯೇ ರಶ್ಮಿಕಾ ತೊಟ್ಟಿದ್ದ ಉಡುಪಿನ ವಿನ್ಯಾಸ ಈಗ ವಿವಾದಕ್ಕೆ ಕಾರಣವಾಗಿದೆ.

ಲಕ್ಷ್ಮಿ ದೇವಿಯ ಚಿತ್ರವಿರುವ ಉಡುಪು ಧರಿಸಿದ್ದಕ್ಕೆ ಕೆಲವು ನೆಟ್ಟಿಗರು ಆಕ್ರೋಶ ವ್ಯಕ್ತ ಪಡಿಸಿದ್ದಾರೆ. ಆದರೆ ರಶ್ಮಿಕಾ ಮಂದಣ್ಣ ಅವರ ಅಪ್ಪಟ ಅಭಿಮಾನಿಗಳು ನಟಿಯ ಬೆಂಬಲಕ್ಕೆ ನಿಂತಿದ್ದಾರೆ.



ಇನ್‌ಸ್ಟಾಗ್ರಾಮ್‌ನಲ್ಲಿ ರಶ್ಮಿಕಾ ಮತ್ತು ವಿಜಯ್ ಹಂಚಿಕೊಂಡ ಫೋಟೋಗಳಲ್ಲಿ ರಶ್ಮಿಕಾ ಆಕರ್ಷಕವಾಗಿ ಕಾಣುತ್ತಿದ್ದಾರೆ.ಆದರೆ ಅವರು ತೊಟ್ಟಿದ್ದ ಉಡುಪಿನ ಮೇಲೆ ಲಕ್ಷ್ಮಿ ದೇವಿಯ ಚಿತ್ರ ಇರುವುದನ್ನು ಗಮನಿಸಿದ ಹಲವು ನೆಟ್ಟಿಗರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ದೇವತೆಗಳ ಚಿತ್ರಗಳನ್ನು ಉಡುಪಿನ ಕೆಳಭಾಗದಲ್ಲಿ ಅಥವಾ ಸೊಂಟದ ಭಾಗದಲ್ಲಿ ಬಳಸುವುದು ದೇವರಿಗೆ ಮಾಡುವ ಅಪಮಾನ ಎಂದು ಕೆಲವರು ಕಿಡಿಕಾರಿದ್ದಾರೆ. ಜಾಲತಾಣದಲ್ಲಿ ಒಬ್ಬ ಬಳಕೆದಾರರು, 'ದೇವರು ಮತ್ತು ದೇವತೆಗಳು ನಿಮ್ಮ ಉಡುಪಿಗಾಗಿ ಇರುವವರಲ್ಲ.

ಇದೊಂದು ಅತ್ಯಂತ ಕೆಟ್ಟ ಡ್ರೆಸ್' ಎಂದು ಕಮೆಂಟ್ ಮಾಡಿದ್ದಾರೆ. 'ದೇವಿಯ ಚಿತ್ರವಿರುವ ಬಟ್ಟೆಯನ್ನು ಕಾಲಿನ ಹತ್ತಿರ ಮತ್ತು ಸೊಂಟಕ್ಕೆ ಸುತ್ತಿಕೊಳ್ಳುವುದು ದೇವತೆಗೆ ಮಾಡುವ ಅಗೌರವ' ಎಂದು ಆಕ್ಷೇಪಿಸಿದ್ದಾರೆ. ಈ ಬಗ್ಗೆ ಪರ-ವಿರೋಧದ ಚರ್ಚೆ ನಡೆದಿದೆ.

## ಭಾರತ ತಂಡದೊಂದಿಗಿನ ಅಂತರ ಬೆಳೀತಾಹೋಗ್ತಿದೆ!

ಟಿ20 ವಿಶ್ವಕಪ್‌ನಲ್ಲಿ ಅಮೋಘ ಪ್ರದರ್ಶನ ನೀಡಿದ ಟೀಮ್ ಇಂಡಿಯಾ ಚಾಂಪಿಯನ್ ಪಟ್ಟ ಅಲಂಕರಿಸಿದೆ. ಈ ಮೂಲಕ ಟಿ20 ವಿಶ್ವಕಪ್ ಇತಿಹಾಸದಲ್ಲಿ ಮೂರು ಬಾರಿ ಚಾಂಪಿಯನ್ ಪಟ್ಟ ಅಲಂಕರಿಸಿದ ಮೊದಲ ತಂಡ ಎಂಬ ವಿಶ್ವ ದಾಖಲೆಯನ್ನು ನಿರ್ಮಿಸಿದೆ. ಟೀಮ್ ಇಂಡಿಯಾ ಬ್ಯಾಕ್ ಟು ಬ್ಯಾಕ್ ಟಿ20 ವಿಶ್ವಕಪ್ ಗೆದ್ದುಕೊಂಡಿದೆ. 2024 ರಲ್ಲಿ ಚಾಂಪಿಯನ್ ಪಟ್ಟ ಅಲಂಕರಿಸಿದ್ದ ಭಾರತ ತಂಡವು ಇದೀಗ 2026 ರಲ್ಲೂ ವಿಶ್ವಕಪ್ ಕಿರೀಟ ಮುಡಿಗೇರಿಸಿಕೊಂಡಿದೆ. ಈ ಮೂಲಕ ಸತತವಾಗಿ ಟಿ20 ವಿಶ್ವಕಪ್ ಗೆದ್ದ ಮೊದಲ ತಂಡ ಎನಿಸಿಕೊಂಡಿದೆ. ಈ ಅಮೋಘ ಸಾಧನೆಯನ್ನು ಇಂಗ್ಲೆಂಡ್‌ನ ಮಾಜಿ ವೇಗಿ ಸ್ಟುವರ್ಟ್ ಬ್ರಾಡ್ ವಿಶ್ಲೇಷಿಸಿದ್ದು, ಈ ವೇಳೆ ನೀಡಿದ ಹೇಳಿಕೆಗಳು ಇದೀಗ ಎಲ್ಲರ ಗಮನ ಸೆಳೆಯುತ್ತಿದೆ.

ಭಾರತ ತಂಡ ಮತ್ತು ಪ್ರಪಂಚದ ಉಳಿದ ಭಾಗಗಳ ತಂಡಗಳ ನಡುವಿನ ಅಂತರವು ದೊಡ್ಡದಾಗುತ್ತಲೇ ಇದೆ. ಈ ಮೂಲಕ ಟೀಮ್ ಇಂಡಿಯಾ ವಿಶ್ವ ಕ್ರಿಕೆಟ್‌ನಲ್ಲಿ ಛಾಪು ಹೊತ್ತಿದ್ದಾರೆ. ಈ ಅಂತರ ಬೆಳೆಯುತ್ತಾ ಹೋಗುತ್ತಿರಲು ಸ್ಟುವರ್ಟ್ ಬ್ರಾಡ್ ಕೆಲ ಕಾರಣಗಳನ್ನು ಮುಂದಿಟ್ಟಿದ್ದಾರೆ.

**ತಂಡದ ಆಳ:** ಭಾರತದ ಬೆಂಚ್ ಸ್ಟ್ರೆಂತ್ ಎಷ್ಟು ಪ್ರಬಲವಾಗಿದೆಯೆಂದರೆ, ಭಾರತದ ಯಾವುದೇ ಆಟಗಾರ ವಿಶ್ವದ ಇತರ ಯಾವುದೇ ತಂಡದಲ್ಲಿ ನೇರವಾಗಿ ಸ್ಥಾನ ಪಡೆಯಬಲ್ಲರು ಎಂದು ಸ್ಟುವರ್ಟ್ ಬ್ರಾಡ್ ಅಭಿಪ್ರಾಯಪಟ್ಟಿದ್ದಾರೆ.

**ಐಪಿಎಲ್ ಪ್ರಭಾವ:** ಯುವ ಆಟಗಾರರು ಪದಾರ್ಪಣೆ ಮಾಡುವ ಮೊದಲೇ ವಿಶ್ವದ ಶ್ರೇಷ್ಠ ಆಟಗಾರರ ವಿರುದ್ಧ ಆಡಿ ಒತ್ತಡವನ್ನು



ನಿಭಾಯಿಸುವುದನ್ನು ಕಲಿಯುತ್ತಿದ್ದಾರೆ. ಇದು ಭಾರತ ಮತ್ತು ಉಳಿದ ದೇಶಗಳ ನಡುವಿನ ವ್ಯತ್ಯಾಸವನ್ನು ಹೆಚ್ಚಿಸುತ್ತಿದೆ.

**ಜಸ್‌ಪ್ರೀತ್ ಬುಮ್ರಾ:** ಜಸ್‌ಪ್ರೀತ್ ಬುಮ್ರಾ ಅವರಂತಹ ಬೌಲರ್‌ಗಳು ಕ್ರಿಕೆಟ್ ಇತಿಹಾಸದಲ್ಲೇ ಶ್ರೇಷ್ಠರು ಎಂದು ಬಣ್ಣಿಸಿದ ಬ್ರಾಡ್, ಭಾರತದ ಬೌಲಿಂಗ್ ವಿಭಾಗವು ಈಗ ಅಭೇದ್ಯವಾಗಿದೆ ಎಂದಿದ್ದಾರೆ. ಇನ್ನು ಟೀಮ್ ಇಂಡಿಯಾ ಬಲಿಷ್ಠವಾಗಲು ಐಪಿಎಲ್ ಪ್ರಮುಖ ಕಾರಣ ಎಂದಿರುವ ಸ್ಟುವರ್ಟ್ ಬ್ರಾಡ್, ಒಂದೆರಡು ಪಂದ್ಯಗಳಲ್ಲಿ ಸರಿಯಾಗಿ ಆಡದಿದ್ದರೆ ನಿಮ್ಮ ಮೇಲೆ ಪ್ರಶ್ನೆಗಳು ಏಳುತ್ತವೆ. ಹೀಗಾಗಿ ನೀವು ಅಂತರಾಷ್ಟ್ರೀಯ ಕ್ರಿಕೆಟ್ ಆಡುವ ಮೊದಲೇ ಅಂತರಾಷ್ಟ್ರೀಯ ಮಟ್ಟದ ಒತ್ತಡಕ್ಕೆ ಒಗ್ಗಿಕೊಂಡಿರುತ್ತೀರಿ. ಇದಕ್ಕೆಲ್ಲಾ ಮುಖ್ಯ ಕಾರಣ ಐಪಿಎಲ್ ಎಂದು ಭಾವಿಸುತ್ತೇನೆ.

ಬೃಹತ್ ಪ್ರೇಕ್ಷಕರ ಮುಂದೆ ಮತ್ತು ಹೆಚ್ಚಿನ ನಿರೀಕ್ಷೆಗಳ ನಡುವೆ ಆಡುವ ಈ ಅನುಭವವು ಭಾರತೀಯ ಆಟಗಾರರಿಗೆ ದೊಡ್ಡ ಬಲವಾಗಿದೆ. ಈ ಎಲ್ಲಾ ಅನುಭವಗಳೊಂದಿಗೆ ಯುವ ಆಟಗಾರರು ಟೀಮ್ ಇಂಡಿಯಾಗೆ ಪಾದರ್ಪಣೆ ಮಾಡುತ್ತಿದ್ದಾರೆ. ಇದುವೇ ಇತರೆ ತಂಡಗಳಿಂದ ಟೀಮ್ ಇಂಡಿಯಾವನ್ನು ಭಿನ್ನವಾಗಿಸಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಅಷ್ಟೇ ಅಲ್ಲದೆ ಟಿ20 ವಿಶ್ವಕಪ್ ಗೆದ್ದ ಭಾರತ ತಂಡವನ್ನೇ ನೋಡಿ, ಆ ತಂಡದಲ್ಲಿ ಯಶಸ್ವಿ ಜೈಸ್ವಾಲ್, ಶುಭ್‌ಮನ್ ಗಿಲ್, ಮತ್ತು ರಿಷಭ್ ಪಂತ್ ಅವರಂತಹ ಶ್ರೇಷ್ಠ ಆಟಗಾರರು ಇಲ್ಲ. ಇದು ಟೀಮ್ ಇಂಡಿಯಾದ ಸ್ಟ್ರೆಂತ್ ಅನ್ನು ಎತ್ತಿ ತೋರಿಸುತ್ತದೆ. ಯಶಸ್ವಿ ಜೈಸ್ವಾಲ್ ಟೆಸ್ಟ್ ಮತ್ತು ಟಿ20 ಎರಡರಲ್ಲೂ ಅದ್ಭುತ ದಾಖಲೆ ಹೊಂದಿದ್ದರೂ ಸಹ ಅವರಿಗೆ ಭಾರತದ ಈ ತಂಡದಲ್ಲಿ ಸ್ಥಾನ ಸಿಗುತ್ತಿಲ್ಲ ಎನ್ನುವುದು ಭಾರತದ ಪ್ರತಿಭೆಯ ಅಗಾಧತೆಗೆ ಸಾಕ್ಷಿ ಎಂದು ಸ್ಟುವರ್ಟ್ ಬ್ರಾಡ್ ಅಭಿಪ್ರಾಯಪಟ್ಟಿದ್ದಾರೆ. ಇನ್ನು ಅನುಭವಿ ಆಟಗಾರನಾಗಿ ಭಾರತ ತಂಡದಲ್ಲಿರುವ ಹಾರ್ದಿಕ್ ಪಾಂಡ್ಯ ''ಅತ್ಯಂತ ಅಪಾಯಕಾರಿ ಆಟಗಾರ'' ಎಂದು ಬಣ್ಣಿಸಿದ್ದಾರೆ. ಪಾಂಡ್ಯ ಅವರಲ್ಲಿರುವ ಆತ್ಮವಿಶ್ವಾಸ ಮತ್ತು ಅತಿ ಸುಲಭವಾಗಿ ಸಿಕ್ಸರ್ ಹೊಡೆಯುವ ಸಾಮರ್ಥ್ಯವು ಯಾವುದೇ ತಂಡಕ್ಕೆ ಕಂಟಕವಾಗಬಲ್ಲದು ಎಂದು ಹೇಳಿದ್ದಾರೆ.

ಹಾಗೆಯೇ ಮೊದಲೇ ಹೇಳಿದಂತೆ ಜಸ್‌ಪ್ರೀತ್ ಬುಮ್ರಾ ಟೀಮ್ ಇಂಡಿಯಾ ಪಾಲಿನ ಗೇಮ್ ಚೇಂಜರ್. ಅವರಂತಹ ಬೌಲರ್ ತಂಡದಲ್ಲಿರುವುದು ಟೀಮ್ ಇಂಡಿಯಾದ ಬಲವನ್ನು ಮತ್ತಷ್ಟು ಹೆಚ್ಚಿಸಿದೆ. ಈ ಕಾರಣಗಳಿಂದಾಗಿ ಭಾರತ ಮತ್ತು ಪ್ರಪಂಚದ ಇತರ ದೇಶಗಳ ನಡುವಿನ ಅಂತರವು ವರ್ಷದಿಂದ ವರ್ಷಕ್ಕೆ ಹೆಚ್ಚಾಗುತ್ತಲೇ ಇದೆ.

## ಬಾಬರ್‌ನ ಕೈಬಿಟ್ಟಿಲ್ಲ

ಪಾಕಿಸ್ತಾನ್ ಮತ್ತು ಬಾಂಗ್ಲಾದೇಶ್ ನಡುವಣ ಏಕದಿನ ಸರಣಿಯು ಮಾರ್ಚ್ 11 ರಿಂದ ಶುರುವಾಗಲಿದೆ.

ಬಾಂಗ್ಲಾದಲ್ಲಿ ನಡೆಯಲಿರುವ ಈ ಟೂರ್ನಿಯಲ್ಲಿ ಒಟ್ಟು 3 ಏಕದಿನ ಪಂದ್ಯಗಳನ್ನಾಡಲಾಗುತ್ತದೆ. ಆದರೆ ಈ ಸರಣಿಗೆ ಆಯ್ಕೆ ಮಾಡಲಾದ ತಂಡದಲ್ಲಿ ಸ್ಟಾರ್ ಬ್ಯಾಟರ್ ಬಾಬರ್ ಆಝಂಗೆ ಸ್ಥಾನ ನೀಡಲಾಗಿಲ್ಲ. ಟಿ20 ವಿಶ್ವಕಪ್‌ನಲ್ಲಿ ಅತ್ಯಂತ ಹೀನಾಯ ಪ್ರದರ್ಶನ ನೀಡಿದ್ದ ಪಾಕಿಸ್ತಾನ್ ತಂಡವು ಇದೀಗ ಬಾಂಗ್ಲಾದೇಶ್ ವಿರುದ್ಧದ ಏಕದಿನ ಸರಣಿಗಾಗಿ ಸಜ್ಜಾಗಿದೆ. ಮೂರು ಪಂದ್ಯಗಳ ಈ ಏಕದಿನ ಸರಣಿಗೆ ಆಯ್ಕೆ ಮಾಡಲಾದ ತಂಡದಲ್ಲಿ ಬಾಬರ್ ಆಝಂಗೆ ಸ್ಥಾನ ನೀಡಲಾಗಿಲ್ಲ ಎಂಬುದು ವಿಶೇಷ. ಟಿ20 ವಿಶ್ವಕಪ್‌ನಲ್ಲಿನ ಕಳಪೆ ಪ್ರದರ್ಶನದ ಹಿನ್ನಲೆಯಲ್ಲಿ ಬಾಬರ್‌ನನ್ನು ಕೈ ಬಿಡಲಾಗಿದೆ ಎನ್ನಲಾಗಿತ್ತು. ಆದರೆ ಈ ವರದಿಯನ್ನು ಪಾಕ್ ತಂಡದ ನೂತನ ನಾಯಕ ಶಾಹೀನ್ ಶಾ ಅಫ್ರಿದಿ ಅಲ್ಲೆಗೆಳೆದಿದ್ದಾರೆ. ಪಾಕಿಸ್ತಾನ್ ಏಕದಿನ ತಂಡದಿಂದ ಬಾಬರ್ ಆಝಂ ಅವರನ್ನು ಕೈ ಬಿಟ್ಟಿಲ್ಲ. ಬದಲಾಗಿ 2027ರ ಏಕದಿನ ವಿಶ್ವಕಪ್‌ಗೂ ಮುನ್ನ ಯುವ ಆಟಗಾರರಿಗೆ ಅವಕಾಶ ನೀಡಲು ಅವರನ್ನು ಹೊರಗಿಡಲಾಗಿದೆ ಎಂದು ಶಾಹೀನ್ ಶಾ ಅಫ್ರಿದಿ ಹೇಳಿದ್ದಾರೆ. ಅಂದರೆ ಬಾಬರ್ ಆಝಂ ಯಾವಾಗ ಬೇಕಿದ್ದರೂ ತಂಡಕ್ಕೆ ಮರಳಬಹುದು. ಸದ್ಯ ಅವರಿಗೆ ವಿಶ್ರಾಂತಿ ನೀಡಲಾಗಿದೆ ಅಷ್ಟೇ ಎಂದು ಶಾಹೀನ್ ಶಾ ಅಫ್ರಿದಿ ಸ್ಪಷ್ಟನೆ ನೀಡಿದ್ದಾರೆ. ಆದರೆ ಅತ್ತ ಪಾಕ್ ತಂಡದ ಕೋಚ್ ಮೈಕ್ ಹೆಸ್ಸನ್ ಅವರು ಬಾಬರ್ ಆಝಂ ಅವರ ಬ್ಯಾಟಿಂಗ್ ಹಾಗೂ ಸ್ಟ್ರೈಕ್ ರೇಟ್‌ನಿಂದ ಸಂತುಷ್ಟರಾಗಿಲ್ಲ. ಹೀಗಾಗಿಯೇ ಟಿ20 ವಿಶ್ವಕಪ್‌ನ ಕೊನೆಯ ಪಂದ್ಯಗಳ ವೇಳೆ ಬಾಬರ್‌ನನ್ನು ಪ್ಲೇಯಿಂಗ್ ಇಲೆವೆನ್‌ನಿಂದ ಹೊರಗಿಡಲಾಗಿತ್ತು.

ಇದೀಗ ಬಾಂಗ್ಲಾದೇಶ್ ವಿರುದ್ಧದ ಏಕದಿನ ಸರಣಿಯಿಂದಲೂ ಅವರನ್ನು ಕೈ ಬಿಡಲಾಗಿದೆ.

ಇತ್ತ ಪಾಕಿಸ್ತಾನ್ ಕ್ರಿಕೆಟ್ ಬೋರ್ಡ್‌ನ ಈ ನಡೆಯ ವಿರುದ್ಧ ಅಭಿಮಾನಿಗಳಿಂದ ಆಕ್ರೋಶ ವ್ಯಕ್ತವಾಗಿದೆ. ಏಕೆಂದರೆ ಬಾಬರ್ ಆಝಂ ಏಕದಿನ ಕ್ರಿಕೆಟ್‌ನಲ್ಲಿ ಉತ್ತಮ ಪ್ರದರ್ಶನ ನೀಡುತ್ತಾ ಬಂದಿದ್ದಾರೆ. ಅವರು ಟಿ20 ಕ್ರಿಕೆಟ್‌ನಲ್ಲಿ ಮಾತ್ರ ಕಳಪೆ ಪ್ರದರ್ಶನ ನೀಡಿದ್ದಾರೆ. ಹೀಗಾಗಿಯೇ ಟಿ20 ಕ್ರಿಕೆಟ್‌ಗೆ ಬಾಬರ್ ಸೂಕ್ತ ಆಟಗಾರನಲ್ಲ ಎಂಬ ಅಭಿಪ್ರಾಯಗಳು ಆಗಾಗ್ಗೆ ಕೇಳಿ ಬರುತ್ತಿರುತ್ತವೆ.



## ಬುಮ್ರಾ ಭಾರತ ತಂಡದಿಂದ 18 ತಿಂಗಳುಗಳ ಕಾಲ ಹೊರಗೆ!

## ಒಲಿಂಪಿಕ್ಸ್ ಆಡುವ ಆಸಕ್ತಿ


ಟೀಮ್ ಇಂಡಿಯಾ ಬ್ಯಾಕ್ ಟು ಬ್ಯಾಕ್ ಟಿ20 ವಿಶ್ವಕಪ್ ಗೆಲ್ಲುವಲ್ಲಿ ಜಸ್‌ಪ್ರೀತ್ ಬುಮ್ರಾ ಪ್ರಮುಖ ಪಾತ್ರವಹಿಸಿದ್ದರು. ಇದೀಗ ಬುಮ್ರಾ ಅವರ ಮುಂದಿನ ಗುರಿ ಏಕದಿನ ವಿಶ್ವಕಪ್. ಅಲ್ಲದೆ ಟೆಸ್ಟ್ ವಿಶ್ವ ಚಾಂಪಿಯನ್‌ಶಿಪ್ ಫೈನಲ್. ಇದಕ್ಕಾಗಿ ಬುಮ್ರಾ ಟಿ20 ಕ್ರಿಕೆಟ್‌ನಿಂದ ದೀರ್ಘಾವಧಿಯ ಬ್ರೇಕ್ ತೆಗೆದುಕೊಳ್ಳಲಿದ್ದಾರೆ. ಟೀಮ್ ಇಂಡಿಯಾ ವೇಗಿ ಜಸ್‌ಪ್ರೀತ್ ಬುಮ್ರಾ, ಟಿ20 ಕ್ರಿಕೆಟ್‌ನಿಂದ 18 ತಿಂಗಳುಗಳ ಕಾಲ ಬ್ರೇಕ್ ತೆಗೆದುಕೊಳ್ಳಲಿದ್ದಾರೆ ಎಂದು ವರದಿಯಾಗಿದೆ. ಮುಂಬರುವ ಏಕದಿನ ವಿಶ್ವಕಪ್‌ಗಾಗಿ ಈ ನಿರ್ಧಾರ ತೆಗೆದುಕೊಳ್ಳುತ್ತಿದ್ದು ಈ ಮೂಲಕ ತಮ್ಮ ಕೆಲಸದ ಹೊರೆಯನ್ನು ಸರಿದೂಗಿಸಲು ನಿರ್ಧರಿಸಿದ್ದಾರೆ. ಇದಕ್ಕಾಗಿ ಭಾರತ ತಂಡದ ದ್ವಿಪಕ್ಷೀಯ ಟಿ20 ಸರಣಿಗಳಿಂದ ಹೊರಗುಳಿಯಲಿದ್ದಾರೆ.

**ಏಕದಿನ ಮತ್ತು ಟೆಸ್ಟ್ ಗಮನ:** ಜಸ್‌ಪ್ರೀತ್ ಬುಮ್ರಾ 2024ರ ಟಿ20 ವಿಶ್ವಕಪ್ ಬಳಿಕ ಸತತ ಟಿ20 ಪಂದ್ಯಗಳನ್ನಾಡಿದ್ದಾರೆ. ಇದಕ್ಕೆ ಮುಖ್ಯ ಕಾರಣ 2026ರ ಟಿ20 ವಿಶ್ವಕಪ್. ಇದೀಗ ಈ ವಿಶ್ವಕಪ್‌ನಲ್ಲಿ ಭಾರತ ತಂಡ ಚಾಂಪಿಯನ್ ಪಟ್ಟ ಅಲಂಕರಿಸಿದೆ. ಅಲ್ಲದೆ ಟೀಮ್ ಇಂಡಿಯಾದ ಮುಂದಿನ ಗುರಿ 2027ರ ಏಕದಿನ ವಿಶ್ವಕಪ್. ಸೌತ್ ಆಫ್ರಿಕಾ, ನಮೀಬಿಯಾ ಹಾಗೂ ಝಿಂಬಾಬ್ವೆ ಜಂಟಿಯಾಗಿ ಆಯೋಜಿಸಲಿರುವ 2027ರ ಏಕದಿನ ವಿಶ್ವಕಪ್‌ಗೆ ಸಿದ್ಧರಾಗಲು ಅವರು ಟೆಸ್ಟ್ ಮತ್ತು ಏಕದಿನ ಪಂದ್ಯಗಳಿಗೆ ಹೆಚ್ಚಿನ ಆದ್ಯತೆ ನೀಡಲು ಜಸ್‌ಪ್ರೀತ್ ಬುಮ್ರಾ ನಿರ್ಧರಿಸಿದ್ದಾರೆ.

**ಒಲಿಂಪಿಕ್ಸ್‌ನಲ್ಲಿ ಕಣಕ್ಕೆ:** ಪ್ರಸ್ತುತ ಮಾಹಿತಿ ಪ್ರಕಾರ, ಜಸ್‌ಪ್ರೀತ್ ಬುಮ್ರಾ ಮುಂದಿನ 18 ತಿಂಗಳುಗಳ ಕಾಲ ಭಾರತದ ಪರ ದ್ವಿಪಕ್ಷೀಯ ಟಿ20 ಸರಣಿಗಳನ್ನು ಆಡುವುದಿಲ್ಲ. ಆದಾಗ್ಯೂ, 2028ರ ಲಾಸ್ ಏಂಜಲೀಸ್ ಒಲಿಂಪಿಕ್ಸ್‌ನಲ್ಲಿ ಆಡುವ ಆಸಕ್ತಿಯನ್ನು ವ್ಯಕ್ತಪಡಿಸಿದ್ದಾರೆ. ಹೀಗಾಗಿ ಮುಂಬರುವ ಒಲಿಂಪಿಕ್ಸ್ ತಂಡದಲ್ಲಿ ಬುಮ್ರಾ ಅವರನ್ನು ಎದುರು ನೋಡಬಹುದು.

**ನಿವೃತ್ತಿಯಿಲ್ಲ:** ಭಾರತ ಟಿ20 ತಂಡದಿಂದ 18 ತಿಂಗಳುಗಳ ಕಾಲ ಹೊರಗುಳಿದರೂ ಜಸ್‌ಪ್ರೀತ್ ಬುಮ್ರಾ ಟಿ20 ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ನಿವೃತ್ತಿ ಘೋಷಿಸುತ್ತಿಲ್ಲ. ಬದಲಿಗೆ ಕೇವಲ ತಮ್ಮ ಫಿಟ್‌ನೆಸ್ ಕಾಪಾಡಿಕೊಳ್ಳಲು ಈ ವಿರಾಮ ಪಡೆಯುತ್ತಿದ್ದಾರೆ ಎಂದು ಸ್ಪಷ್ಟಪಡಿಸಲಾಗಿದೆ.

**ಐಪಿಎಲ್ ಕಥೆಯೇನು:** ಟಿ20 ಅಂತಾರಾಷ್ಟ್ರೀಯ ಕ್ರಿಕೆಟ್‌ನಿಂದ ಹೊರಗುಳಿದರೂ ಜಸ್‌ಪ್ರೀತ್ ಬುಮ್ರಾ ಇಂಡಿಯನ್ ಪ್ರೀಮಿಯರ್ ಲೀಗ್‌ನಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಸದ್ಯ ಮುಂಬೈ ಇಂಡಿಯನ್ಸ್ ತಂಡದಲ್ಲಿರುವ ಬುಮ್ರಾ ಈ ಬಾರಿಯ ಐಪಿಎಲ್ ಟೂರ್ನಿಯಲ್ಲೂ ಕಣಕ್ಕಿಳಿಯಲಿದ್ದಾರೆ. ಅಂದರೆ ಬುಮ್ರಾ ಬ್ರೇಕ್ ತೆಗೆದುಕೊಳ್ಳುತ್ತಿರುವುದು ಭಾರತ ತಂಡದ ಟಿ20 ಸರಣಿಗಳಿಂದ ಮಾತ್ರ. ಅಲ್ಲದೆ 2027ರ ಏಕದಿನ ವಿಶ್ವಕಪ್ ಹಾಗೂ ಟೆಸ್ಟ್ ಚಾಂಪಿಯನ್‌ಶಿಪ್ ಫೈನಲ್ ಬಳಿಕ ಅವರು ಮತ್ತೆ ಭಾರತ ಟಿ20 ತಂಡದಲ್ಲಿ ಕಾಣಿಸಿಕೊಳ್ಳಲಿದ್ದಾರೆ.




## ಯಾರೂ ಸಹ ನನಗೆ ಕರೆ ಮಾಡಿಲ್ಲ

ಟೀಮ್ ಇಂಡಿಯಾ ಗೆಲುವಿನ ನಂತರ ಸುದ್ದಿ ಸಂಸ್ಥೆಗೆ ನೀಡಿದ ಸಂದರ್ಶನದಲ್ಲಿ ಮಾತನಾಡಿದ ಗೌತಮ್ ಗಂಭೀರ್, ನ್ಯೂಝಿಲೆಂಡ್ ಮತ್ತು ಸೌತ್ ಆಫ್ರಿಕಾ ವಿರುದ್ಧದ ತವರಿನಲ್ಲಿ ನಡೆದ ಟೆಸ್ಟ್ ಸರಣಿಯಲ್ಲಿ ಟೀಮ್ ಇಂಡಿಯಾ ಸೋಲು ನನ್ನ ಕಾರ್ಯಾವಧಿಯ ಕೆಟ್ಟ ಘಳಿಗೆ. ತವರಿನಲ್ಲಿನ ಎರಡು ಸೋಲುಗಳನ್ನು ನಾನು ಎಂದಿಗೂ ಮರೆಯುವುದಿಲ್ಲ. ಈ ಹೀನಾಯ ಸೋಲಿನ ಬಳಿಕ ನನಗೆ ಯಾರೂ ಸಹ ಕರೆ ಮಾಡಿರಲಿಲ್ಲ. ಆದರೆ ಜಯ್ ಶಾ ಒಬ್ಬರು ಮಾತ್ರ ಕರೆ ಮಾಡಿ ಮಾತನಾಡಿದ್ದರು.

ಮುಂಬೈನಲ್ಲಿ ನ್ಯೂಝಿಲೆಂಡ್ ವಿರುದ್ಧ ಸೋತ ಬಳಿಕ ಜಯ್ ಶಾ ಕರೆ ಮಾಡಿದ್ದರು. ನಾನು ಸೋಲಿನಿಂದ ಸಂಪೂರ್ಣ ಕುಗ್ಗಿದ್ದ ಸಮಯ ಅದು. ಈ ವೇಳೆ ಅವರು ಕರೆ ಮಾಡಿ ನೀಡಿದ ಬೆಂಬಲ ನಿಜಕ್ಕೂ ಸ್ಮರಣೀಯ. ಧೈರ್ಯವಾಗಿರಿ, ನಾವು ನಿಮ್ಮೊಂದಿಗಿದ್ದೇವೆ ಎಂದು ಅವರು ಬೆಂಬಲ ಸೂಚಿಸಿದ್ದರು.

ಇದಾದ ಬಳಿಕ ಸೌತ್ ಆಫ್ರಿಕಾ ವಿರುದ್ಧ ಕೂಡ ಸೋತಾಗ ಜಯ್ ಶಾ ಕರೆ ಮಾಡಿ ಸಮಾಧಾನ ಪಡಿಸಿದ್ದರು. ಅಷ್ಟೇ ಅಲ್ಲದೆ ಸಂಪೂರ್ಣ ಬೆಂಬಲ ವ್ಯಕ್ತಪಡಿಸಿ, ಹೊಸ ಉತ್ಸಾಹ ತುಂಬಿದ್ದರು. ಇದನ್ನು ನಾನು ಯಾವಾಗಲೂ ನೆನಪಿಸಿಕೊಳ್ಳುತ್ತೇನೆ. ಏಕೆಂದರೆ ಇಂದು ಟಿ20 ವಿಶ್ವಕಪ್ ಗೆಲ್ಲಲು ಅಥವಾ ಕೋಚ್ ಆಗಿ ಮುಂದುವರೆಯಲು ಜಯ್ ಶಾ ನೀಡಿದ ಬೆಂಬಲವೇ ಕಾರಣ. ಅಷ್ಟೇ ಅಲ್ಲದೆ ನಾನು ಟೀಮ್ ಇಂಡಿಯಾ ಮುಖ್ಯ ಕೋಚ್ ಹುದ್ದೆ ಅಲಂಕರಿಸಲು ಕೂಡ ಅವರೇ ಕಾರಣಕರ್ತರು.ಐಪಿಎಲ್ (2024) ನಲ್ಲಿ ಮುಂಬೈ v/s ಕೆಕೆಆರ್ ಪಂದ್ಯದ ಸಮಯದಲ್ಲಿ ಜಯ್ ಭಾಯ್ (ಜಯ್ ಶಾ) ಅವರಿಂದ ನನಗೆ ಕರೆ ಬಂದಿತ್ತು. ಹೀಗೆ ಕರೆ ಮಾಡಿ ಅವರು ಹೇಳಿದ್ದು, 'ನಾನು ನಿಮಗೆ ಒಂದು ಆಫರ್ ನೀಡಲು ಬಯಸುತ್ತೇನೆ, ಆದರೆ ನೀವು ನಿರಾಕರಿಸುಂತಿಲ್ಲ. ಇದಾದ ಬಳಿಕ ಅವರು ನೀವು ಟೀಮ್ ಇಂಡಿಯಾದ ಮುಖ್ಯ ಕೋಚ್ ಆಗಬೇಕು' ಎಂದರು. ಇದನ್ನು ಕೇಳಿ ನನಗೆ ಆಶ್ಚರ್ಯವಾಯಿತು ಏಕೆಂದರೆ ಆ ಸಮಯದಲ್ಲಿ ನಾನು ಅದಕ್ಕೆ ಸಿದ್ಧನಾಗಿರಲಿಲ್ಲ. ಟೀಮ್ ಇಂಡಿಯಾದ ಮುಖ್ಯ ಕೋಚ್ ಆಗುವುದು ನನಗೆ ದೊಡ್ಡ ಗೌರವವಾಗಿತ್ತು. ಏಕೆಂದರೆ ಕೆಲವೇ ಕೆಲವು ಮಾಜಿ ಆಟಗಾರರಿಗೆ ಮಾತ್ರ ಡ್ರೆಸ್ಸಿಂಗ್ ಕೋಣೆಗೆ ಕೋಚ್ ಆಗಿ ಮರಳುವ ಅವಕಾಶ ದೊರೆಯುತ್ತದೆ.

ಅಂತಹದೊಂದು ಅವಕಾಶ ನನ್ನ ಮುಂದಿತ್ತು. ಆದರೆ ನನ್ನಲ್ಲಿ ಮುಖ್ಯ ಕೋಚ್ ಅನುಭವ ಇರಲಿಲ್ಲ. ಇದಾಗ್ಯೂ ಜಯ್ ಶಾ ಅವರು ನನ್ನ ಮೇಲೆ ನಂಬಿಕೆ ಇರಿಸಿದ್ದರು. ಈ ನಂಬಿಕೆಗೆ ನಾನು ಅವರಿಗೆ ಕೃತಜ್ಞತೆ ಸಲ್ಲಿಸಲೇಬೇಕು. ಏಕೆಂದರೆ ಇದೀಗ ಟಿ20 ವಿಶ್ವಕಪ್ ಗೆದ್ದಿದ್ದೇವೆ. ಆದರೆ ಅಂದು ನನ್ನನ್ನು ನಂಬಿದ್ದು ಜಯ್ ಶಾ ಮಾತ್ರ. ನ್ಯೂಝಿಲೆಂಡ್, ಸೌತ್ ಆಫ್ರಿಕಾ ವಿರುದ್ಧ ತವರಿನಲ್ಲಿ ಟೆಸ್ಟ್ ಸರಣಿ ಸೋತಾಗಲೂ ಅವರು ಮಾತ್ರ ನನ್ನ ಮೇಲೆ ನಂಬಿಕೆಯಿಟ್ಟಿದ್ದರು.




Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966